09 May 2026 Saturday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ
info.varthaman@gmail.com

**ಭಾವನಾಂತರಂಗ**
ಬೇರೆಯವರ ಬೆಳವಣಿಗೆಗೆ ಅಡ್ಡಿ ಪಡಿಸುವವರು ತಾವೂ ಬೆಳೆಯಲಾರರು!
» ಸ್ನೇಹಾ ಆನಂದ್


ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ಆರ್‌ಒ ಘಟಕಗಳನ್ನು ಅಳವಡಿಸಿ: ಅರುಣ್ ಕುಮಾರ್ — ಪುಟ ಸಂ. 2



ಆರೋಗ್ಯ, ಸಂಸ್ಕೃತಿ ಕಾಪಾಡುವ ಪ್ರಯತ್ನ ಅನನ್ಯ: ಸುತ್ತೂರು ಸ್ವಾಮೀಜಿ — ಪುಟ ಸಂ. 3


ಮೈಸೂರು ವಿವಿ ಸಿಂಡಿಕೇಟ್‌ನ 3ನೇ ಸಾಮಾನ್ಯ ಸಭೆ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್
VARTHAMAN | Volume: 69 | Issue: 166 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ರಾಜ್ಯ ಬಿಜೆಪಿಗೆ ಬಿ.ಎಸ್.ಯಡಿಯೂರಪ್ಪ 'ಟಾನಿಕ್' ನೀಡುವರೇ?

» ಕೆ.ಎನ್.ನಾಗಸುಂದ್ರಪ್ಪ ಮೈಸೂರು



ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುವಂತಾಗಲು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ 'ಟಾನಿಕ್' ನೀಡುವರೇ ಎಂಬ ಚರ್ಚೆ ಈಗ ರಾಜಕೀಯ ವಲಯದಲ್ಲಿ ಜೋರಾಗಿದೆ. ಯಡಿಯೂರಪ್ಪ ರಾಜಕೀಯ ಕ್ಷೇತ್ರಕ್ಕೆ ಕಾಲಿಟ್ಟ 50ನೇ ವರ್ಷವನ್ನು ಚಿತ್ರದುರ್ಗದಲ್ಲಿ ಅದ್ಧೂರಿಯಾಗಿ ಆಚರಿಸಲಾಗುತ್ತಿರುವುದು ಇದಕ್ಕೆ ಸಾಕ್ಷಿ. ಯಾರು ಏನೇ ಹೇಳಿದರೂ ರಾಜ್ಯದಲ್ಲಿ ಯಡಿಯೂರಪ್ಪ ಶ್ರಮವಿಲ್ಲದೆ ಬಿಜೆಪಿ ಅಧಿಕಾರಕ್ಕೆ ಬರುವುದು ಅಸಾಧ್ಯ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಈಗಾಗಲೇ ಬಿಜೆಪಿ ಹೈಕಮಾಂಡ್‌ಗೆ ಮನವರಿಕೆ ಆಗಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಮಕಾಡೆ ಮಲಗಿದ ನಂತರ ಯಡಿಯೂರಪ್ಪ ಅವರ ಅನಿವಾರ್ಯತೆ ಅರಿವು ಆಗಿದೆ. ಹೀಗಾಗಿಯೇ ಮರುವರ್ಷದ ಲೋಕಸಭೆ ಚುನಾವಣೆಯನ್ನು ಗುರಿಯಾಗಿಟ್ಟುಕೊಂಡು ಯಡಿಯೂರಪ್ಪ ಅವರನ್ನು ರಾಷ್ಟ್ರೀಯ ಸಂಸದೀಯ ಮಂಡಲಿ ಸದಸ್ಯರನ್ನಾಗಿ ಮಾಡಲಾಗಿತ್ತು. ಆನಂತರ ಅವರ ಪುತ್ರ ವಿಜಯೇಂದ್ರ ಅವರಿಗೆ ರಾಜ್ಯಾಧ್ಯಕ್ಷ ಪಟ್ಟ ಕಟ್ಟಲಾಯಿತು. ವಿಜಯೇಂದ್ರ ಅವರನ್ನು ಅಧಿಕಾರದಿಂದ ಕೆಳಗಿಳಿಸಬೇಕೆಂದು ಪಕ್ಷದೊಳಗಿನ ವಿರೋಧಿ ಬಣ ಎಷ್ಟೇ ತಿಣುಕಾಡಿದರೂ ಸಾಧ್ಯವಾಗಲಿಲ್ಲ. ಬಿಜೆಪಿಗೆ ಯಡಿಯೂರಪ್ಪ ಅವರ ಅನಿವಾರ್ಯತೆ ಕಾರಣದಿಂದಾಗಿಯೇ ವಿಜಯೇಂದ್ರ ಅಧಿಕಾರದಲ್ಲಿ ಉಳಿದುಕೊಂಡಿದ್ದಾರೆ ಎಂದರೆ ತಪ್ಪಿಲ್ಲ.

2013ರ ವಿಧಾನಸಭೆ ಚುನಾವಣೆಯಲ್ಲಿ ಕೆಜೆಪಿ ಪಕ್ಷ ಕಟ್ಟಿ ಅಖಾಡಕ್ಕೆ ಇಳಿದಿದ್ದ ಯಡಿಯೂರಪ್ಪ ಅವರು ಬಿಜೆಪಿಯ ಹೀನಾಯ ಸೋಲಿಗೆ ಕಾರಣವಾಗಿದ್ದರು. ಆನಂತರ ಒಂದೇ ವರ್ಷಕ್ಕೆ ಬರಲಿದ್ದ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಹೈಕಮಾಂಡ್ ಯಡಿಯೂರಪ್ಪ ಅವರನ್ನು ಮತ್ತೆ ಪಕ್ಷಕ್ಕೆ ಸ್ವಾಗತಿಸಿತ್ತು. ಮುಂದಿನ 2018ರ ಚುನಾವಣೆಯಲ್ಲಿ 'ಆಪರೇಷನ್ ಕಮಲ'ದ ಮೂಲಕ ಬಿಜೆಪಿಯನ್ನು ಯಡಿಯೂರಪ್ಪ ಅಧಿಕಾರಕ್ಕೆ ತಂದು ಮುಖ್ಯಮಂತ್ರಿ ಆಗಿದ್ದರು. ಬದಲಾದ ರಾಜಕೀಯ ಸನ್ನಿವೇಶದಲ್ಲಿ ಅವರು ಸಿಎಂ ಸ್ಥಾನ ಪುಟ 2ಕ್ಕೆ

## ಮೂವರಿಗಷ್ಟೇ ಜನನಾಯಕರ ಪಟ್ಟ!

ರಾಜ್ಯದ ಜನರು ಸದ್ಯಕ್ಕೆ ಮೂವರನ್ನು ಮಾತ್ರ ಜನನಾಯಕರು ಎಂದು ಒಪ್ಪಿಕೊಂಡಿದ್ದಾರೆ. ಜೆಡಿಎಸ್ ನಲ್ಲಿ ಎಚ್.ಡಿ.ದೇವೇಗೌಡ, ಕಾಂಗ್ರೆಸ್‌ನ ಸಿದ್ದರಾಮಯ್ಯ ಮತ್ತು ಬಿಜೆಪಿಯ ಬಿ.ಎಸ್.ಯಡಿಯೂರಪ್ಪ ಅವರ ಹೋರಾಟದ ಶಕ್ತಿಯನ್ನು ಜನರು ಗುರುತಿಸಿದ್ದಾರೆ. ಈ ಮೂವರಿಗೆ ಆಯಾ ಸಮುದಾಯದವರು ಮಾತ್ರವಲ್ಲದೆ ಸಮಯಕ್ಕೆ ತಕ್ಕಂತೆ ಇತರ ಸಮುದಾಯಗಳು ಸಹ ಒಲವು ತೋರಿಸಿವೆ. ಅಲ್ಲದೆ, ಎಂಥದೇ ಸಂದರ್ಭದಲ್ಲಿ ಬೀದಿಗಿಳಿದು ಹೋರಾಟ ಮಾಡುವ ಕೆಚ್ಚು ಅವರಿಗೆ ಇದೆ ಎಂಬುದು ಈಗಾಗಲೇ ಸಾಬೀತಾಗಿದೆ. ಇವರ ಅನಿವಾರ್ಯತೆ ರಾಷ್ಟ್ರೀಯ ಪಕ್ಷಗಳ ಹೈಕಮಾಂಡ್ ನಾಯಕರಿಗೂ ತಿಳಿದಿದೆ.

ರಾಜ್ಯ ರಾಜಕೀಯದಲ್ಲಿ ಎಲ್ಲಾ ಮೂರು ಪ್ರಮುಖ ಪಕ್ಷಗಳಲ್ಲಿ ನೂರಾರು ಮಂದಿ ನಾಯಕರು ಇರಬಹುದು. ಇವರಲ್ಲಿ ಸಾಕಷ್ಟು ನಾಯಕರು ತಮ್ಮ ಕ್ಷೇತ್ರಕ್ಕಷ್ಟೇ ಸೀಮಿತರಾಗಿದ್ದಾರೆ. ಪಕ್ಕದ ಕ್ಷೇತ್ರದಲ್ಲಿಯೂ ತಮ್ಮ ಛಾಪು ಮೂಡಿಸುವ ತಾಕತ್ತು ಸಹ ಹಲವರಿಗೆ ಇಲ್ಲ. ಕೆಲವರಿಗಷ್ಟೇ ಜಿಲ್ಲೆಯ ರಾಜಕಾರಣದ ಮೇಲೆ ಪುಟ 2ಕ್ಕೆ

## ಇಂದು ಸುವೇಂದು ಪ್ರಮಾಣ

**ಕೋಲ್ಕತ್ತಾ:** ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿರುವ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿ ಹಿರಿಯ ನಾಯಕ ಸುವೇಂದು ಅಧಿಕಾರಿ ಅವರನ್ನು ಶುಕ್ರವಾರ ಆಯ್ಕೆ ಮಾಡಲಾಗಿದೆ. ಈ ಮೂಲಕ ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಸುವೇಂದು ಅಧಿಕಾರಿ ಶನಿವಾರ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಕೋಲ್ಕತ್ತಾದಲ್ಲಿ ಶುಕ್ರವಾರ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಸುವೇಂದು ಅಧಿಕಾರಿ ಅವರ ಹೆಸರನ್ನು ಪ್ರಸ್ತಾಪಿಸಲಾಯಿತು. ಎಲ್ಲಾ ಬಿಜೆಪಿ ಶಾಸಕರು ಅದನ್ನು ಅನುಮೋದಿಸಿದರು. ನಂತರ ಪಕ್ಷದ ಹಿರಿಯ ನಾಯಕರ ಸಮ್ಮುಖದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಧಿಕೃತವಾಗಿ ಸುವೇಂದು ಅಧಿಕಾರಿ ಅವರ ಹೆಸರನ್ನು ಘೋಷಿಸಿದರು.

## ಬಹುಮತವಿದ್ದರೆ ಡಿಎಂಕೆ– ಎಐಎಡಿ– ಎಂಕೆಗೂ ಅವಕಾಶ

**ಚೆನ್ನೈ:** ಬಹುಮತದ ಜೊತೆಗೆ ಡಿಎಂಕೆ–ಎಐಎಡಿಎಂಕೆ ಮೈತ್ರಿ ಕೂಟ ಬಂದರೂ ಸರ್ಕಾರ ರಚನೆಗೆ ಅವಕಾಶ ನೀಡಬೇಕು. ಇದು ಪ್ರಜಾಪ್ರಭುತ್ವ ವ್ಯವಸ್ಥೆಯ ಭಾಗ. ಅದರಲ್ಲಿ ಯಾವುದೇ ತಪ್ಪಿಲ್ಲ ಅಂತಿಮವಾಗಿ ಸಂಖ್ಯೆ ಮುಖ್ಯ ಎಂದು ತಮಿಳುನಾಡು ರಾಜ್ಯಪಾಲ ಆರ್.ವಿ,ಅರ್ಲೇಕರ್ ಹೇಳಿದರು.

ಟಿವಿಕೆ ಮುಖ್ಯಸ್ಥ ದಳಪತಿ ವಿಜಯ್ 2 ಬಾರಿ ರಾಜ್ಯಪಾಲರನ್ನು ಭೇಟಿಯಾಗಿ ಹಕ್ಕು ಮಂಡಿಸಿದ್ದರು. ಆದರೆ ಬಹುಮತ ಸಾಬೀತು ಪಡಿಸದ ಹಿನ್ನೆಲೆ ರಾಜ್ಯಪಾಲರು ವಿಜಯ್ ಮನವಿ ತಿರಸ್ಕರಿಸಿದ್ದರು. ಈ ನಡೆಗೆ ಗವರ್ನರ್ ವಿರುದ್ಧ ಜನಾಕ್ರೋಶ ವ್ಯಕ್ತವಾಗುತ್ತಿದ್ದಂತೆ ಅವರು ಪ್ರತಿಕ್ರಿಯೆ ನೀಡಿದ್ದಾರೆ.

ಯಾವ ಪಕ್ಷ ಸರ್ಕಾರವನ್ನ ರಚಿಸುತ್ತೇವೆ ಎಂದು ಮುಂದೆ ಬರುತ್ತದೆಯೋ ಆ ಪಕ್ಷಕ್ಕೆ ಬಹುಮತ ಇದೆ ಎನ್ನುವುದನ್ನು ನನಗೆ ಮನವರಿಕೆ ಮಾಡಬೇಕು. ಇದಕ್ಕಿಂತ ಹೆಚ್ಚು ನಾನು ಏನು ಕೇಳಿಲ್ಲ. ಯಾವುದೇ ಒಂದು ಪಕ್ಷ ಸರ್ಕಾರ ರಚಿಸಲು ಬಂದಾಗ ಅವರು ಬಹುಮತ ಇರುವ ಬಗ್ಗೆ ಖಾತ್ರಿಪಡಿಸಬೇಕು. ನಾನು ತಲೆ ಎಣಿಕೆಯನ್ನು ಕೇಳ್ತಿಲ್ಲ. ಅದು ನನ್ನ ಅಧಿಕಾರ ಅಲ್ಲ. ಬಹುಮತವನ್ನ ವಿಧಾನಸಭೆಯಲ್ಲಿ ಸಾಬೀತುಪಡಿಸಲಿ ಎಂದು ಹೇಳಿದರು.

ಬಹುಮತದ ಜೊತೆಗೆ ಯಾರೇ ಬಂದರೂ (ಡಿಎಂಕೆ– ಎಐಎಡಿಎಂಕೆ) ಸರ್ಕಾರ ರಚನೆಗೆ ಅವಕಾಶ ನೀಡಬೇಕು. ಇದು ಪ್ರಜಾಪ್ರಭುತ್ವ ವ್ಯವಸ್ಥೆಯ ಭಾಗ. ಸಂಖ್ಯೆಗಳಿದ್ದರೇ ನಾನು ನಾಳೆಯೇ ಪ್ರಮಾಣ ವಚನ ಬೋಧಿಸಲು ಸಿದ್ಧವಿದ್ದೇನೆ. 118 ಸಂಖ್ಯೆಯೊಂದಿಗೆ ಟಿವಿಕೆ ಹೊರತಾಗಿ ಯಾರೂ ಬರದಿದ್ದರೆ ಏನು ಮಾಡಬಹುದು ಯೋಚಿಸಬೇಕು. ಸಂವಿಧಾನದ ಆಯ್ಕೆಗಳನ್ನು ಪರಿಶೀಲಿಸಬೇಕು ಎಂದು ತಿಳಿಸಿದ್ದಾರೆ.

## ಪೆನ್ನಾರ್ ನದಿ ವಿವಾದ: ನ್ಯಾಯಮಂಡಳಿ ರಚನೆಗೆ ಸೂಚನೆ



**ನವದೆಹಲಿ:** ಪೆನ್ನಾರ್ ನದಿ ನೀರು ಹಂಚಿಕೆಗೆ ಸಂಬಂಧಿಸಿದಂತೆ ಕರ್ನಾಟಕ ಮತ್ತು ತಮಿಳುನಾಡು ನಡುವಿನ ವಿವಾದವನ್ನು ಬಗೆಹರಿಸಲು ಅಂತರರಾಜ್ಯ ಜಲ ನ್ಯಾಯಮಂಡಳಿ ಸ್ಥಾಪಿಸಲು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಆರು ತಿಂಗಳ ಅವಕಾಶ ನೀಡಿದೆ.

ನ್ಯಾಯಾಧೀಶರಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಪೀಠವು ನ್ಯಾಯಮಂಡಳಿ ರಚಿಸಲು ಆರು ತಿಂಗಳ ಕಾಲಾವಕಾಶ ಕೋರಿ ಕೇಂದ್ರವು ಸಲ್ಲಿಸಿದ ಅರ್ಜಿಯನ್ನು ಪುರಸ್ಕರಿಸಿತು. ಈ ವಿಷಯದಲ್ಲಿ ಸರ್ಕಾರ ತ್ವರಿತ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಪೀಠ ಹೇಳಿತು.

ಪೆನ್ನಾರ್/ಪೆನ್ನೈಯಾರ್ ಅಂತರರಾಜ್ಯ ನದಿ ಕರ್ನಾಟಕದಲ್ಲಿ ಮೇಲ್ಭಾಗ ಮತ್ತು ತಮಿಳುನಾಡು ನದಿಯ ಕೆಳಭಾಗದಲ್ಲಿದೆ. ವಿಚಾರಣೆಯ ಸಮಯದಲ್ಲಿ, ಕರ್ನಾಟಕ ಸರ್ಕಾರದ ಪರವಾಗಿ ಹಾಜರಾದ ವಕೀಲ ನಿಶಾಂತ್ ಪಾಟೀಲ್, ವಾಸ್ತವವಾಗಿ ಇದು ಬಹಳ ಸಣ್ಣ ವಿಷಯ ಎಂದು ಅರ್ಜಿ ಸಲ್ಲಿಸಿದರು.

# ವಿಜಯ್‌ಗೆ 'ಮ್ಯಾಜಿಕ್ ನಂಬರ್'

## ಟಿವಿಕೆಗೆ ಸಿಪಿಐ, ಸಿಪಿಎಂ, ವಿಸಿಕೆ, ಕಾಂಗ್ರೆಸ್ ಬೆಂಬಲ ಘೋಷಣೆ

**ಚೆನ್ನೈ:** ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ದಳಪತಿ ವಿಜಯ್ ಅವರಿಗೆ ಅಧಿಕಾರ ಹಿಡಿಯಲು ಕೊನೆಗೂ ಮ್ಯಾಜಿಕ್ ನಂಬರ್ ಸಿಕ್ಕಿದೆ. ಕಾಂಗ್ರೆಸ್ ನಂತರ ಸಿಪಿಐ ಮತ್ತು ವಿಸಿಕೆ ಸಹ ಬೆಂಬಲ ಘೋಷಿಸಿವೆ. ಹೀಗಾಗಿ ದಳಪತಿ ವಿಜಯ್ ತಮಿಳುನಾಡಿನ ನೂತನ ಮುಖ್ಯಮಂತ್ರಿ ಆಗಲಿದ್ದಾರೆ.

ಸರ್ಕಾರ ರಚನೆಗೆ ವಿಜಯ್ ನೇತೃತ್ವದ ಟಿವಿಕೆಗೆ ಸಿಪಿಐ ಶುಕ್ರವಾರ ಬೇಷರತ್ ಬೆಂಬಲ ಘೋಷಿಸಿದೆ. ಇದರ ಬೆನ್ನಲ್ಲೇ ವಿಸಿಕೆ ಸಹ ಟಿವಿಕೆಗೆ ಬೆಂಬಲ ಘೋಷಿಸಿ ರಾಜ್ಯಪಾಲರಿಗೆ ಪತ್ರ ನೀಡಿದೆ. ಇಂದು ಸುದೀರ್ಘ ಚರ್ಚೆ ನಂತರ, ಎಡಪಕ್ಷ (ಸಿಪಿಐ) ಟಿವಿಕೆಗೆ ಬೆಂಬಲ ನೀಡಲು ನಿರ್ಧರಿಸಿದೆ. ಬೇಷರತ್ತಾದ ಬೆಂಬಲ ಬೆಂಬಲ ಪತ್ರವನ್ನು ನೀಡಿದೆ. ಈ ಪತ್ರವನ್ನು ತಮಿಳುನಾಡು ರಾಜ್ಯಪಾಲ ಆರ್.ವಿ.ಅರ್ಲೇಕರ್ ಅವರಿಗೆ ಕಳುಹಿಸಲಾಗಿದೆ.



234 ಸದಸ್ಯ ಬಲದ ತಮಿಳುನಾಡು ವಿಧಾನಸಭೆಯಲ್ಲಿ ಸಿಪಿಐ ಇಬ್ಬರು ಶಾಸಕರನ್ನು ಹೊಂದಿದೆ. ಟಿವಿಕೆ ಒಟ್ಟು 107, ಸಿಪಿಐ 2, ಸಿಪಿಎಂ 2, ವಿಸಿಕೆ 2, ಕಾಂಗ್ರೆಸ್ 5 ಐದು ಸೇರಿ ಒಟ್ಟು 118ರ ಸಂಖ್ಯೆಯನ್ನು ತಲುಪಿದೆ.

## ಸಿಪಿಐ ಜೊತೆ ಖರ್ಗೆ ಚರ್ಚೆ

ನವದೆಹಲಿ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಿಪಿಐ ಪ್ರಧಾನ ಕಾರ್ಯದರ್ಶಿ ಡಿ ರಾಜಾ ಅವರೊಂದಿಗೆ ಮಾತುಕತೆ ನಡೆಸಿದರು. ತಮಿಳುನಾಡಿನಲ್ಲಿ ಜಾತ್ಯತೀತ ಸರ್ಕಾರ ರಚನೆಗೆ ಟಿವಿಕೆಯನ್ನು ಬೆಂಬಲಿಸುವಂತೆ ಒತ್ತಾಯಿಸಿದ್ದಾರೆ. ಬಿಜೆಪಿಗೆ ಹಿಂಬಾಗಿಲ ಮೂಲಕ ಅಧಿಕಾರ ಹಿಡಿಯಲು ಅವಕಾಶ ಸಿಗದಂತೆ ಸಿಪಿಐ ಶೀಘ್ರವೇ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಒತ್ತಿ ಹೇಳಲು ಖರ್ಗೆ ರಾಜಾ ಅವರೊಂದಿಗೆ ಮಾತನಾಡಿದ್ದಾರೆ. ಸಿಪಿಐ, ಡಿಎಂಕೆ ಸೇರಿದಂತೆ ಸ್ಥಳೀಯ ಮಿತ್ರಪಕ್ಷಗಳೊಂದಿಗೆ ಸಮಾಲೋಚಿಸಿ ಶೀಘ್ರದಲ್ಲೇ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದಾಗಿ ಎಂದು ರಾಜಾ ತಿಳಿಸಿದ್ದಾರೆ ಎನ್ನಲಾಗಿದೆ. ಡಿಎಂಕೆಯ ದೀರ್ಘಕಾಲದ ಮಿತ್ರ ಪಕ್ಷವಾಗಿರುವ ಕಾಂಗ್ರೆಸ್, ತಮಿಳುನಾಡಿನಲ್ಲಿ ಸರ್ಕಾರ ರಚಿಸಲು ನಟ-ರಾಜಕಾರಣಿ ವಿಜಯ್ ಅವರ ಟಿವಿಕೆಗೆ ಬೆಂಬಲ ಘೋಷಿಸಿತ್ತು. ಡಿಎಂಕೆ ಪಕ್ಷದೊಂದಿಗೆ ಸಂಬಂಧವನ್ನು ಕಡಿದುಕೊಂಡಿತ್ತು. ಐದು ಶಾಸಕರನ್ನು ಹೊಂದಿರುವ ಕಾಂಗ್ರೆಸ್, ಟಿವಿಕೆಗೆ ಬೆಂಬಲ ನೀಡಿದೆ. ಟಿವಿಕೆಗೆ ಬೆಂಬಲ ನೀಡುವ ಕುರಿತು ಶುಕ್ರವಾರ ಇಲ್ಲಿ ಸಭೆ ಸೇರಿದ್ದ ಸಿಪಿಐ ಕಾರ್ಯಕಾರಿ ಸಮಿತಿ ನಿರ್ಧಾರ ಕೈಗೊಂಡಿದೆ.

# ಸುಪ್ರೀಂ ಆದೇಶದಂತೆ ಜಿಬಿಎ ಚುನಾವಣೆ

## ಜೂನ್ 20ರಿಂದ 24ರೊಳಗೆ ಪ್ರಕ್ರಿಯೆ ಪೂರ್ಣ: ಸಿಇಸಿ ಸಂಗ್ರೇಶಿ

**ಬೆಂಗಳೂರು:** ಸುಪ್ರೀಂಕೋರ್ಟ್ ಸೂಚನೆಯಂತೆ ಜೂ.20ರಿಂದ 24ರೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಚುನಾವಣೆಯನ್ನು ನಡೆಸಲಾಗುವುದು ಎಂದು ರಾಜ್ಯ ಮುಖ್ಯ ಚುನಾವಣಾ ಆಯುಕ್ತ ಸಂಗ್ರೇಶಿ ಶುಕ್ರವಾರ ತಿಳಿಸಿದರು.

ಬೆಂಗಳೂರು ಪಂಚ ನಗರಪಾಲಿಕೆಗಳ ಚುನಾವಣೆ ಸಂಬಂಧ ಶುಕ್ರವಾರ ಆಯೋಗದಲ್ಲಿ ಕರೆಯಲಾಗಿದ್ದ ಸಭೆಯ ನಂತರ ಈ ಕುರಿತು ಮಾಹಿತಿ ನೀಡಿದರು. ಜೂನ್ 14ರಿಂದ 24ರ ಒಳಗೆ ಚುನಾವಣೆ ದಿನಾಂಕ ಘೋಷಣೆ ಮಾಡುವಂತೆ ಸೂಚಿಸಿದ್ದೇನೆ ಎಂದು ಹೇಳಿದರು.


ಕಾನೂನು ಪ್ರಕಾರ ರಾಜ್ಯ ಚುನಾವಣಾ ಆಯೋಗವು ಜಿಬಿಎ ಜೊತೆಗೆ ಸಮಾಲೋಚನೆ ನಡೆಸಿ ದಿನಾಂಕ ನಿಗದಿಪಡಿಸಬೇಕಿತ್ತು. ಅದಕ್ಕಾಗಿ ಸಭೆ ನಡೆಸಲಾಗಿದೆ. ಚುನಾವಣಾ ಪ್ರಕ್ರಿಯೆಗೆ ಅಗತ್ಯವಾದ ಎಲ್ಲ ಸಿದ್ಧತೆಗಳು ಪೂರ್ಣಗೊಂಡಿವೆ. ದಿನಾಂಕ ಘೋಷಣೆ ಮಾತ್ರ ಬಾಕಿಯಾಗಿದೆ ಎಂದು ತಿಳಿಸಿದರು.

ಜಿಬಿಎ ವತಿಯಿಂದ ಸ್ವಲ್ಪ ಕಾಲ ಚುನಾವಣೆ ಮುಂದೂಡುವಂತೆ ಮನವಿ ಮಾಡಲಾಗಿತ್ತು. ಆದರೆ, ಜೂನ್ 30ರೊಳಗೆ ಚುನಾವಣೆ ಪೂರ್ಣಗೊಳಿಸಬೇಕೆಂಬ ಸುಪ್ರೀಂ ಕೋರ್ಟ್ ಸ್ಪಷ್ಟ ಆದೇಶ ಇರುವುದರಿಂದ ಮುಂದೂಡುವ ಅಧಿಕಾರ ನನ್ನಗಿಲ್ಲ ಎಂದು ಚುನಾವಣಾ ಆಯುಕ್ತರು ಸ್ಪಷ್ಟಪಡಿಸಿದರು.

ಜೂ.24ರೊಳಗೆ ಸರ್ಕಾರಿ ಪ್ರಾಯೋಜಿತ ಯಾವುದೇ ಕಾರ್ಯಕ್ರಮಗಳಿದ್ದರೆ ಶೀಘ್ರವೇ ಮುಗಿಸಲು ಸೂಚನೆ ನೀಡಿದ್ದೇನೆ. ಚುನಾವಣೆ ದಿನಾಂಕ ಶೀಘ್ರದಲ್ಲೇ ಜಾರಿ ಆಗುವ ಬಗ್ಗೆ ಜಿಬಿಎ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆಂದು ತಿಳಿಸಿದರು.

ಜಿಬಿಎ ನೂರು ಸಮಸ್ಯೆ ಹೇಳಲಿ ಅದಕ್ಕೆ ನಾವು ಕೇರ್ ಮಾಡಲ್ಲ. ಒಂದು ವಾರ ಕಾಯುತ್ತೇನೆ. ಅವರು ಹೇಳಿದರೂ ಬಿಟ್ಟರೂ ನಾನು ಈ ಅವಧಿಯಲ್ಲಿ ಚುನಾವಣೆ ನಡೆಸುತ್ತೇನೆ. ಜೂನ್ 20 ರಿಂದ ಜೂನ್ 24 ರೊಳಗೆ ಚುನಾವಣೆ ನಡೆಸಬೇಕಾಗಿದೆ ಆದರೆ ಯಾವ ದಿನ ಚುನಾವಣೆ ಮಾಡಬೇಕು ಅನ್ನುವುದನ್ನು ಒಂದು ವಾರದಲ್ಲಿ ನಿಗದಿ ಪಡಿಸುತ್ತೇವೆ ಎಂದು ಹೇಳಿದರು.

ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಮಾತನಾಡಿ, ಚುನಾವಣೆಗೆ ಆರ್‌ಒ, ಎಆರ್‌ಒ ಹಾಗೂ ಬಿಎಲ್‌ಒಗಳ ನೇಮಕಾತಿಗೆ ಕ್ರಮ ಕೈಗೊಳ್ಳುವಂತೆ ಚುನಾವಣಾ ಆಯುಕ್ತರು ಸೂಚನೆ ನೀಡಿದ್ದಾರೆ ಅದನ್ನು ಪಾಲಿಸಲಾಗುವುದು ಎಂದು ತಿಳಿಸಿದರು.

## ಬ್ಲ್ಯಾಕ್‌ಮೇಲೋತ್ಸವ: ಯತ್ನಾಳ್

**ಕೊಪ್ಪಳ:** ಬಿಜೆಪಿ ನಾಯಕರನ್ನ ಬ್ಲ್ಯಾಕ್‌ಮೇಲ್ ಮಾಡೋಕೆ ಅಭಿಮಾನೋತ್ಸವ ಮಾಡುತ್ತಿದ್ದಾರೆ. ಇದು ಅಭಿಮಾನೋತ್ಸವ ಅಲ್ಲ, ಬ್ಲ್ಯಾಕ್‌ಮೇಲೋತ್ಸವ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟೀಕಿಸಿದರು.



ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಯಡಿಯೂರಪ್ಪ ಅಭಿಮಾನೋತ್ಸವ ಮಾಡೋಕೆ ಏನ್ ಕೆಲಸ ಮಾಡಿದ್ದಾರೆ. 50 ವರ್ಷ ಒಳ್ಳೆಯ ಕೆಲಸ ಮಾಡಿದ್ದರೆ ಮಾಡಬೇಕು. ಅದಕ್ಕಿಂತ ನೂರು ಪಟ್ಟು ಭ್ರಷ್ಟಾಚಾರ ಮಾಡಿದ್ದಾರೆ. ಅದಕ್ಕೆ ಜೈಲಿಗೆ ಹೋಗಿದ್ದರು. ಸಿದ್ದರಾಮಯ್ಯ ಜೊತೆ ಅಡ್ಜಸ್ಟ್‌ಮೆಂಟ್ ಇರೋದಕ್ಕೆ ಹೊರಗಿದ್ದಾರೆ. ಇಲ್ಲಾಂದ್ರೆ ಜೈಲಲ್ಲಿ ಇರ್ತಿದ್ದರು. ಇದೀಗ ಬಿಜೆಪಿ ನಾಯಕರನ್ನು ಬ್ಲ್ಯಾಕ್‌ಮೇಲ್ ಮಾಡಲು ಅಭಿಮಾನೋತ್ಸವ ಮಾಡ್ತಿದ್ದಾರೆ ಎಂದು ಆರೋಪಿಸಿದರು.

ನವೆಂಬರ್‌ಗೆ ವಿಜಯೇಂದ್ರನ ಅಧ್ಯಕ್ಷ ಅವಧಿ ಮುಗಿಯತ್ತದೆ. ರಿನಿವಲ್ ಮಾಡಲು ಜನರಿಗೆ ತೋರಿಸೋಕೆ ಮಾಡ್ತಿದ್ದಾರೆ. ಯಡಿಯೂರಪ್ಪ ಲಿಂಗಾಯತರಿಗೆ ಏನ್ ಮಾಡಿದ್ದಾರೆ. ಲಿಂಗಾಯತರನ್ನ ಒಬಿಸಿ ಮಾಡ್ತೀವಿ ಅಂದಿದ್ದರು. ನಾಲ್ಕು ಮಠಕ್ಕೆ ಅನುದಾನ ಕೊಟ್ಟರೆ ಏನಾಯ್ತು? ಸಿಎಂ ಆದವರು ಒಂದು ಜಾತಿಗೆ ಸೀಮಿತ ಆಗಬಾರದು. ಎಲ್ಲಾ ಜಾತಿಯ ಬಡವರ ಪರ ಕೆಲಸ ಪುಟ 2ಕ್ಕೆ

## ದಾವಣಗೆರೆ: ಒಳಜಗಳದಿಂದ ಹಿನ್ನಡೆ

### ಕಾಂಗ್ರೆಸ್ 20 ಸಾವಿರ ಅಂತರದಿಂದ ಗೆಲ್ಲಬೇಕಿತ್ತು: ಜಾರಕಿಹೊಳಿ

**ದಾವಣಗೆರೆ:** ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಕಡಿಮೆ ಅಂತರದಿಂದ ಗೆಲುವು ಸಾಧಿಸಿದೆ. ಒಳಜಗಳದ ಪರಿಣಾಮ ಪಕ್ಷಕ್ಕೆ ಹಿನ್ನಡೆ ಆಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅಭಿಪ್ರಾಯಪಟ್ಟರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಬಾಗಲಕೋಟೆಯಲ್ಲಿ ಅಹಿಂದ ಸೂತ್ರ ಯಶಸ್ಸು ತಂದುಕೊಟ್ಟಿತು. ಈ ಸೂತ್ರ ದಕ್ಷಿಣದಲ್ಲಿ ಯಶಸ್ಸು ಕಂಡಿಲ್ಲ. ಇದಕ್ಕೆ ಪಕ್ಷದ ಒಳಜಗಳವೇ ಕಾರಣ. ಇಲ್ಲವಾದರೆ 20,000 ಕ್ಕೂ ಹೆಚ್ಚು ಮತಗಳ ಅಂತರದಿಂದ ಕಾಂಗ್ರೆಸ್ ಗೆಲುವು ಸಾಧಿಸುತ್ತಿತ್ತು ಎಂದು ತಿಳಿಸಿದರು.

ಜನರು ಕಾಂಗ್ರೆಸ್ ಮೇಲೆ ಭರವಸೆ ಇಟ್ಟು ಮತ ಹಾಕಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ ಕೈಹಿಡಿದಿವೆ. ಕಾಂಗ್ರೆಸ್ ಪರ ಅಲೆ ಇದೆ ಎಂಬುದನ್ನು ಎರಡು ಕ್ಷೇತ್ರಗಳ ಗೆಲುವು ತೋರಿಸಿಕೊಟ್ಟಿದೆ. ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಮತ ಬಿಜೆಪಿಗೆ ಹೋಗಿವೆ ಹಾಗೂ ಬಿಜೆಪಿ ಮತ ಕಾಂಗ್ರೆಸ್‌ಗೆ ಬಂದಿವೆ ಎಂದರು.



ಸಾರ್ವತ್ರಿಕ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆದ್ದ ಪಕ್ಷಕ್ಕೆ ಸರ್ಕಾರ ರಚಿಸಲು ಅವಕಾಶ ನೀಡುವುದು ವಾಡಿಕೆ. ಬಹುಮತ ಸಾಬೀತುಪಡಿಸುವ ಹೊಣೆಗಾರಿಕೆ ಪಕ್ಷದ ಮೇಲಿರುತ್ತದೆ. ಈ ವಿಚಾರದಲ್ಲಿ ತಮಿಳುನಾಡು ರಾಜ್ಯಪಾಲರ ನಡೆ ಅಸಮಾಧಾನ ಮೂಡಿಸಿದೆ. ಟಿವಿಕೆಗೆ ಅನುಮತಿ ನಿರಾಕರಿಸುವ ಮೂಲಕ ಕೆಟ್ಟ ಸಂಪ್ರದಾಯವನ್ನು ಹಾಕಿಕೊಟ್ಟಿದ್ದಾರೆ. ಇದನ್ನು ಕಾಂಗ್ರೆಸ್ ಖಂಡಿಸುತ್ತದೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯೆ ನೀಡಿದರು.

## ಟಿಸಿಎಸ್ ಜಿಹಾದ್ ಪ್ರಕರಣ: ನಿದಾ ಖಾನ್ ಬಂಧನ

**ಮುಂಬೈ:** ಟಿಸಿಎಸ್ ಕಾರ್ಪೊರೇಟ್ ಜಿಹಾದ್ ಪ್ರಕರಣದ ಮಾಸ್ಟರ್ ಮೈಂಡ್ ನಿದಾ ಖಾನ್‌ಳನ್ನು ವಿಶೇಷ ತನಿಖಾ ತಂಡ ಸಂಭಾಜಿ ನಗರದಲ್ಲಿ ಬಂಧಿಸಿದೆ.

ಟಿಸಿಎಸ್‌ನಲ್ಲಿ ನಡೆದ ಮತಾಂತರ ಪ್ರಕರಣದಲ್ಲಿ ನಿದಾ ಖಾನ್ ವಿರುದ್ಧ ಹಲವಾರು ದೂರುಗಳು ದಾಖಲಾದ ನಂತರ ನಾಪತ್ತೆಯಾಗಿದ್ದರು. ಸುಮಾರು 25 ದಿನಗಳ ಕಾಲ ಆಕೆ ತಲೆಮರೆಸಿಕೊಂಡಿದ್ದಳು. ಅಲ್ಲದೇ ಎಫ್‌ಐಆರ್ ದಾಖಲಾದ ನಂತರ ಬಂಧನದಿಂದ ಬಚಾವ್ ಆಗಲು ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ ಕೋರ್ಟ್ ಅರ್ಜಿಯನ್ನು ವಜಾಗೊಳಿಸಿತ್ತು.

ನಿದಾ ಕಳೆದ ನಾಲ್ಕು ದಿನಗಳಿಂದ ಛತ್ರಪತಿ ಸಂಭಾಜಿನಗರದ ನರೇಗಾಂವ್ ಪ್ರದೇಶದ ಕೈಸರ್ ಕಾಲೋನಿಯಲ್ಲಿರುವ ಫ್ಲಾಟ್‌ನಲ್ಲಿ ತನ್ನ ಪೋಷಕರ ಜೊತೆ ವಾಸಿಸುತ್ತಿದ್ದರು. ಈಕೆಯನ್ನು ಬಂಧಿಸುವ ಎರಡು ದಿನಗಳ ಮೊದಲು ಫ್ಲ್ಯಾಟ್ ಮೇಲೆ ತೀವ್ರ ನಿಗಾ ಇರಿಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು ಛತ್ರಪತಿ ಜ್ಯುಡಿಶಿಯಲ್ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಗಿತ್ತು. ಬಳಿಕ ಟ್ರಾನ್ಸಿಟ್ ರಿಮಾಂಡ್ ಮೂಲಕ ವಶಕ್ಕೆ ಪಡೆದು ನಾಸಿಕ್‌ಗೆ ಕರೆದೊಯ್ದು ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಆರು ಪುರುಷರು ಮತ್ತು ಒಬ್ಬ ಹೆಚ್‌ಆರ್ ಹೆಡ್ ಸೇರಿದಂತೆ 7 ಉದ್ಯೋಗಿಗಳನ್ನು ಪೊಲೀಸರು ಬಂಧಿಸಿದ್ದಾರೆ.


# ದೇಶದಲ್ಲಿ ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ಸ್ಥಿತಿಯಿಲ್ಲ

## ಕರ್ನಾಟಕದ ರಾಜಕೀಯ ಪರಿಸ್ಥಿತಿ ವಿಭಿನ್ನ । ಎಚ್.ಡಿ.ಕುಮಾರಸ್ವಾಮಿ

**ಹಾಸನ:** ಮುಂದಿನ ಚುನಾವಣೆಯಲ್ಲಿ ರಾಜ್ಯದಲ್ಲಿ ಬದಲಾವಣೆ ಆಗಬಹುದು ಎಂಬ ಚರ್ಚೆ ಜನಸಾಮಾನ್ಯರಲ್ಲಿದೆ. ಆದರೆ ರಾಜ್ಯದಲ್ಲಿ ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ವಾತಾವರಣ ಇಲ್ಲ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಮಾವಿನಕೆರೆಯ ರಂಗನಾಥಸ್ವಾಮಿ ಬೆಟ್ಟದ ದೇವಾಲಯಕ್ಕೆ ಶುಕ್ರವಾರ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಕರ್ನಾಟಕದ ರಾಜಕೀಯ ಪರಿಸ್ಥಿತಿಯ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಟಿವಿಕೆ ವಿಜಯವನ್ನು ಉಲ್ಲೇಖಿಸಿ ಮಾತನಾಡಿದ ಅವರು, ಇಲ್ಲಿ ಇರುವ ರಾಜಕೀಯ ಪರಿಸ್ಥಿತಿ ಬೇರೆ ರಾಜ್ಯಗಳಿಗಿಂತ ವಿಭಿನ್ನವಾಗಿದೆ ಎಂದರು. ತಮಿಳುನಾಡಿನ ರಾಜಕಾರಣದಲ್ಲಿ ಸಿನಿಮಾದ ಪ್ರಭಾವ ಬಹಳ ಹಿಂದಿನಿಂದಲೂ ಇದೆ. ಈಗಲೂ ಅದೇ ಪ್ರಭಾವ ಕಾಣಿಸಿದೆ. ಹೊಸ ಮುಖಕ್ಕೆ ಅಧಿಕಾರ ನೀಡಬೇಕು ಎಂಬ ಮನೋಭಾವದಿಂದ ಜನ ತೀರ್ಮಾನ ಮಾಡಿದ್ದಾರೆ ಎಂದು ಹೇಳಿದರು.



ಟಿವಿಕೆ ಪಕ್ಷಕ್ಕೆ ಕಾಂಗ್ರೆಸ್ ಬೆಂಬಲ ನೀಡುತ್ತಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ನಡೆ ಕುರಿತು ಟೀಕೆ ಮಾಡುವ ಅಗತ್ಯವಿಲ್ಲ. ಯಾವ ಸಂದರ್ಭಗಳಲ್ಲಿ ಅದು ಸರ್ಕಾರಗಳನ್ನು ಅಸ್ಥಿರಗೊಳಿಸಿದೆ ಎಂಬುದಕ್ಕೆ ಸಾಕಷ್ಟು ಉದಾಹರಣೆಗಳಿವೆ. ಕೇಂದ್ರದಲ್ಲಿ ಚರಣ್‌ಸಿಂಗ್, ವಿ.ಪಿ.ಸಿಂಗ್, ಚಂದ್ರಶೇಖರ್ ಸರ್ಕಾರಗಳ ಸಂದರ್ಭದಲ್ಲಿ ನಡೆದ ಬೆಳವಣಿಗೆಗಳೇ ಸಾಕು. ದೇವೇಗೌಡರು ಪ್ರಧಾನಿಯಾಗಿದ್ದಾಗ ಯಾವ ಕಾರಣವನ್ನು ನೀಡಿ ಸರ್ಕಾರ ಕೆಡವಿದರು ಎಂಬುದು ದೇಶಕ್ಕೆ ಗೊತ್ತಿದೆ ಎಂದು ಹೇಳಿದರು.

ಇಪ್ಪತ್ತು ವರ್ಷಗಳ ಕಾಲ ಡಿಎಂಕೆ ಜೊತೆ ಇದ್ದವರು. ಈಗ ವಿಜಯ್ ಜೊತೆ ಸೇರಿದ್ದಾರೆ. ಪುಟ 2ಕ್ಕೆ

## ಗ್ಯಾರಂಟಿಗೆ 6–7 ಲಕ್ಷ ಕೋಟಿ ವಿಜಯ್ ಎಲ್ಲಿಂದ ತರ್ತಾರೆ? ಎಚ್‌ಡಿಕೆ

ಹಾಸನ: ತಮಿಳುನಾಡಿನ ಬಜೆಟ್ ವರ್ಷಕ್ಕೆ 3.40 ಲಕ್ಷ ಕೋಟಿ ಇದೆ. ಆದರೆ, ವಿಜಯ್ ಉಚಿತ ಗ್ಯಾರಂಟಿಗಳನ್ನು ನೀಡಲು 6ರಿಂದ 7 ಲಕ್ಷ ಕೋಟಿ ಬೇಕು. ಯಾವ ರೀತಿ ಹಣ ಹೊಂದಿಸುತ್ತಾರೆ ಕಾದು ನೋಡಬೇಕು ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಕಳವಳ ವ್ಯಕ್ತಪಡಿಸಿದರು.



ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಶ್ರೀ ಬೆಟ್ಟದ ರಂಗನಾಥಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದರು. ಕಳೆದ 50 ವರ್ಷಗಳಿಂದ ಎರಡು ದ್ರಾವಿಡ ಪಕ್ಷಗಳ ಆಡಳಿತ ಏನೆಂದು ಅಲ್ಲಿಯ ಜನ ನೋಡಿದ್ದರು. ಹೊಸ ವ್ಯವಸ್ಥೆ ತರಲು ಜನಸಾಮಾನ್ಯರು ನಿರ್ಧಾರ ಮಾಡ್ತಾರೆ ಎಂಬ ನನ್ನ ನಿರೀಕ್ಷೆ ನಿಜವಾಗಿದೆ ಎಂದು ಹೇಳಿದರು.

ತಮಿಳುನಾಡಿನ ಜನತೆಯ ಆಯ್ಕೆ ಕುರಿತು ಮಾತನಾಡಿದ ಅವರು, ತಮಿಳುನಾಡಿದ ರಾಜಕಾರಣದ ಬಗ್ಗೆ ಮೊದಲಿನಿಂದಲೂ ಎಲ್ಲರಿಗೂ ಪುಟ 2ಕ್ಕೆ

## ಮೊದಲನೇ ಪುಟದಿಂದ

### ಮೂವರಿಗಷ್ಟೇ ಜನನಾಯಕರ ಪಟ್ಟ!

ಹಿಡಿತ ಇದೆ. ಅದನ್ನು ಕಾಂಗ್ರೆಸ್ ನಲ್ಲಿ ಕಾಣಬಹುದು. ಪ್ರತಿ ಜಿಲ್ಲೆಗೂ ಒಬ್ಬೊಬ್ಬ ನಾಯಕರಿದ್ದಾರೆ. ಆದರೆ ಬಿಜೆಪಿಯಲ್ಲಿ ಅಂತಹ ನಾಯಕತ್ವವೂ ಇಲ್ಲ. ಇದುವರೆಗೆ ಅಧಿಕಾರ ಅನುಭವಿಸಿದ ಬಿಜೆಪಿಯ ಸಾಕಷ್ಟು ನಾಯಕರು ಈಗ ಎಲ್ಲಿಯೂ ಕಂಡುಬರುತ್ತಿಲ್ಲ. ಅವರು ಮತ್ತೆ ಕಾಣಿಸಿಕೊಳ್ಳುವುದು ಬಿಜೆಪಿ ಅಧಿಕಾರಕ್ಕೆ ಬಂದ ಮೇಲಷ್ಟೇ!

### ರಾಜ್ಯ ಬಿಜೆಪಿಗೆ ಬಿ.ಎಸ್.ಯಡಿಯೂರಪ್ಪ 'ಟಾನಿಕ್' ನೀಡುವರೇ?

ಕಳೆದುಕೊಂಡಿದ್ದರು. ಮತ್ತೆ 2023ರಲ್ಲಿ ಬಿಜೆಪಿ ಮಕಾಡೆ ಮಲಗಿತ್ತು.

ಈಗ ಕಾಂಗ್ರೆಸ್ ನಿಚ್ಚಳ ಬಹುಮತದೊಂದಿಗೆ ಅಧಿಕಾರದಲ್ಲಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರಂತಹ ನಾಯಕರು ಇದ್ದಾರೆ. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಅನ್ನು ಸೋಲಿಸುವುದು ಅಂದುಕೊಂಡಷ್ಟು ಸುಲಭದ ಮಾತಲ್ಲ. ಕಳೆದ ಮೂರು ವರ್ಷದಿಂದ ನಡೆದಿರುವ ಎಲ್ಲಾ ಉಪ ಚುನಾವಣೆಗಳಲ್ಲಿ ಬಿಜೆಪಿ ಸೋತಿದೆ. ಹೀಗಾಗಿ ಯಡಿಯೂರಪ್ಪ ಅವರಂತಹ ನಾಯಕರ ಅಗತ್ಯವನ್ನು ಬಿಜೆಪಿ ಹೈಕಮಾಂಡ್ ಮನಗಂಡಿದೆ. ರಾಜ್ಯದಲ್ಲಿ ಬಿಜೆಪಿ ಮತ್ತೆ ಉಸಿರಾಡಲು ಯಡಿಯೂರಪ್ಪ ಅವರನ್ನು ಬಳಸಿಕೊಳ್ಳಲು ಮುಂದಾಗಿದೆ ಎನ್ನಲಾಗಿದೆ.

ಹೀಗಾಗಿಯೇ ಚಿತ್ರದುರ್ಗದಲ್ಲಿ ನಡೆಯುತ್ತಿರುವ ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ಹೈಕಮಾಂಡ್ ಒಪ್ಪಿಗೆ ನೀಡಿದೆ. ಅಲ್ಲದೆ, ಕೇಂದ್ರ ಸಚಿವ ಅಮಿತ್ ಶಾ ಭಾಗವಹಿಸುತ್ತಿದ್ದಾರೆ. ಲಕ್ಷಾಂತರ ಜನರನ್ನು ಸೇರಿಸಲಾಗುತ್ತಿದೆ. ವಿಧಾನಸಭೆ ಚುನಾವಣೆ ಇನ್ನೂ ಎರಡು ವರ್ಷವಿದೆ. ಈಗ ಯಡಿಯೂರಪ್ಪ ಅಭಿಮಾನೋತ್ಸವ ಮಾಡುವುದರಿಂದ ಪ್ರಯೋಜನವೇನು ಎನ್ನಬಹುದು. ಹೌದು, ಆದರೆ, ಅದುವರೆಗೆ ಹತ್ತಾರು ಸ್ಥಳೀಯ ಚುನಾವಣೆಗಳನ್ನು ಬಿಜೆಪಿ ಎದುರಿಸಬೇಕಾಗಿದೆ. ಬೆಂಗಳೂರಿನ ಜಿಬಿಎ ವ್ಯಾಪ್ತಿಯ 5 ಪಾಲಿಕೆ ಸೇರಿದಂತೆ ರಾಜ್ಯದ ಎಲ್ಲಾ ನಗರಪಾಲಿಕೆ ಚುನಾವಣೆ ಶೀಘ್ರದಲ್ಲಿಯೇ ಬರಲಿವೆ.

ಯಡಿಯೂರಪ್ಪ ಬಿಜೆಪಿಗಷ್ಟೇ ಅನಿವಾರ್ಯ ಅಲ್ಲ. ಯಡಿಯೂರಪ್ಪ ಅವರಿಗೂ ಬಿಜೆಪಿಯ ಅನಿವಾರ್ಯತೆ ಅಷ್ಟೇ ಇದೆ. ಚುನಾವಣೆ ರಾಜಕೀಯದಿಂದ ಅವರು ನಿವೃತ್ತಿ ಆಗಿರಬಹುದು. ಆದರೆ ತಮ್ಮ ಪುತ್ರರಾದ ಬಿ.ವೈ. ವಿಜಯೇಂದ್ರ ಮತ್ತು ರಾಘವೇಂದ್ರ ಅವರ ರಾಜಕೀಯ ಭವಿಷ್ಯದ ದೃಷ್ಟಿಯಿಂದ ಮತ್ತೊಮ್ಮೆ ತಮ್ಮ ಸಾಮರ್ಥ್ಯವನ್ನು ಸಾಬೀತು ಮಾಡಬೇಕಾದ ಸ್ಥಿತಿಯಲ್ಲಿ ಯಡಿಯೂರಪ್ಪ ಇದ್ದಾರೆ.

### ಪ್ರಾದೇಶಿಕ ಪಕ್ಷ ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ಸ್ಥಿತಿಯಿಲ್ಲ

ಅವರ ರಾಜಕೀಯ ಭವಿಷ್ಯವನ್ನು ಗಮನದಲ್ಲಿ ಇಟ್ಟುಕೊಂಡೇ ತೀರ್ಮಾನ ಮಾಡಿರಬಹುದು. ಅದರ ಬಗ್ಗೆ ಕಾಲವೇ ಉತ್ತರ ನೀಡಲಿದೆ ಎಂದರು.

### ಗ್ಯಾರಂಟಿಗೆ 6–7 ಲಕ್ಷ ಕೋಟಿ ವಿಜಯ್ ಎಲ್ಲಿಂದ ರ‍್ತಾರೆ: ಎಚ್‌ಡಿಕೆ

ಗೊತ್ತಿದೆ. ಅಲ್ಲಿನ ಜನ ಸ್ವಲ್ಪ ಸಿನಿಮಾ ಪ್ರಭಾವಕ್ಕೆ ಒಳಗಾಗುತ್ತಾರೆ. ಹೀಗಾಗಿ ಹೊಸ ವ್ಯಕ್ತಿಗೆ ಅಧಿಕಾರ ನೀಡಲು ಜನ ಬಯಸಿದ್ದಾರೆ. ವಿಜಯ್ ಅವರ ಈ ಸಾಧನೆಯನ್ನು ಯಾರೂ ನಿರೀಕ್ಷಿಸಿರಲಿಲ್ಲ ಎಂದು ಕುಮಾರಸ್ವಾಮಿ ಹೇಳಿದರು.

### ಬ್ಲ್ಯಾಕ್‌ಮೇಲೋತ್ಸವ: ಯತ್ನಾಳ್


ಮಾಡಬೇಕು. ಲಿಂಗಾಯತ ಮಠಗಳಿಗೂ 2, 3 ಕೋಟಿ ರೂ. ಕೊಟ್ಟಿದ್ದಾರೆ. ಅವರು ಬಹುಪರಾಕ್ ಅಂತಾರೆ. ಯಡಿಯೂರಪ್ಪ ಯಾವ ಅಭಿವೃದ್ಧಿ ಕೆಲಸನೂ ಮಾಡಿಲ್ಲ. ನಾಳೆ ನಡೆಯುವ ಕಾರ್ಯಕ್ರಮ ತನ್ನ ಮಕ್ಕಳ ಭವಿಷ್ಯಕ್ಕಾಗಿ ಅಷ್ಟೇ ಎಂದು ಕಿಡಿಕಾರಿದರು.

**ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು**
ಝಾನ್ಸಿಲಕ್ಷ್ಮೀಬಾಯಿ ರಸ್ತೆ, ಮೈಸೂರು – 570 005

ಸಂಖ್ಯೆ:ಮೈನಪ್ರಾ:ನಯೋಶಾ:ಭೂಉಬ:ನಯೋ–1:243:2026–27 ದಿನಾಂಕ :27.04.2026

**ಸಾರ್ವಜನಿಕ ಪ್ರಕಟಣೆ**

**ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 14(ಎ)ರನ್ವಯ** ಮೈಸೂರು ತಾಲ್ಲೂಕು, ಕಸಬಾ ಹೋಬಳಿ, **ಮಂಡಕಳ್ಳಿ** ಗ್ರಾಮದ ಸ.ನಂ.**185/2**ರಲ್ಲಿ **01ಎಕರೆ 20ಗುಂಟೆ** ವಿಸ್ತೀರ್ಣದ ಜಮೀನನ್ನು **ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಕೆ.ಟಿ.ಸಿ.ಪಿ. ಕಾಯ್ದೆ 1961ರ ಪ್ರಕರಣ 14(ಎ) ರನ್ವಯ** ಭೂ ಉಪಯೋಗ ಬದಲಾವಣೆ ಮಾಡುವಂತೆ **ಶ್ರೀಮತಿ ಉಷಾದೇವಿ ಬಿನ್ ರುದ್ರಪ್ಪ** ಇವರು ಅರ್ಜಿ ಸಲ್ಲಿಸಿರುತ್ತಾರೆ. ಭೂ ಉಪಯೋಗ ಬದಲಾವಣೆಯಿಂದ **"ಪ್ರಶ್ನಿತ ಜಮೀನಿನಲ್ಲಿ ವಿನ್ಯಾಸ ಅಭಿವೃದ್ಧಿಪಡಿಸುವುದರಿಂದ ಬಡವರು, ಮಧ್ಯಮ ವರ್ಗದವರಿಗೆ ಯೋಗ್ಯ ಬೆಲೆಯಲ್ಲಿ ನಿವೇಶನಗಳು ಲಭ್ಯವಾಗುತ್ತವೆ. ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವ ಸಂಧರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ. ಈ ವಿನ್ಯಾಸ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶದ ಅಭಿವೃದ್ಧಿಗೆ ಸಹಾಯವಾಗುತ್ತದೆ ಹಾಗೂ ಯೋಜನಾ ಬದ್ಧವಾದ ವಿನ್ಯಾಸ ರಚನೆಯಿಂದ ಉತ್ತಮ ರಸ್ತೆಗಳು, ನಾಗರೀಕ ಸೌಲಭ್ಯದ ಪ್ರದೇಶಗಳು ಮತ್ತು ಉದ್ಯಾನವನಗಳು ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಾಗುತ್ತವೆ"** ಎಂದು ಸಾರ್ವಜನಿಕ ಹಿತಾಸಕ್ತಿ ಕುರಿತು ಮನವಿಯಲ್ಲಿ ತಿಳಿಸಿರುತ್ತಾರೆ. ಸದರಿ ಜಮೀನಿನ ಭೂ ಉಪಯೋಗದ ಬದಲಾವಣೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಈ ಪ್ರಕಟಣೆಯ ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರಿ, ಮೈಸೂರು–570005 ಇವರಿಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ತಲುಪಿಸಬಹುದಾಗಿದೆ.




ಸಹಿ/– ನಗರ ಯೋಜಕ ಸದಸ್ಯರು,
ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು.

ವಾಸಾಸಂಇ/ಮೈಸೂರು/152/ಶಿರಡಿ ಸಾಯಿ/2026–27

## 10ಕ್ಕೆ ರಾಜ್ ನೆನಪಿಗೆ ಸಂಗೀತ ಸಂಜೆ

**ಮೈಸೂರು:** ರಾಘವೇಂದ್ರ ನಗರದಲ್ಲಿನ ತಮ್ಮ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಮೇ 10 ರಂದು ಸಂಜೆ 5ಕ್ಕೆ ಪುರಭವನ ಸಭಾಂಗಣದಲ್ಲಿ ಡಾ. ರಾಜ್‌ಕುಮಾರ್ ಸವಿ ನೆನಪಿನಲ್ಲಿ ದೊಡ್ಡೋರ ಧ್ವನಿ ಶೀರ್ಷಿಕೆಯ ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಅಧ್ಯಕ್ಷ ಮೈಸೂರು ಜಯರಾಂ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಾರ್ಯಕ್ರಮದಲ್ಲಿ ತಾವು ಸೇರಿದಂತೆ ಗಂಗೋತ್ರಿ ಕುಮಾರ್, ನಾಗೇಂದ್ರ, ನಂಜುಂಡಯ್ಯ, ಅಶ್ವಿನಿ, ತೇಜಸ್ವಿನಿ ಮೊದಲಾದವರು ಹಾಡಲಿದ್ದಾರೆ. ಭಾಷ್ಯಂ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಮುಡಾ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್ ಇನ್ನಿತರರು ವೇದಿಕೆಯಲ್ಲಿರುವರು. ಇದು ಸಂಪೂರ್ಣ ಉಚಿತ ಕಾರ್ಯಕ್ರಮವಾಗಿದೆ ಎಂದರು. ಎಡೆಯೂರು ಸಮೀವುಲ್ಲಾ, ಲತಾ ಬಾಲಕೃಷ್ಣ ಹಾಜರಿದ್ದರು.



## ಮೇ11ರಿಂದ ಶೇಷಾದ್ರಿಪುರಂ ಕಾಲೇಜಿನಲ್ಲಿ ಡಿಸಿಇಟಿ ತರಬೇತಿ



**ಮೈಸೂರು:** ಎಂಜಿನಿಯರಿಂಗ್ ಶಿಕ್ಷಣ ಕೈಗೊಳ್ಳಬಯಸುವ ಡಿಪ್ಲೊಮಾ ಕೊನೆ ವರ್ಷದ ಅಭ್ಯರ್ಥಿಗಳು ಹಾಗೂ ಈಗಾಗಲೇ ಈ ವಿದ್ಯಾಭ್ಯಾಸ ಪೂರ್ಣಗೊಳಿಸಿ ಉದ್ಯೋಗದಲ್ಲಿರುವವರು ಎಂಜಿನಿಯರಿಂಗ್ ಮಾಡುವ ನಿಟ್ಟಿನಲ್ಲಿ ನೆರವಾಗುವ ಉದ್ದೇಶದಿಂದ ಶೇಷಾದ್ರಿಪುರಂ ತಾಂತ್ರಿಕ ಕಾಲೇಜಿನಲ್ಲಿ ಮೇ 11 ರಿಂದ 15 ರವರೆಗೆ ಡಿಸಿಇಟಿ ತರಬೇತಿ ತರಗತಿ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ.ಕೆ. ಪ್ರಹ್ಲಾದರಾವ್ ಮಾಹಿತಿ ನೀಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಡಿಪ್ಲೊಮಾ ನಂತರದ ಎಂಜಿನಿಯರಿಂಗ್ ಮಾಡುವುದರಿಂದ ವಿಶೇಷ ಉದ್ಯೋಗಾವಕಾಶ, ಹೆಚ್ಚಿನ ವೇತನ ಮತ್ತು ಎಂಜಿನಿಯರಿಂಗ್ ಕುರಿತು ಆಳವಾದ ಜ್ಞಾನ ದೊರೆಯಲಿದೆ. ಆದರೆ ಎಂಜಿನಿಯರಿಂಗ್ ಪ್ರವೇಶ ಪಡೆಯಲು ಡಿಸಿಇಟಿಗೆ ಹಾಜರಾಗುವುದು ಅತ್ಯಗತ್ಯ. ಹೀಗಾಗಿ ಇವರಿಗೆ ಈ ತರಬೇತಿ ಆಯೋಜಿಸಿದ್ದು, ಇದು ಸಂಪೂರ್ಣ ಉಚಿತವಾದುದಾಗಿದೆ. ಹೆಚ್ಚಿನ ಮಾಹಿತಿಗೆ ದೂ. 96064 96400 ಸಂಪರ್ಕಿಸಬಹುದಾಗಿದೆ ಎಂದರು. ಡಾ.ಟಿ. ವೆಂಕಟೇಗೌಡ, ಪ್ರೊ.ಎಸ್. ಹೇಮಂತ್‌ಕುಮಾರ್ ಇದ್ದರು.

# ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ಅಳವಡಿಸಿ: ಅರುಣ್ ಕುಮಾರ್

### ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಗ್ಯಾರೆಂಟಿ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆ

**ಮೈಸೂರು:** ನಗರ ಹಾಗೂ ಗ್ರಾಮಾಂತರ ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ಆರ್ ಓ ಘಟಕಗಳನ್ನು ಅಳವಡಿಸಿ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿಕೊಡಿ ಎಂದು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಅರುಣ್ ಕುಮಾರ್ ಹೇಳಿದರು.

ಜಿಲ್ಲಾ ಪಂಚಾಯತ್‌ನ ಡಿ ದೇವರಾಜ ಅರಸು ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಗ್ಯಾರೆಂಟಿ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯ ಎಲ್ಲಾ ಅರ್ಹ ಫಲಾನುಭವಿಗಳಿಗೆ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ತಲುಪಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು. ಕೆಲವು ಜನರಿಗೆ ಗೃಹಲಕ್ಷ್ಮಿ ಹಣ ದೊರೆಯುತ್ತಿಲ್ಲ ಎಂಬ ದೂರು ಇದೆ ಎಂದು ಸಭೆಯಲ್ಲಿ ಕೇಳಿದಾಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಮಾಹಿತಿ ನೀಡಿ ಯಾರು ಆದಾಯ ತೆರಿಗೆ ಪಾವತಿದಾರರು ಇದ್ದಾರೆ. ಅವರಿಗೆ ಗೃಹ ಲಕ್ಷ್ಮಿ ಹಣ ನೀಡಲು ನಿಯಮದಲ್ಲಿ ಅವಕಾಶವಿಲ್ಲ ಯಾರಾದರೂ ಅರ್ಹ ಫಲಾನುಭವಿಗಳು ಇದ್ದರೆ ಪರೀಕ್ಷಿಸಿ ಸೇರ್ಪಡೆ ಮಾಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಟಿಕೆಟ್ ಹಣವನ್ನು ಆನ್ ಲೈನ್ ನಲ್ಲಿಯೂ ಪಾವತಿ ವ್ಯವಸ್ಥೆ ಇರುವ ಬಗ್ಗೆ ಫಲಕಗಳನ್ನು ಅಳವಡಿಸಿ ಈ ಬಗ್ಗೆ ಪ್ರಯಾಣಿಕರಿಗೆ ಮಾಹಿತಿ ಮಾಡಬೇಕು. ನಿರ್ವಾಹಕರು ಪ್ರಯಾಣಿಕರೊಂದಿಗೆ ಸೌಜನ್ಯ ಯುತವಾಗಿ ವರ್ತಿಸಬೇಕು. ಬಿಪಿಎಲ್ ಕಾರ್ಡ್ ಮಾಡಿಸಲು ಪೋರ್ಟಲ್ ಓಪನ್ ಆದಾಗ ಪ್ರಚಾರ ನೀಡಿ ಸಾರ್ವಜನಿಕರಿಗೆ ಮಾಹಿತಿ ದೊರೆಯುವಂತೆ ಮಾಡಬೇಕು. ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಬಿಪಿಎಲ್ ಕಾರ್ಡ್ ಅತ್ಯವಶ್ಯಕವಾಗಿದೆ. ಬಿಪಿಎಲ್ ಕಾರ್ಡ್ ಇಲ್ಲದೆ ಇದ್ದರೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ಹಾಗೂ ಸ್ಕ್ಯಾನಿಂಗ್ ಸೌಲಭ್ಯಗಳು ದೊರೆಯುವುದಿಲ್ಲ. ಆದ್ದರಿಂದ ಅರ್ಹರಿಗೆ ಬಿಪಿಎಲ್ ಕಾರ್ಡಗಳನ್ನು ನೀಡಲು ಕ್ರಮವಹಿಸುವಂತೆ ಆಹಾರ ಇಲಾಖೆಯ ಉಪ ನಿರ್ದೇಶಕರಿಗೆ ಸೂಚನೆ ನೀಡಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್, ಮಾತನಾಡಿ ಗೃಹ ಲಕ್ಷ್ಮಿ ಹಣವನ್ನು ಯಾವುದೇ ಬ್ಯಾಂಕ್ ನವರು ಸಾಲಕ್ಕೆ ವಜಾ ಮಾಡಿಕೊಳ್ಳದೆ ಮಾನವೀಯತೆ ಆದಾರದ ಮೇಲೆ ಫಲಾನುಭವಿಗಳಿಗೆ ನೀಡಬೇಕು. ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮರಣ ಹೊಂದಿದರೆ ಅವರಿಗೆ ಹಣ ಪಾವತಿ ಆಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರ ಇಲಾಖೆಯ ಉಪ ನಿರ್ದೇಶಕರು ಮಾಹಿತಿ ನೀಡಿ ಜಿಲ್ಲೆಯಲ್ಲಿ 6,80,301 ಪಡಿತರ ಚೀಟಿಗಳು ಇವೆ. ಐಟಿ ಪಾವತಿ ಮಾಡಿರುವ ಹಾಗೂ 7.5 ಹೆಕ್ಟರ್ ಭೂಮಿ ಹೊಂದಿರುವವರ 23 ಸಾವಿರ ಕಾರ್ಡ್ ಗಳನ್ನು ಎಪಿಎಲ್ ಗೆ ಬದಲಾವಣೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

> ಯಾರು ಮರಣ ಹೊಂದಿದ್ದಾರೆ ಅವರಿಗೂ ಹಣ ಹೋಗುತ್ತಿದೆ. ಅವರಿಗೆ ಸ್ಥಗಿತಗೊಳಿಸಬೇಕು ಹಾಗೂ ಮರಣದಿಂದ ಇಲ್ಲಿಯವರೆಗೆ ಅವರಿಗೆ ಪಾವತಿ ಆಗಿರುವ ಹಣವನ್ನು ಹಿಂಪಡೆಯಬೇಕು. ಮುಂದೆ ಯಾರೇ ಫಲಾನುಭವಿ ಮರಣ ಹೊಂದಿದರೆ ಆಟೋಮ್ಯಾಟಿಕ್ ಆಗಿ ಹಣ ಪಾವತಿ ಸ್ಥಗಿತವಾಗುವಂತೆ ತಂತ್ರಜ್ಞಾನ ಅಳವಡಿಸಿಕೊಳ್ಳಿ.
>
> **ಶಿವಕುಮಾರ್** ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ

ಚೆಸ್ಕಾಂ ಅಧೀಕ್ಷಕ ಇಂಜಿನಿಯರ್ ಸುನಿಲ್ ಮಾತನಾಡಿ, ಜಿಲ್ಲೆಯಲ್ಲಿ 9,68,228 ಫಲಾನುಭವಿಗಳು ಗೃಹಜ್ಯೋತಿ ಯೋಜನೆಯಡಿ ನೋಂದಣಿ ಆಗಿದ್ದಾರೆ. 6548 ಫಲಾನುಭವಿಗಳು ನೋಂದಣಿಗೆ ಬಾಕಿ ಇದ್ದಾರೆ. ಶೇಕಡಾ 60 ರಷ್ಟು ಫಲಾನುಭವಿಗಳಿಗೆ ಶೂನ್ಯ ಬಿಲ್ ಬರುತ್ತದೆ. 40% ಫಲಾನುಭವಿಗಳು ಸರಾಸರಿಗಿಂತ ಹೆಚ್ಚಿನ ವಿದ್ಯುತ್ ಬಳಕೆ ಮಾಡುವುದರಿಂದ ಬಿಲ್ ಬರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಉಪಾಧ್ಯಕ್ಷ ಹುಣಸೂರು ಬಸವಣ್ಣ, ಬಿ.ಎನ್.ಕರೀಗೌಡ, ತಾಲ್ಲೂಕು ಅಧ್ಯಕ್ಷ ನಿತಿನ್ ವೆಂಕಟೇಶ್, ಸದಸ್ಯರಾದ ಸಾ.ಮಾ.ಯೋಗೇಶ್, ಎಂ.ಎಸ್.ಮಹದೇವ, ಲಲಿತಾ, ಅಬ್ದುಲ್ ಖಾದರ್ ಸೇರಿ ಮತ್ತಿತರು ಉಪಸ್ಥಿತರಿದ್ದರು.

## ಚಿನ್ನತಂಬಿ ವಿರುದ್ಧ ಪೊಲೀಸರ ಮೃಧು ಧೋರಣೆಗೆ ಖಂಡನೆ

ಮೈಸೂರು: ಒಡವೆ ಗಿರವಿ ಇರಿಸಿಕೊಂಡು ಕರಗಿಸಿ, ಅಥವಾ ಇನ್ನಿತರರಿಗೆ ಮಾರಾಟ ಮಾಡಿ ಬಹುದೊಡ್ಡ ವಂಚನೆ ಎಸಗಿರುವ ಗೋಲ್ಡ್ ಕಂಪನಿಯೊಂದರ ಚಿನ್ನತಂಬಿ ಎಂಬಾತನ ವಿರುದ್ಧ ಪೊಲೀಸರು ಮೃದುಧೋರಣೆ ತಾಳಿದ್ದಾರೆ ಎಂದು ಜನತಾದಳ–ಸಂಯುಕ್ತ– ಕರ್ನಾಟಕದ ರಾಜ್ಯ ಉಪಾಧ್ಯಕ್ಷ ಕೆ.ವಿ. ಶಿವವರಾಮ್ ಆರೋಪಿಸಿದರು.



ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಡಿಮೆ ಬಡ್ಡಿಗೆ ಗಿರವಿ ಇರಿಸಿಕೊಳ್ಳುವುದಾಗಿ ನಂಬಿಸಿ ಈತ ನೂರಾರು ಮಂದಿಗೆ ವಂಚಿಸಿದ್ದಾನೆ. ಹಲವಾರು ಕಂಪನಿ ಹೆಸರಿನಲ್ಲಿ ಈ ಅಕ್ರಮ ಎಸಗಿದ್ದಾನೆ. ಪ್ರಶ್ನಿಸಲು ಹೋದ ಗ್ರಾಹಕರಿಗೆ ಗೂಂಡಾಗಳನ್ನು ಬಳಸಿಕೊಂಡು ಬೆದರಿಕೆ ಹಾಕುತ್ತಿದ್ದಾನೆ ಎಂದು ದೂರಿದರು.

ಈಚೆಗೆ ಸಿಸಿಬಿ ಪೊಲೀಸರು ಈತನನ್ನು ನೆಪಮಾತ್ರಕ್ಕಷ್ಟೇ ಬಂಧಿಸಿದ್ದಾರೆ. ಇದರೊಡನೆ ಪ್ರಕರಣ ಮುಚ್ಚಿ ಹಾಕುವ ಯತ್ನ ನಡೆಸುತ್ತಿದ್ದಾರೆ. ಬೆದರಿಕೆ ಹಾಕುತ್ತಿದ್ದರೂ ಕೊಲೆ ಬೆದರಿಕೆ ಪ್ರಕರಣ ದಾಖಲಿಸದೇ ಕೇವಲ ವಂಚನೆ ಪ್ರಕರಣ ದಾಖಲಿಸಿದ್ದಾರೆ. ಇದು ಸರಿಯಲ್ಲ. ಹೀಗಾಗಿ ಜೆಡಿಯು ವತಿಯಿಂದ ಜಿಲ್ಲಾಧಿಕಾರಿಗೆ ದೂರು ನೀಡಿ ಕ್ರಮಕ್ಕೆ ಮೊರೆ ಹೋಗಲಾಗುವುದೆಂದರು. ಇನ್ನಿತರ ಪದಾಧಿಕಾರಿಗಳಾದ ಕೆ.ಆರ್. ರಂಗನಾಥ್, ಕಲ್ಪನಗೌಡ, ವಿಜಯಲಕ್ಷ್ಮಿ, ಕೆ.ಎಂ.ಪಾಲಾಕ್ಷ ಇದ್ದರು.

## ಐಪಿಎಲ್ ಬೆಟ್ಟಿಂಗ್: ಮೂವರ ಬಂಧನ, ಬೆನ್ಜ್ ಕಾರು ವಶ

**ಮೈಸೂರು:** ನಗರದ ದೇವರಾಜ ಪೊಲೀಸರು ಕಾರ್ಯಾಚರಣೆ ನಡೆಸಿ ಐ.ಪಿ.ಎಲ್. ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿದ್ದ 3 ಜನರ ಬಂಧಿಸಿ, 1 ಬೆನ್ಜ್ ಕಾರು, 15,900ರೂ. ನಗದು ಹಣ ಮತ್ತು 3 ಮೊಬೈಲ್‌ಗಳು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ದೇವರಾಜ ಪೊಲೀಸರು ಮೇ7ರಂದು ಠಾಣಾ ವ್ಯಾಪ್ತಿಯಲ್ಲಿ ಗಸ್ತಿನಲ್ಲಿರುವಾಗ ದೇವರಾಜ ಪೊಲೀಸ್ ಠಾಣಾ ವ್ಯಾಪ್ತಿಯ ಟೌನ್ಹಾಲ್ ಹಿಂಭಾಗದಲ್ಲಿರುವ ಪಾರ್ಕಿಂಗ್ ಸ್ಥಳದಲ್ಲಿ ಬೆನ್ ಕಾರಿನಲ್ಲಿದ್ದ ಮೂರು ಜನರನ್ನು ಪರಿಶೀಲಿಸಲಾಗಿ,

ಸದರಿಯವರು ಕಾರಿನಲ್ಲಿ ಕುಳಿತು ಆರ್.ಸಿ.ಬಿ ಮತ್ತು ಲಕ್ನೋ ಸೂಪರ್ ಜೆಂಟ್ಸ್ ತಂಡಗಳ ಐ.ಪಿ.ಎಲ್ ಕ್ರಿಕೆಟ್ ಪಂದ್ಯಾವಳಿಗಳಿಂದ ಅಕ್ರಮವಾಗಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕಾನೂನು ಬಾಹಿರವಾಗಿ ಸಾರ್ವಜನಿಕರಿಂದ ಆನ್‌ಲೈನ್,ಆಫ್‌ಲೈನ್ ಮೂಲಕ ಹಣವನ್ನು ಪಣವಾಗಿರಿಸಿಕೊಂಡು ಮೊಬೈಲ್‌ನಲ್ಲಿ ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿದ್ದ ಮಂಡಿಮೊಹಲ್ಲಾದ ಸಂಜಯ್ ಕುಮಾರ್(33), ಇಲವಾಲದ ಪಿ.ಪಿ.ವಿನೋದ್(32) ಮತ್ತು ಪಡುವಾರಹಳ್ಳಿಯ ಲಿಖಿತಕುಮಾರ್(27) ಎಂಬುವರುಗಳನ್ನು ವಶಕ್ಕೆ ಪಡೆದು ಕ್ರಿಕೆಟ್ ಬೆಟ್ಟಿಂಗ್‌ಗೆ ಬಳಕೆ ಮಾಡುತ್ತಿದ್ದ 3 ಮೊಬೈಲ್ ಫೋನ್‌ಗಳು, 15,900ರೂ. ನಗದು ಹಣ ಮತ್ತು 1 ಬೆನ್ ಕಾರನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಈ ಸಂಬಂಧ ದೇವರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಳ್ಳಲಾಗಿದೆ.

## ಅಲ್ಪಸಂಖ್ಯಾತ ಹಕ್ಕುಗಳ ರಕ್ಷಣೆ ತಿದ್ದುಪಡಿ ಮಸೂದೆಗೆ ನಮ್ಮ ವಿರೋಧವಿದೆ: ಪೃಥ್ವಿ




**ಮೈಸೂರು:** ಕೇಂದ್ರ ಸರ್ಕಾರದ ಲೈಂಗಿಕ ಅಲ್ಪಸಂಖ್ಯಾತ ವ್ಯಕ್ತಿಗಳ ಹಕ್ಕುಗಳ ರಕ್ಷಣೆ ತಿದ್ದುಪಡಿ ಮಸೂದೆ ಈ ಸಮುದಾಯದವರ ಹಕ್ಕುಗಳಿಗೆ ಗಂಭೀರ ಹಾನಿಯುಂಟು ಮಾಡುವ ಕಾರಣ ಅದನ್ನು ವಿರೋಧಿಸಲಾಗುವುದು ಎಂದು ರಾಜ್ಯ ಮಟ್ಟದ ಸಮುದಾಯದ ಸಂಘಟನೆಗಳ ಒಕ್ಕೂಟದ ಪದಾಧಿಕಾರಿ ಪೃಥ್ವಿ ಸ್ಪಷ್ಟ ಪಡಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ಮಸೂದೆ ಈಗಾಗಲೇ ಇರುವ ಸಮಾನತೆ, ಗೌರವ ಮತ್ತು ಸ್ವಯಂ ಗುರುತಿನ ಹಕ್ಕುಗಳನ್ನು ದುರ್ಬಲಗೊಳಿಸುವ ಯತ್ನವಾಗಿದೆ. ಲಿಂಗ ಗುರುತಿಗೆ ವೈದ್ಯಕೀಯ ಪರಿಶೀಲನೆ ಮತ್ತು ಪ್ರಮಾಣಪತ್ರಗಳ ಮೂಲಕ ಮಾತ್ರ ಮಾನ್ಯಗೊಳಿಸುವ ವ್ಯವಸ್ಥೆ ಬೇಕೆಂದು ತಿಳಿಸಿದೆ. ಆದರೆ ಈ ಹಿಂದಿನ ಸುಪ್ರೀಂಕೋರ್ಟ್ ತೀರ್ಪಿನ ಅಡಿಯಲ್ಲಿನ ಪ್ರತಿಯೊಬ್ಬ ವ್ಯಕ್ತಿಗೂ ತನ್ನ ಲಿಂಗ ಗುರುತನ್ನು ಸ್ವಯಂ ನಿರ್ಧರಿಸುವ ಹಕ್ಕು ಇದೆ, ಯಾವುದೇ ವೈದ್ಯಕೀಯ ಅಥವಾ ಆಡಳಿತಾತ್ಮಕ ಅನುಮತಿ ಅಗತ್ಯವಿಲ್ಲ ಎಂಬ ಅಂಶಕ್ಕೆ ವಿರುದ್ಧವಾದುದಾಗಿದೆ ಎಂದು ತಿಳಿಸಿದರು.

ಅಲ್ಲದೆ, ಮಸೂದೆಯಲ್ಲಿ ಟ್ರಾನ್ಸ್ಜೆಂಡರ್ ಎಂಬ ಪದಕ್ಕೆ ಸೀಮಿತ ಮತ್ತು ತಪ್ಪಾದ ವ್ಯಾಖ್ಯಾನ ನೀಡಲಾಗಿದೆ. ಹಲವಾರು ಲಿಂಗ ವೈವಿಧ್ಯತೆಯ ಗುರುತುಗಳನ್ನು ಹೊರತು ಪಡಿಸಲಾಗಿದೆ. ಇದೇ ರೀತಿಯ ಹಲವಾರು ಲೋಪಗಳಿರುವ ಕಾರಣ ಮಸೂದೆಯನ್ನು ವಿರೋಧಿಸುವುದಾಗಿ ವಿವರಿಸಿದರು.

ಟಿ. ಶಿವರಾಮು, ಬಿ.ಎಚ್. ಮಂಜುನಾಥ್ ಮೊದಲಾದವರು ಇದ್ದರು.

## ಕಗ್ಗುಂಡಿ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ತೂಕದಲ್ಲಿ ಮೋಸ: ರೈತರ ಪ್ರತಿಭಟನೆ ಅಧಿಕಾರಿಗಳಿಗೆ ತರಾಟೆ

**ಪಿರಿಯಾಪಟ್ಟಣ:** ಕಗ್ಗುಂಡಿ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ತಂಬಾಕು ಬೇಲ್ ಗಳನ್ನು ತೂಕ ಮಾಡುವಾಗ ಅಕ್ರಮ ಕಂಡು ಬಂದಿದ್ದು, ಇಲ್ಲಿನ ಸಿಬ್ಬಂದಿಗಳು ರೈತರಿಗೆ ಮೋಸ ಮಾಡುತ್ತಿದ್ದಾರೆ ಎಂದು ಆರೋಪಿ ಪ್ರತಿಭಟನೆ ನಡೆಸಿ ಅಧಿಕಾರಿಗಳಿಗೆ ಮುತ್ತಿಗೆ ಹಾಕಿ ತರಾಟೆಗೆ ತೆಗೆದುಕೊಂಡ ಘಟನೆ ನಡೆದಿದೆ.

ತಾಲ್ಲೂಕಿನ ಕಗ್ಗುಂಡಿ ತಂಬಾಕು ಹರಾಜು ಮಾರುಕಟ್ಟೆಯ ಪ್ಲಾಟ್ ಫಾರಂ 04 ರಲ್ಲಿ ಈ ಘಟನೆ ನಡೆದು ಹರಾಜು ಪ್ರಕ್ರಿಯೆ ಸ್ಥಗಿತ ಗೊಳಿಸಿ ಅಧಿಕಾರಿಗಳನ್ನು ಮುತ್ತಿಗೆ ಹಾಕಿ ಪ್ರಶ್ನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತರು, ಹರಾಜು ಮಾರುಕಟ್ಟೆಯಲ್ಲಿ ಅಳತೆ ಮತ್ತು ಮಾಪನ ಮಾಡುವಾಗ ಅನೇಕ ತಂಬಾಕು ಬೇಲ್ ಗಳಲ್ಲಿ 5–12 ಕೆ.ಜಿಯ ವರೆಗೆ ತೂಕ ಕಂಡು ಬರುತ್ತದೆ ಇದಕ್ಕೆ ಇಲ್ಲಿನ ಅರೆ ಕಾಲಿಕಾ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ಅನುಮಾನಗಳು ಬರುತ್ತಿವೆ ಹಾಗಾಗಿ ತಂಬಾಕು



ಹರಾಜು ಪ್ರಕ್ರಿಯೆ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೆ ಎಷ್ಟು ಅಕ್ರಮ ನಡೆದಿದೆ ಇಲ್ಲಿನ ತಂಬಾಕು ಬೆಳೆಗಾರರಿಗೆ ಎಷ್ಟು ಅನ್ಯಾಯವಾಗಿದೆ ಎಂಬುದರ ಬಗ್ಗೆ ಈ ಕೇಂದ್ರ ವಾಣೀಜ್ಯ ಮಂಡಳಿ ಹಾಗೂ ಅಳತೆ ಮತ್ತು ಮಾಪನ ಇಲಾಖೆಯ ಅಧಿಕಾರಿಗಳಿಗೆ ದೂರು ನೀಡಲಾಗುವುದು. ಅಲ್ಲದೇ ಹರಾಜು ಮಾರುಕಟ್ಟೆಯಲ್ಲಿ ದಲ್ಲಾಳಿಗಳು, ಮಧ್ಯವರ್ತಿಗಳು ದಿನನಿತ್ಯ ರೈತರ ತಂಬಾಕನ್ನು ಖರೀದಿಸಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದಾರೆ ಇದನ್ನು ಪ್ರಶ್ನಿಸುವ ರೈತರ ಮೇಲೆ ಗೂಂಡಾಗಳ ಮೂಲಕ ಬೆದರಿಕೆ ಹಾಕಿಸಿ ಹೆದರಿಸುವ ಕೆಲಸ ಮಾಡುತ್ತಿದ್ದಾರೆ ಕಳೆದ ವರ್ಷ ತಂಬಾಕು ಮಂಡಳಿಯಲ್ಲಿ ರೈತರ ಹಣ ದುರುಪಯೋಗವಾಗಿದ್ದು ಈ ವರೆಗೂ ರೈತರಿಗೆ ನ್ಯಾಯ ಸಿಕ್ಕಿಲ್ಲ ಎಂದು ಆರೋಪಿಸಿದ ಅವರು, ತಂಬಾಕು ಮಂಡಳಿ ಪ್ರಾರಂಭವಾಗಿದಾಗಿನಿಂದ ಇಲ್ಲಿಯ ತನಕ ಈ ವರ್ಷದಷ್ಟು ಬೆಲೆ ಎಂದೂ ಕುಸಿತವಾಗಿರಲ್ಲಿಲ್ಲ ಆದರೆ ಈ ಬಾರಿ ಮಾರುಕಟ್ಟೆ ಕುಸಿತಗೊಂಡು ರೈತ ಅಪಾರ ಪ್ರಮಾಣದ ನಷ್ಟವನ್ನು ಅನುಭವಿಸಿರುವ ಈ ಸಂದರ್ಭದಲ್ಲಿ ರೈತರಿಗೆ ಇಲ್ಲಿನ ಸಿಬ್ಬಂದಿಗಳು ಹಾಗೂ ಅಧಿಕಾರಿಗಳು ಅನ್ಯಾಯ ಮಾಡುತ್ತಿರುವುದು ಖಂಡನೀಯ ಹಾಗಾಗಿ ಈ ಬಗ್ಗೆ ಕೇಂದ್ರ ವಾಣಿಜ್ಯ ಮಂಡಳಿ ರೈತರಿಗೆ ನ್ಯಾಯ ಒದಗಿಸುವ ಮೂಲಕ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಕೀಲ ಸಿ.ಜೆ.ಗಣೇಶ್, ತಂಬಾಕು ಬೆಳೆಗಾರರಾದ ಸಿ.ಡಿ.ರವಿಕುಮಾರ್, ಸಿ.ಟಿ.ಜಲೇಂದ್ರ, ಶ್ರೀಕಾಂತ್, ಶಿವಣ್ಣ, ಹರೀಶ್, ಮಂಜುನಾಥ್, ಶಭರೀಶ್, ಮಾಗಳಿ ಶಂಕರ್, ಶಿವರಾಜ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಮತಪತ್ರಕ್ಕೆ 'ಡಬಲ್ ಎಂಟ್ರಿ': ಚುನಾವಣಾ ಆಯೋಗದ ಮೊರೆ ಹೋದ ರಾಜೇಗೌಡ

**ಬೆಂಗಳೂರು:** ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಹೈಕೋರ್ಟ್ ನಿರ್ದೇಶನದಂತೆ ಅಂಚೆ ಮತಪತ್ರಗಳ ಮರು ಎಣಿಕೆಯಲ್ಲಿ ಶಾಸಕ ಸ್ಥಾನ ಕಳೆದುಕೊಂಡಿರುವ ಟಿ.ಡಿ.ರಾಜೇಗೌಡ ಅವರು, ಮತಪತ್ರಗಳ ತಿದ್ದುಪಡಿ, ನಕಲಿ ದಾಖಲೆ ಸೃಷ್ಟಿ ಮತ್ತು ಅಪರಾಧ ಸಂಚು ಮಾಡಲಾಗಿದೆ ಎಂದು ಆರೋಪಿಸಿ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗೆ ದೂರು ಸಲ್ಲಿಸಿದ್ದಾರೆ.

ಸತ್ಯ ಹೊರಬರಲು 2023ರ ಮೇ 13ರಂದು ನಡೆದ ಮೊದಲ ಮತ ಎಣಿಕೆಯ ದಿನದ ಎಲ್ಲಾ ಸಿಸಿಟಿವಿ ದೃಶ್ಯಾವಳಿಗಳನ್ನು ತಮ್ಮ ಸಮ್ಮುಖದಲ್ಲಿ ಮರು ಪರಿಶೀಲಿಸಬೇಕೆಂದು ರಾಜೇಗೌಡ ಮನವಿ ಮಾಡಿದ್ದಾರೆ.

ಶೃಂಗೇರಿ ಕ್ಷೇತ್ರದಲ್ಲಿ ತಿರಸ್ಕೃತಗೊಂಡಿದ್ದ 279 ಅಂಚೆ ಮತಪತ್ರಗಳ ಬಗ್ಗೆ ಮಾತ್ರ ಜೀವರಾಜ್ ಆಕ್ಷೇಪ ವ್ಯಕ್ತಪಡಿಸಿದ್ದರು. ಮರು ಪರಿಶೀಲಿಸಲು ಹೈಕೋರ್ಟ್ ಆದೇಶಿಸಿತ್ತು ಎಂದು ಕಾಂಗ್ರೆಸ್ ನಾಯಕ ಹೇಳಿದರು.

2026ರ ಮೇ 2ರಂದು ನಡೆದ ಮರು ಎಣಿಕೆಯಲ್ಲಿ ತಿರಸ್ಕೃತಗೊಂಡ ಅಂಚೆ ಮತಪತ್ರಗಳಲ್ಲಿ ಕೇವಲ ಎಂಟು ಮತಪತ್ರಗಳನ್ನು ಮಾತ್ರ ಎಣಿಕೆಗೆ ಅಂಗೀಕರಿಸಲಾಯಿತು. ಅದರಲ್ಲಿ ಮೂರು ತಾಂತ್ರಿಕ ಕಾರಣಗಳಿಂದ ತಿರಸ್ಕೃತಗೊಂಡಿದ್ದವು. ಉಳಿದ ಐದು ಮತಪತ್ರಗಳಲ್ಲಿ ಮೂರು ನನ್ನ ಪರವಾಗಿದ್ದರೆ, ಎರಡು ಜೀವರಾಜ್ ಪರವಾಗಿದ್ದವು. ಆದರೆ ನನ್ನ ಕಟ್ಟುಗಳಲ್ಲಿ ಇದ್ದ 257 ಮಾನ್ಯ ಮತಪತ್ರಗಳನ್ನು ಡಬಲ್ ಎಂಟ್ರಿ ಕಾರಣ ನೀಡಿ ತಿರಸ್ಕರಿಸಲಾಗಿದೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಸರ್ಕಾರಿ ಅಧಿಕಾರಿಗಳು ಮತಪತ್ರಗಳನ್ನು ತಿರಸ್ಕರಿಸುವುದು ಸಾಧ್ಯವಿಲ್ಲ. ಪಿತೂರಿ ನಡೆದಿದೆ ಎಂದು ರಾಜೇಗೌಡ ಆರೋಪ ಮಾಡಿದ್ದಾರೆ.

2023ರ ಎಲ್ಲಾ ಸಹಿಗಳಿರುವ ತೀರ್ಮಾನ ಪುಸ್ತಕವನ್ನೂ ಬದಲಾಯಿಸಲಾಗಿದೆ. ಸ್ಟ್ರಾಂಗ್ ರೂಮ್‌ನಲ್ಲಿ ಹಾನಿಗೊಳಗಾದ ಪೆಟ್ಟಿಗೆಗಳ ಬಗ್ಗೆ ನನ್ನ ಏಜೆಂಟ್ ಆಕ್ಷೇಪ ವ್ಯಕ್ತಪಡಿಸಿದ್ದರು ಎಂದು ರಾಜೇಗೌಡ ತಿಳಿಸಿದ್ದಾರೆ. ಅಧಿಕಾರಿಗಳು ಮತ್ತು ಅಭ್ಯರ್ಥಿಯ ವಿರುದ್ಧ ಜನಪ್ರತಿನಿಧಿತ್ವ ಕಾಯ್ದೆಯ ಸೆಕ್ಷನ್ 136ರ ಅಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಅವರು ಮುಖ್ಯ ಚುನಾವಣಾಧಿಕಾರಿಗೆ ಮನವಿ ಮಾಡಿದ್ದಾರೆ.

# ಆರೋಗ್ಯ, ಸಂಸ್ಕೃತಿ ಕಾಪಾಡುವ ಪ್ರಯತ್ನ ಅನನ್ಯ: ಸುತ್ತೂರು ಸ್ವಾಮೀಜಿ

## ಜೆಸಿಎಸಿಯಲ್ಲಿ ಚರಕದ ಕೈಮಗ್ಗ ಉತ್ಪನ್ನಗಳ ಪ್ರದರ್ಶನ, ಮಾರಾಟ ಮತ್ತು ಕೊಡು-ಕೊಳ್ಳುವವರ ಸಮಾವೇಶಕ್ಕೆ ಚಾಲನೆ



**ಮೈಸೂರು:** ಭಾರತೀಯ ಸಂಸ್ಕೃತಿಯಲ್ಲಿ ಹಲ ವಾರು ಆಚರಣೆಗಳಿದ್ದು,. ಅವುಗಳಲ್ಲಿ ಮೌಢ್ಯ ವೆಷ್ಟು? ವೈಚಾರಿಕತೆ ಎಷ್ಟು? ಎಂದು ಅವಲೋ ಕಿಸಿ ಆಚರಿಸುವುದರಿಂದ ಆರೋಗ್ಯ ಮತ್ತು ಸಂಸ್ಕೃತಿ ಎರಡನ್ನೂ ಕಾಪಾಡಿಕೊಳ್ಳಲು ಸಾಧ್ಯ ವಿದೆ ಎಂದು ಸುತ್ತೂರು ಶ್ರೀವೀರ ಸಿಂಹಾಸನ ಮಹಾಸಂಸ್ಥಾನ ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹೇಳಿದರು.

ನಗರದ ವಿಜಯನಗರದ ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್ (ಜೆಸಿಎಸಿ) ನಲ್ಲಿ ಸಾಗರ ತಾಲ್ಲೂಕಿನ ಹೆಗ್ಗೋಡು-ಭೀಮನಕೋಣೆಯ ಚರಕ ಮಹಿಳಾ ವಿವಿಧೋದ್ದೇಶ ಕೈಗಾರಿಕಾ ಸಹಕಾರ ಸಂಘವು ಹಮ್ಮಿಕೊಂಡಿರುವ ಮೂರು ದಿನಗಳ ನೈಸರ್ಗಿಕ ಬಣ್ಣದ ಅಪ್ಪಟ ಹತ್ತಿ ಕೈಮಗ್ಗ ಉತ್ಪನ್ನಗಳ ಪ್ರದರ್ಶನ, ಮಾರಾಟ ಮತ್ತು ಕೊಡು-ಕೊಳ್ಳುವವರ ಸಮಾವೇಶಕ್ಕೆ ಶುಕ್ರ ವಾರ ಚಾಲನೆ ನೀಡಿ ಅವರು ಮಾತನಾಡಿದರು.

ಈ ಆಧುನಿಕ ಯುಗದಲ್ಲಿ ಮನುಷ್ಯನಿಗೆ ಆರೋಗ್ಯ ಬಹಳ ಮುಖ್ಯ. ಅದೇ ವೇಳೆ ಆತ ಪರಂಪರೆಯ, ಸಂಸ್ಕೃತಿಯ ಮೌಲ್ಯಗಳನ್ನು ಹೊಂದುವುದೂ ಕೂಡ ಅಗತ್ಯ. ಈ ನಿಟ್ಟಿನಲ್ಲಿ

ಹೆಗ್ಗೋಡಿನ ಚರಕ ಸಂಸ್ಥೆ ಹಲವು ದಶಕಗಳಿಂದ ಕೆಲಸ ಮಾಡುತ್ತಾ ಬಂದಿದೆ. ಇದನ್ನು ಪ್ರೋತ್ಸಾಹಿಸುವ ಕೆಲಸ ಸಮಾಜ- ಸರ್ಕಾರಗಳು ಮಾಡಬೇಕಿದೆ ಎಂದು ಹೇಳಿದರು.

ಮೈಸೂರು ಬುಕ್ ಕ್ಲಬ್ಸ್ ಚಾರಿಟೆಬಲ್ ಟ್ರಸ್ಟ್‌ನ ಸಂಸ್ಥಾಪಕಿ ಶುಭಾ ಸಂಜಯ್ ಅರಸ್ ಮಾತನಾಡಿ, 'ಚರಕ' ಎಂದಾಕ್ಷಣ ಗಾಂಧೀಜಿ ನೆನಪಾಗುತ್ತಾರೆ. ಪ್ರತಿ ಎಳೆಯೂ ಒಂದು ಕಥೆಯನ್ನು ಹೇಳುತ್ತದೆ ಸ್ವಾತಂತ್ರ್ಯದ, ಕೌಶಲ್ಯದ ಮತ್ತು ಸುಸ್ಥಿರತೆಯ ಕಥೆ. ಸ್ವಾತಂತ್ರ್ಯ ಚಳುವಳಿ ಕಣ್ಮುಂದೆ ಬರುತ್ತದೆ. ಇದೇ ಚರಕ ಇವತ್ತು ಸುಸ್ಥಿರತೆಯ ಸಂಕೇತವಾಗಿ, ಕೌಶಲ್ಯದ ಪ್ರತೀಕವಾಗಿ ನೂರಾರು ಮಹಿಳೆಯರ ಬದುಕನ್ನು ರೂಪಿಸುತ್ತಿರುವುದು ಹೆಮ್ಮೆ ತಂದಿದೆ, ಸ್ವದೇಶಿ ಹೆಮ್ಮೆಯ ಮುದ್ರೆಯನ್ನು ಹೊಂದಿದೆ. ನಮ್ಮ ನಾಡು ನಮ್ಮತನ ಬೆಳೆಸೋಣ ಎಂದರು.

### ಆರೋಗ್ಯ ಬಟ್ಟೆಗಳ ಅನಾವರಣ

ಚರಕ ಸಂಸ್ಥಾಪಕ, ರಂಗಕರ್ಮಿ ಪ್ರಸನ್ನ ಪ್ರಾಸ್ತಾವಿಕ ಮಾತನಾಡಿ, ಚರಕ ಹಲವು ಬಗೆಯ ಆವಿಷ್ಕಾರದಲ್ಲಿ ತೊಡಗಿದ್ದು, ಆರೋಗ್ಯಕ್ಕೆ ಪೂರಕವಾದ ಅರಿಶಿಣ ಮತ್ತು ಬೇವಿನ ಬಣ್ಣದಲ್ಲಿ ಮಕ್ಕಳ ಒಳಬಟ್ಟೆ, ಮಠಾಧೀಶರು ತೊಡುವ ಖಾಷಾಯ ಬಟ್ಟೆಗಳನ್ನು ಅನಾವರಣಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಧ್ಯಕ್ಷತೆಯನ್ನು ಚರಕದ ಅಧ್ಯಕ್ಷೆ ಮಹಾಲಕ್ಷ್ಮೀ ವಹಿಸಿದ್ದರು. ಕಾರ್ಯಕ್ರಮದಲ್ಲಿ ಚರಕದ ಸಿಇಓ ಟೆರೆನ್ಸ್ ಪೀಟರ್, ಮಾರುಕಟ್ಟೆ ವಿಭಾಗದ ವ್ಯವಸ್ಥಾಪಕ ಕೃಷ್ಣ, ಮಧುರಾ ಮತ್ತಿತರರು ಉಪಸ್ಥಿತರಿದ್ದರು. ವಿನ್ಯಾಸ ವಿಭಾಗದ ಮುಖ್ಯಸ್ಥೆ ಪದ್ಮಶ್ರೀ ನಿರೂಪಿಸಿದರು.

### ಚರಕಕ್ಕೆ ರಿಬೇಟ್ ಸೌಲಭ್ಯಕ್ಕೆ ಪ್ರಸ್ತಾವನೆ

**ಚರಕಕ್ಕೆ ಸರ್ಕಾರದ ರಿಬೇಟ್ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ಸರ್ಕಾರಕ್ಕೆ ಶೀಘ್ರ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಬೆಂಗಳೂರು ದಕ್ಷಿಣ ವಲಯದ ಜಂಟಿ ನಿರ್ದೇಶಕ ಬಿ.ಆರ್. ಯೋಗೇಶ್ ಭರವಸೆ ನೀಡಿದರು. ಚರಕಕ್ಕೆ ಇಲಾಖೆಯ ಸೌಲಭ್ಯ ಪಡೆಯಬೇಕಾದರೆ ಈಗಿರುವ ನಿಬಂಧನೆಗಳಿಗೆ ತಿದ್ದುಪಡಿ ತರಬೇಕಾಗಿದೆ. ಈ ನಿಟ್ಟಿನಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ತುರ್ತು ಗಮನ ಹರಿಸಲಿದೆ ಎಂದರು.**

### ಬದನವಾಳದಲ್ಲಿ ಗ್ರಾಮೀಣ ಸಂಸ್ಕೃತಿ ಅರಳಲಿ

**ಬದನವಾಳದಲ್ಲಿ ಗುಡಿ ಕೈಗಾರಿಕೆ ಸಂಸ್ಕೃತಿಯೇ ಉಳಿಯಬೇಕು ಎಂದು ಸ್ವಾಮೀಜಿ ಪ್ರತಿಪಾದಿಸಿದರು. ಬದನವಾಳದಲ್ಲಿ ಗುಡಿ ಕೈಗಾರಿಕೆ ಸಂಸ್ಕೃತಿ ಉಳಿಸುವ ನಿಟ್ಟಿನಲ್ಲಿ ಪ್ರಸನ್ನ ಅವರ ನೇತೃತ್ವದಲ್ಲಿ ಕೈಗೊಂಡ ಸತ್ಯಾಗ್ರಹ ಕಾರಣದಿಂದ ಸರ್ಕಾರ ಈಚೆಗೆ ಅನುದಾನ ಬಿಡುಗಡೆ ಮಾಡಿದೆ. ಅದೇ ಉದ್ದೇಶಕ್ಕೆ ಹಣ ವೆಚ್ಚವಾಗಬೇಕು ಎಂದು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಆಗ್ರಹಿಸಿದರು.**

# ಸುವರ್ಣ ಬೆಳಕು ಫೌಂಡೇಷನ್ ವತಿಯಿಂದ ಮೇ 10ರಂದು ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ

**ಮೈಸೂರು:** ಸುವರ್ಣ ಬೆಳಕು ಫೌಂಡೇಷನ್ ವತಿಯಿಂದ ಇದೇ ಮೇ 10ರಂದು ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಮೈಸೂರಿನ ಪ್ರತಿಷ್ಠಿತ ಶಾಲೆಯಾದ ಶ್ರೀಕಾಂತ್ ವಿದ್ಯಾ ಸಂಸ್ಥೆಯಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಅಂದು ಬೆಳಿಗ್ಗೆ ಉದ್ಘಾಟನಾ ಸಮಾರಂಭ ಹಾಗೂ ಸಂಜೆ ಸಮಾರೋಪ ಸಮಾರಂಭ ನಡೆಯಲಿದೆ.

ಕಾರ್ಯಕ್ರಮದ ಅಂಗವಾಗಿ ಯೋಗ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಸಹ ಆಯೋಜಿಸಲಾಗಿದೆ.

ವಿಶೇಷವಾಗಿ ಸ್ಪರ್ಧೆಯಲ್ಲಿ "ಚಾಂಪಿಯನ್ ಆಫ್ ಚಾಂಪಿಯನ್" ಟ್ರೋಫಿ ಗೆದ್ದವರಿಗೆ ಸುವರ್ಣ ಬೆಳಕು ಫೌಂಡೇಷನ್ ಲೋಗೋ ವಿನ್ಯಾಸ ಹೊಂದಿರುವ ವಿಶೇಷ ಟ್ರೋಫಿಯನ್ನು ಪ್ರದಾನ ಮಾಡಲಾಗುವುದು ಎಂದು ಸಂಸ್ಥೆಯ ಆಯೋಜಕರು ತಿಳಿಸಿದ್ದಾರೆ.

ಆದ್ದರಿಂದ ಅಂದು ಮಾಧ್ಯಮ ಮಿತ್ರರು ಕಾರ್ಯಕ್ರಮಕ್ಕೆ ಆಗಮಿಸಿ ಹೆಚ್ಚಿನ ರೀತಿಯಲ್ಲಿ ಪ್ರಚಾರ ನೀಡುವಂತೆ ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 9448980010

### ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಲ್ಲಿ ಬಿಡುಗಡೆಯಾದ 5 ಕೋಟಿ ರೂ,

# ಅನುದಾನ ಏನಾಯಿತು? ಅಧಿಕಾರಿಗಳ ವಿರುದ್ಧ ಶಾಸಕ ಸಿ.ಪುಟ್ಟರಂಗಶೆಟ್ಟಿ ಗರಂ



**ಚಾಮರಾಜನಗರ:** ಬಹುಗ್ರಾಮ ಕುಡಿಯುವ ನೀರಿಗೆ 2025-26ನೇ ಸಾಲಿನಲ್ಲಿ ಸುಮಾರು 5 ಕೋಟಿ ರೂ, ಅನುದಾನ ಬಿಡುಗಡೆಯಾಗಿದ್ದು, ಅದು ಏನಾಯಿತು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ನಗರದ ನೂತನ ಕೆ.ಡಿ.ಪಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಜೆಇ ಸಂತೋಷ್ ಕುಮಾರ್ ಮತ್ತು ತಾಲೂಕು ಪಂಚಾಯಿತಿ ಇಓ ಗಿರಿಧರ್ ಅವರನ್ನು ತರಾಟೆಗೆ ತೆಗೆದುಕೊಂಡ ಶಾಸಕರು, ಬಹುಗ್ರಾಮ ಕುಡಿಯುವ ನೀರು ಯೋಜನೆಗೆ ಬಿಡುಗಡೆಯಾದ 5 ಕೋಟಿ ರೂ, ಅನುದಾನವನ್ನು ಹೇಗೆ ಖರ್ಚು ಮಾಡಿದ್ದೀರಿ ಎಂಬ ಮಾಹಿತಿಯನ್ನು ನೀಡಿ ಎಂದು ಪಟ್ಟು ಹಿಡಿದರು.

ಆಡಳಿತ ಅನುಮೋದನೆಯನ್ನೇ ಪಡೆಯದೇ ಹೇಗೆ ಹಣವನ್ನು ಖರ್ಚು ಮಾಡಿದ್ದೀರಿ ಎಂದು ತರಾಟೆಗೆ ತೆಗೆದುಕೊಂಡರು. ಭೋಗಾಪುರದಲ್ಲಿ ಬೋರ್ ವೆಲ್ ಕೊರೆಯಲಾಗಿದೆ. ಆದರೆ ನೀರು ಬರದಿದ್ದರೂ ಪೈಪ್ ಲೈನ್ ಮಾಡಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಅಧಿಕಾರಿಗಳ ವಿರುದ್ಧ ಗರಂ ಆದರು.

ಸಚಿವ ಕೆ.ವೆಂಕಟೇಶ್ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು, ಕೆಲಸ ಮಾಡದೇ ಹೇಗೆ ಬಿಲ್ ಮಾಡಿ ಕೊಡುತ್ತೀರಿ ಎಂದು ಪ್ರಶ್ನಿಸಿದರು. ಅಧಿಕಾರಿಗಳು ಪಾರದರ್ಶಕತೆಯಿಂದ ಕೆಲಸ ಮಾಡಬೇಕು. ಆಗಾದರೆ ಇಲಾಖೆಯಲ್ಲಿ ಏನು ನಡೆಯುತ್ತಿದೆ. ಅಧಿಕಾರಿಗಳು ಮಾಡುವ ತಪ್ಪುಗಳಿಂದ ಜನರಿಂದ ಬಯ್ಗಳ ಕೇಳಬೇಕಾಗಿದೆ ಎಂದು ಅಸಮಾದಾನ ಹೊರಹಾಕಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಲ್ಲಿ ಬಿಡುಗಡೆಯಾದ ಅನುದಾನದಲ್ಲಿ ನೀರು ಪೂರೈಕೆ ಮಾಡಲು ಬಳಸಲಾಗಿದೆ ಎಂದು ಅಧಿಕಾರಿಗಳು ಸಮಾಜಾಯಿಷಿ ನೀಡಲು ಮುಂದಾದರು. ಆದರೆ ಅಧಿಕಾರಿಗಳ ಮಾತಿಗೆ ಕಿಡಿಕಾರಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಈ ಉತ್ತರವನ್ನು ನಿಮ್ಮಿಂದ ನಿರೀಕ್ಷೆ ಮಾಡಬೇಕಾ? ಇಂತಹ ತಪ್ಪು ಮಾಹಿತಿಗಳನ್ನು ನೀಡುತ್ತಿದ್ದಾರೆ ಎಂದು ಹೇಳಿದರು.

ಈ ಕುರಿತು ತನಿಖೆ ಮಾಡಿ, ಅಗತ್ಯ ಮಾಹಿತಿಯನ್ನು ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಜಿಲ್ಲಾ ಪಂಚಾಯಿತಿ ಸಿಇಓ ಮೋನಾರೋತ್ ಅವರಿಗೆ ಸೂಚಿಸಿದರು.

ಶಾಸಕರಾದ ಎಚ್.ಎಸ್ ಪ್ರಸಾದ್, ಮಂಜುನಾಥ್, ಜಿಲ್ಲಾಧಿಕಾರಿ ಶ್ರೀ ರೂಪ, ಜಿ.ಪಂ. ಸಿಇಓ ಮೊನೋರೋತ್, ಜಿಲ್ಲಾ ಗ್ಯಾರೆಂಟಿ ಸಮಿತಿಗಳ ಅಧ್ಯಕ್ಷ ಚಂದ್ರು ಹಾಗೂ ಇತರರು ಹಾಜರಿದ್ದರು.

# 12ರಿಂದ ಹೈಲೈಫ್‌ನ ಶಾಪಿಂಗ್ ಮಹೋತವ

**ಮೈಸೂರು:** ನಗರದ ರ‍್ಯಾಡಿಸನ್ ಬ್ಲ್ಯೂ ಹೋಟೆಲ್‌ನಲ್ಲಿ ಮೇ 12 ಮತ್ತು 13 ರಂದು ಬೆಳಗ್ಗೆ 10 ರಿಂದ ರಾತ್ರಿ 9 ರವರೆಗೆ ಹೈಲೈಫ್ ಸಂಸ್ಥೆ ವತಿಯಿಂದ ಎರಡು ದಿನಗಳ ಶಾಪಿಂಗ್ ಮಹೋತ್ಸವ ಹಮ್ಮಿಕೊಂಡಿರುವುದಾಗಿ ಆಯೋಜಕರಾದ ಶೋಮಿಕಾ ಎಸ್. ರಾವ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ದೇಶದ ವಿವಿಧ ಭಾಗಗಳಿಂದ ಬಂದಿರುವ ಅತ್ಯುತ್ತಮ ಉಡುಪು, ಆಭರಣ, ಫ್ಯಾಷನ್ ವಸ್ತುಗಳು, ಲೆಹೆಂಗಾ, ಸೀರೆ, ಗೌನ್ ಮೊದಲಾದವು ಇಲ್ಲಿ ಪ್ರದರ್ಶನ ಮತ್ತು ಮಾರಾಟಕ್ಕೆ ಇರಲಿವೆ. ದುಬಾರಿ ಎಂದು ಅಂಜುವ ಅಗತ್ಯವೂ ಇಲ್ಲ. ಕೇವಲ ನೂರು ರೂ.ಗೂ ಸಿಗುವ ವಸ್ತುಗಳು ಇಲ್ಲಿರಲಿವೆ ಎಂದರು. ಸಂಯೋಜಕ ಎಸ್. ಶ್ರೀಕಾಂತ್ ಇದ್ದರು.

# ಬಸವ ಜಯಂತಿ ಅಂಗವಾಗಿ ಕುರುಕ್ಷೇತ್ರ ನಾಟಕ ಪ್ರದರ್ಶನ: ಶಾಸಕ ಹೆಚ್.ಟಿ.ಮಂಜು



**ಕೆ.ಆರ್.ಪೇಟೆ:** ರಂಗಕಲೆಯನ್ನು ಇನ್ನು ಜೀವಂತವಾಗಿಟ್ಟುಕೊಂಡು ಮುಂದಿನ ಪೀಳಿಗೆಗೆ ಕೊಡುಗೆ ನೀಡಲು ತಾಲ್ಲೂಕಿನ ರಂಗ ಕಲಾವಿದರು ಶ್ರಮಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಹಾಗಾಗಿ ಸಾರ್ವಜನಿಕರು ನಾಟಕಗಳನ್ನು ನೋಡಿ ಪ್ರೋತ್ಸಾಹಿಸುವ ಮೂಲಕ ನಮ್ಮ ಸಂಸ್ಕೃತಿ ಪರಂಪರೆಯನ್ನು ಸಂರಕ್ಷಣೆ ಮಾಡಲು ಸಹಕಾರ ನೀಡಬೇಕು ಎಂದು ಶಾಸಕ ಹೆಚ್.ಟಿ. ಮಂಜು ಹೇಳಿದರು.

ಅವರು ತಾಲ್ಲೂಕಿನ ಬೂಕನಕೆರೆ ಹೋಬಳಿಯ ದೊಡ್ಡಯಾಚೇನಹಳ್ಳಿ ಗ್ರಾಮದಲ್ಲಿ ರಂಗದ ಹಬ್ಬ ಹಾಗೂ ಜಗಜ್ಯೋತಿ ಶ್ರೀ ಬಸವ ಜಯಂತಿ ಕಾರ್ಯಕ್ರಮದ ಅಂಗವಾಗಿ ಗ್ರಾಮದ ಶ್ರೀ ಬವೇಶ್ವರರ ಕೃಫಾ ಪೋಷಿತ ನಾಟಕ ಮಂಡಳಿ ಹಾಗೂ ಡಾ. ರಾಜ್ ರಂಗ ಕಲಾ ಸಂಘದ ವತಿಯಿಂದ ಆಯೋಜಿಸಿದ್ದ "ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾಟಕಗಳು ಸಮಾಜದ ಕನ್ನಡಿ ಇದ್ದಂತೆ. ರಂಗ ವೇದಿಕೆಯ ಮೇಲೆ ಪಾತ್ರದಾರಿಗಳ ಮೂಲಕ ತೋರಿಸುವ ಕಥೆಗಳು ಮತ್ತು ಪಾತ್ರಗಳು ಜನರ ಮನಸ್ಸಿಗೆ ನೇರವಾಗಿ ತಲುಪಿ ಬದಲಾವಣೆ ತರುತ್ತವೆ. ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ನಾಟಕಗಳು ಪ್ರದರ್ಶನಗೊಳ್ಳುತ್ತಿರುವುದು ಸಂತೋಷದ ವಿಚಾರ. ನಶಿಸಿ ಹೋಗುತ್ತಿರುವ ರಂಗ ಕಲೆಯನ್ನು ಉಳಿಸಿ ಬೆಳೆಸಬೇಕಿದೆ ಎಂದು ಸಲಹೆ ನೀಡಿದರು. ಗ್ರಾಮದ ಮುಖ್ಯ ರಸ್ತೆಯ ಅಭಿವೃದ್ಧಿಗೆ 25ಲಕ್ಷ ರೂಪಾಯಿಗಳ ಅನುಧಾನವನ್ನು ನೀಡುವುದಾಗಿ ಶಾಸಕರು ಭರವಸೆ ನೀಡಿದರು.

ಪಾಂಡವಪುರ ತಾಲ್ಲೂಕಿನ ಬೇಬಿಬೆಟ್ಟದ ಶ್ರೀ ಶಿವಬಸವಸ್ವಾಮೀಜಿ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಶ್ರೀಗಳಾದ ಬಸವ ಪೌರಾಣಿಕ ನಾಟಕಗಳು ಕೇವಲ ದೇವರ ಕಥೆಯಲ್ಲ. ಇಂದಿನ ಬದುಕಿಗೆ ಬೇಕಾದ ನೈತಿಕ ದಿಕ್ಸೂಚಿ. ಯಕ್ಷಗಾನ, ಬಯಲಾಟಗಳಲ್ಲಿ ಇವೇ ಕಥೆಗಳು ಇಂದಿಗೂ ಜನರಿಗೆ ನೀತಿ ಹೇಳುತ್ತಿವೆ. ಧರ್ಮರಾಯನ ಧರ್ಮ ನಿಷ್ಠೆ, ಶ್ರೀರಾಮನ ಪಿತೃವಾಕ್ಯ ಪರಿಪಾಲನೆ, ಕರ್ಣನ ದಾನಶೂರತೆ, ಹರಿಶ್ಚಂದ್ರನ ಸತ್ಯನಿಷ್ಠೆ ಹೀಗೆ ಮಹಾಭಾರತ-ರಾಮಾಯಣ ನಾಟಕಗಳು ಮನುಷ್ಯನಿಗೆ ಧರ್ಮಕ್ಕಾಗಿ ನಿಲ್ಲೋದನ್ನು ಕಲಿಸುತ್ತವೆ. ಕೌರವ-ಪಾಂಡವರ ಯುದ್ಧ, ರಾಮ-ರಾವಣರ ಸಂಘರ್ಷದ ಮೂಲಕ ಅಧರ್ಮದ ಸೋಲು, ಧರ್ಮಕ್ಕೆ ಎಂದಿಗೂ ಇದ್ದೇ ಇದೆ ಎಂಬುದನ್ನು ತೋರಿಸುತ್ತದೆ. ಭಕ್ತ ಪ್ರಹ್ಲಾದದಿಂದ ಭಕ್ತಿ, ಶ್ರವಣಕುಮಾರನಿಂದ ಮಾತೃ-ಪಿತೃ ಭಕ್ತಿ, ಸೀತೆಯಿಂದ ಸಹನೆ ಮತ್ತು ತ್ಯಾಗ, ಮಾಡಿದ ಕರ್ಮಕ್ಕೆ ಫಲ ಇದ್ದೇ ಇದೆ ಎಂಬುದನ್ನು ದಶರಥ, ಪಾಂಡು, ಗಾಂಧಾರಿಯ ಕಥೆಗಳು ಹೇಳುತ್ತವೆ. ದ್ರೌಪದಿ, ಸೀತೆ, ಸಾವಿತ್ರಿಯರ ಪಾತ್ರಗಳು ಧೈರ್ಯ, ಪಾತಿವ್ರತ್ಯ, ಬುದ್ಧಿವಂತಿಕೆಯನ್ನು ಎತ್ತಿ ತೋರಿಸುತ್ತವೆ. ಏಕಲವ್ಯ, ಅರ್ಜುನ-ದ್ರೋಣರ ಕಥೆಗಳು ಶ್ರದ್ಧೆ ಮತ್ತು ವಿದ್ಯೆಯ ಮಹತ್ವ ಸಾರುತ್ತವೆ. ಹೀಗೆ ರಾಮಾಯಣ, ಮಹಾಭಾರತ ನಾಟಕಗಳು ಉತ್ತಮ ಗುಣಗಳನ್ನು ಬೆಳೆಸುವ ಮೂಲಕ ಸನ್ಮಾರ್ಗಕ್ಕೆ ದಾರಿ ತೋರಿಸುತ್ತವೆ ಹಾಗಾಗಿ ಸಿನಿಮಾ, ಧಾರಾವಾಹಿಗಳಿಗಿಂತ ಪೌರಾಣಿಕ ನಾಟಕಗಳು ಪ್ರಸ್ತುತ ಸಮಾಜಕ್ಕೆ ಉತ್ತಮ ಸಂದೇಶ ರವಾನೆಯಾಗುತ್ತದೆ. ಸಮಾಜವು ಉತ್ತಮ ದಿಕ್ಕಿನಲ್ಲಿ ಸಾಗಲು ಸಾಧ್ಯವಾಗುತ್ತದೆ ಹಾಗಾಗಿ ಪೌರಾಣಿಕ ನಾಟಕ ಕಲೆಯನ್ನು ಉಳಿಸಿ ಬೆಳೆಸಿಕೊಂಡು ಹೋಗಲು ಕಲಾವಿದರಿಗೆ ನಾವೆಲ್ಲರೂ ಕೇವಲ ನಾಟಕ ನೋಡಿ ಪ್ರೋತ್ಸಾಹಿಸಿ, ರಂಗಕಲೆ ಉಳಿಸಲು ಸಹಕಾರ ನೀಡಬೇಕು ಎಂದು ಶ್ರೀಗಳು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಟಿ.ಎ.ಪಿ.ಸಿ.ಎಂ.ಎಸ್. ಸಂಸ್ಥೆಯ ಅಧ್ಯಕ್ಷ ಬಲದೇವ್, ತಾಲ್ಲೂಕು ವೀರಶೈವ-ಲಿಂಗಾಯಿತ ಮಹಾಸಭಾ ಅಧ್ಯಕ್ಷ ಸುಜೇಂದ್ರಕುಮಾರ್, ತಾಲ್ಲೂಕು ವೀರಶೈವ ಮಹಾಸಭಾ ನಿರ್ದೇಶಕ ಮಂಚೀಬೀಡು ಬಸವಲಿಂಗಪ್ಪ, ಚೋಕನಹಳ್ಳಿ ಮಹಾದೇವಪ್ಪ, ಚೋಕನಹಳ್ಳಿ ಪ್ರಕಾಶ್, ರಾಜಶೇಖರ್, ದಯಾನಂದ್, ಪ್ರಭುಸ್ವಾಮಿ, ರುದ್ರಬಸಪ್ಪ, ರಮೇಶ್, ಶ್ರೀಧರ್, ಶಿವಮೂರ್ತಿ, ವಿಶ್ವನಾಥ್, ಕೃಷ್ಣಾಚಾರ್ ತಾಲ್ಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವೇಗೌಡ, ತಾಲ್ಲೂಕು ಯುವ ಜೆಡಿಎಸ್ ಉಪಾಧ್ಯಕ್ಷ ಬೇಲದಕೆರೆ ಮರೀಗೌಡ, ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್, ಕಲಾವಿದರಾದ ತಂದ್ರೆ ಮಂಜು, ಹೊಸಹೊಳಲು ರಘು ಸೇರಿದಂತೆ ಹಲವು ಮುಖಂಡರು, ಕಲಾವಿದರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

# ಮೂಡಲಪುರ ಕೆರೆಯಲ್ಲಿ ಮೀನುಗಳ ಮಾರಣಹೋಮ: ಹಾಲಿನ ನಾಗರಾಜು ಅಕ್ರೋಶ

### ಕೆರೆಯ ನೀರು ಕುಡಿದು ಜಾನುವಾರುಗಳು ಸತ್ತರೆ ನಗರಸಭೆ ನೇರಹೊಣೆ

**ಚಾಮರಾಜನಗರ:** ನಗರದ 7ನೇ ವಾರ್ಡನ ಮೂಡಲಪುರ ಕೆರೆಗೆ ಒಳಚರಂಡಿಯ ನೀರು ನುಗ್ಗಿ ಕೆರೆಯಲ್ಲಿ ಮೀನುಗಳ ಮಾರಣಹೋಮವಾಗಿದೆ. ಇದಕ್ಕೆ ನಗರಸಭೆಯ ಅಧಿಕಾರಿಗಳೇ ಕಾರಣಕರ್ತರಾಗಿರುತ್ತಾರೆ ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ಹಾಲಿನ ನಾಗರಾಜು ಆರೋಪಿಸಿದ್ದಾರೆ.

ಆರು ತಿಂಗಳ ಹಿಂದೇನೇ ಕೆರೆಯಲ್ಲಿ ಮ್ಯಾನುಯಲ್ ಪೈಪ್ ಹೊಡೆದು ಹೋಗಿದೆ ದುರಸ್ತಿ ಪಡಿಸಿಕೊಡುವಂತೆ ಜಿಲ್ಲಾಧಿಕಾರಿ ಗಮನ ತರಲಾಯಿತು. ನಗರಸಭೆಯ ಪೌರಾಯುಕ್ತ ರು, ಎಇಇ ಅವರ ಗಮನಕ್ಕೂ ತಂದರು ಯಾವುದೇ ಪ್ರಯೋಜನವಾಗಲಿಲ್ಲ.ನಗರಸಭೆ ಅಧಿಕಾರಿಗಳು ಕ್ರಮಕೈಗೊಂಡದ್ದರೆ ನಮ್ಮೂರಿನ ಕೆರೆಯಲ್ಲಿ ಮೀನು ಸಾಯುತ್ತಿರಲಿಲ್ಲ. ಒಂದು ವೇಳೆ ಮೀನು ಸತ್ತಂತೆ ದನಕರುಗಳು ನೀರನ್ನು ಸೇವಿಸಿ ಸತ್ತರೇ ನಗರಸಭಾ ಅಧಿಕಾರಿಗಳೇ ನೇರಹೊಣೆ ಆಗಬೇಕಾಗುತ್ತದೆ ಎಂದು ಹಾಲಿನ ನಾಗರಾಜು ಎಚ್ಚರಿಸಿದ್ದಾರೆ.



### ಭೋಗಾಪುರ ಎಸ್ ಸಿ/ಎಸ್ ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ

# ಬಾಕಿ ಕಾಮಗಾರಿ ಪೂರ್ಣ ಗೂಳಿಸಲು ಕ್ರಮ: ಸಿ.ಪುಟ್ಟರಂಗಶೆಟ್ಟಿ

## ಸಾಂಸ್ಕೃತಿಕ, ಕ್ರೀಡೆ, ಎನ್.ಎಸ್.ಎಸ್, ರೆಡ್ ಕ್ರಾಸ್, ರೇಂಜರ್ಸ್, ರೋವರ್ಸ್ ಹಾಗೂ ವಿವಿಧ ಚಟುವಟಿಕೆಗಳ 2025-26ನೇ ಸಾಲಿನ ಸಮಾರೋಪ ಸಮಾರಂಭ

**ಚಾಮರಾಜನಗರ:** ತಾಲೂಕಿನ ಭೋಗಾಪುರ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕೆಲಸಗಳನ್ನು ಮಾಡಿಕೊಡುವುದಾಗಿ ಎಂಎಲ್ ಅಧ್ಯಕ್ಷರು, ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ತಾಲೂಕಿನ ಭೋಗಾಪುರ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಾಂಸ್ಕೃತಿಕ, ಕ್ರೀಡೆ, ಎನ್.ಎಸ್.ಎಸ್, ರೆಡ್ ಕ್ರಾಸ್, ರೇಂಜರ್ಸ್ ಮತ್ತು ರೋವರ್ಸ್ ಹಾಗೂ ವಿವಿಧ ಚಟುವಟಿಕೆಗಳ 2025-26 ನೇ ಸಾಲಿನ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕಾಲೇಜಿನ ಬೇಡಿಕೆಯಂತೆ ಸುತ್ತುಗೋಡೆ, ಹಾಸ್ಟೆಲ್ ವ್ಯವಸ್ಥೆ ಸೇರಿದಂತೆ ಬಾಕಿ ಕಾಮಗಾರಿ ಆದಷ್ಟು ಬೇಗ ಮಾಡಲಾಗುವುದು. ಅಲ್ಲದೇ ಎಂಎಲ್ ವತಿಯಿಂದ ಕಾಲೇಜಿಗೆ ಸದ್ಯದಲ್ಲೇ 50 ಡೆಸ್ಕ್ ಗಳು, ಕುಡಿಯುವ ನೀರಿನ ಸೌಕರ್ಯ ಒದಗಿಸಿಕೊಡಲಾಗುವುದು ಇದೊಂದು ಸುಸಜ್ಜಿತ ಕಾಲೇಜು ಆಗಲಿದೆ ಎಂದರು.



ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಶಿಕ್ಷಣದಿಂದ ಮಾತ್ರ ಎಲ್ಲವೂ ಸಾಧ್ಯವಾಗಿದೆ. ಆಗಾಗಿ ಸರ್ಕಾರದಿಂದ ದೊರೆಯುವ ಎಲ್ಲ ಸೌಕರ್ಯಗಳನ್ನು ಸದುಪಯೋಗ ಪಡಿಸಿಕೊಂಡು ಚೆನ್ನಾಗಿ ಓದಬೇಕು. ಪಠ್ಯ ದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಒತ್ತು ನೀಡಬೇಕು ಎಂದರು. ಸಿಡಿಎಸ್ ಸದಸ್ಯ ನಾಗೇಂದ್ರ ಭೋಗಾಪುರ ಮಾತನಾಡಿ, ಕಾಲೇಜಿನಲ್ಲಿ ವಿದ್ಯಾರ್ಥಿಗಳು ಚೆನ್ನಾಗಿ ಓದಿ ಕಾಲೇಜಿಗೆ ಶೇ.100 ರಷ್ಟು ಫಲಿತಾಂಶ ತಂದು ಕೊಡುವ ಮೂಲಕ ಶಾಸಕರಿಗೆ, ಕಾಲೇಜಿಗೆ, ಭೋಗಾಪುರಕ್ಕೆ ಕೀರ್ತಿ ತಂದು ಕೊಡಬೇಕು ಎಂದು ಸಲಹೆ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಸಾಹಿತಿ ಮಹದೇವ ಶಂಕನಪುರ ಸಮಾರೋಪ ಭಾಷಣದಲ್ಲಿ ಮಾತನಾಡಿ, ಜಿಲ್ಲೆಯ ಮಂಟೇಸ್ವಾಮಿ, ಮಹದೇಶ್ವರ ಕಾವ್ಯ ಗಳು ಜಾಗತಿಕ ಮಟ್ಟದಲ್ಲಿ ಪ್ರಾಮುಖ್ಯತೆ ಪಡೆದಿವೆ.ಇವುಗಳ ಬಗ್ಗೆ ಜಿಲ್ಲೆಯ ಯುವ ಜನಾಂಗ, ವಿದ್ಯಾರ್ಥಿಗಳು ಅಧ್ಯಯನ ಮಾಡಿ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಾಂಸ್ಕೃತಿಕ ವೇದಿಕೆ ಸಂಚಾಲಕ ಪ್ರೊ. ಎಂ.ನಂಜುಂಡಯ್ಯ ಪ್ರಾಸ್ತಾವಿಕ ಭಾಷಣ ಮಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜು ಪ್ರಾಂಶುಪಾಲ ಡಾ.ಪಿ.ದೇವರಾಜು,ವಿದ್ಯಾರ್ಥಿ ಕ್ಷೇಮ ಪಾಲನೆ ಸಂಚಾಲಕ ಡಾ.ವಿ.ಆರ್.ರಮೇಶ್ ಬಾಬು, ಐಕ್ಯೂಎಸಿ , ಎನ್ ಎಸ್, ರೆಡ್ ಕ್ರಾಸ್ ಸಂಚಾಲಕ ಆರ್.ರಂಗಸ್ವಾಮಿ, ಯುಯುಸಿಎಂ ಮತ್ತು ಐಟಿ ಸಂಚಾಲಕ ಟಿ.ಆರ್.ಗಿರೀಶ್, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಮನೋಜ್ ಕುಮಾರ್, ರಮೇಶ್ ಹಾಜರಿದ್ದರು.

## ಮಹಿಳಾ ಸರ್ಕಾರಿ ಕಾಲೇಜಿನ ಇಂಗ್ಲಿಷ್ ಅಧ್ಯಾಪಕ ಪ್ರಸನ್ನಕುಮಾರ್ ಅಭಿಮತ

# 'ಸಬಲೀಕರಣಕ್ಕೆ ಶಿಕ್ಷಣವೊಂದೇ ಮಾರ್ಗ'

**ಮಂಡ್ಯ:** ಮಹಿಳೆಯರ ಸಬಲೀಕರಣಕ್ಕೆ ಹಾಗೂ ಆರ್ಥಿಕ, ಸಾಮಾಜಿಕ ಮತ್ತು ವೈಯಕ್ತಿಕ ಸ್ವಾತಂತ್ರ್ಯಕ್ಕೆ ಶಿಕ್ಷಣವೊಂದೇ ಪ್ರಮುಖ ಮಾರ್ಗ ಎಂದು ಕ್ರಿಯಾ ಸಂಸ್ಥಾಪಕ ಹಾಗೂ ಮಂಡ್ಯದ ಮಹಿಳಾ ಸರ್ಕಾರಿ ಕಾಲೇಜಿನ ಇಂಗ್ಲಿಷ್ ಅಧ್ಯಾಪಕ ಪ್ರಸನ್ನಕುಮಾರ್ ಕೆರಗೋಡು ಅಭಿಪ್ರಾಯಪಟ್ಟರು.

ಕ್ರಿಯಾ ಸಂಸ್ಥೆಯ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ನಾನು ಸ್ತ್ರೀ ಅಭಿಯಾನದಡಿ ಆಯೋಜಿಸಿದ್ದ ವ್ಯಕ್ತಿತ್ವ ವಿಕಸನ ಮತ್ತು ಉದ್ಯೋಗ ಮಾರ್ಗದರ್ಶನ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.



ಮಂಡ್ಯ ಜಿಲ್ಲೆಯಲ್ಲಿ ಹೆಣ್ಣುಮಕ್ಕಳು ಶಾಲಾ–ಕಾಲೇಜು ಶಿಕ್ಷಣವನ್ನು ಅರ್ಧದಲ್ಲೇ ನಿಲ್ಲಿಸುವುದು, ಬಾಲ್ಯ ವಿವಾಹಕ್ಕೆ ಒಳಗಾಗುವುದು ಹಾಗೂ ಹೆಣ್ಣು ಭ್ರೂಣ ಹತ್ಯೆಯಂತಹ ಅನಿಷ್ಟ ಪದ್ಧತಿಗಳು ಇನ್ನೂ ಕಂಡುಬರುತ್ತಿವೆ. ಇಂತಹ ಪರಿಸ್ಥಿತಿಯಲ್ಲಿ ವಿದ್ಯಾರ್ಥಿನಿಯರು ಹೆಚ್ಚಿನ ಜವಾಬ್ದಾರಿಯೊಂದಿಗೆ ಶಿಕ್ಷಣ ಪಡೆದು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯ ಗಳಿಸಬೇಕಾದರೆ ಉತ್ತಮ ಉದ್ಯೋಗ ಪಡೆಯುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ವಿದ್ಯಾರ್ಥಿನಿಯರು ಕಠಿಣ ಪರಿಶ್ರಮದ ಮೂಲಕ ಉತ್ತಮ ಜೀವನ ಮಾರ್ಗ ಕಂಡುಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮಂಜುಳಾ ಕೆ., ಇಲಾಖೆಯ ವತಿಯಿಂದ ಹೆಣ್ಣು ಮಕ್ಕಳ ಕಲ್ಯಾಣಕ್ಕಾಗಿ ವಸತಿ, ಊಟ ಸೇರಿದಂತೆ ವಿವಿಧ ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿನಿಯರು ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕ್ರಿಯಾ ಸಂಸ್ಥೆಯ ನಾನು ಸ್ತ್ರೀ ಘಟಕದ ಸಂಚಾಲಕಿ ಸುಪ್ರಿಯ ಶಿವಣ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಇಲಾಖೆಯ ತಾಲ್ಲೂಕು ಅಧಿಕಾರಿ ಮಂಜುನಾಥ ನಾಯ್ಡು, ನಿಲಯಪಾಲಕರಾದ ಯೋಗಿತಾ ಎಸ್., ಕ್ರಿಯಾ ಸಂಚಾಲಕರಾದ ಆನಂದ್ ಎಸ್.ಎಲ್., ಲೋಕೇಶ್ ಕೆ.ಎನ್. ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ಎಚ್.ಎಂ.ವಿಜಯನರಸಿಂಹ ಜನ್ಮದಿನ ಆಚರಣೆ

# ರೋಗಿಗಳಿಗೆ ಹಣ್ಣು–ಮಕ್ಕಳಿಗೆ ಉಪಹಾರ ವಿತರಣೆ

**ಮಾಲೂರು:** ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷರು ಹಾಗೂ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಎಚ್.ಎಂ.ವಿಜಯನರಸಿಂಹ ಅವರ ಜನ್ಮದಿನವನ್ನು ನಮ್ಮ ಕರ್ನಾಟಕ ಸೇನೆ ಹಾಗೂ ಹಿತೈಷಿಗಳು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಆಚರಿಸಿದರು.

ಈ ಅಂಗವಾಗಿ ಮಾಲೂರು ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಗಿದ್ದು, ಬಳಿಕ ಬುದ್ಧಿಮಾಂದ್ಯ ಮಕ್ಕಳ ಶಾಲೆಯಲ್ಲಿ ಕೇಕ್ ಕತ್ತರಿಸಿ ಮಕ್ಕಳಿಗೆ ಉಪಹಾರ ವಿತರಿಸಲಾಯಿತು.

ದಿವಂಗತ ಕಾಂಗ್ರೆಸ್ ಹಿರಿಯ ನಾಯಕ ಮುನಿಯಪ್ಪ ಅವರ ಪುತ್ರರಾಗಿರುವ ಎಚ್.ಎಂ. ವಿಜಯನರಸಿಂಹ ಅವರು ದೀನ ದಲಿತರು, ಅಲ್ಪಸಂಖ್ಯಾತರು ಹಾಗೂ ಬಡವರ ಪರ ಸದಾ ಸ್ಪಂದಿಸುವ ವ್ಯಕ್ತಿತ್ವ ಹೊಂದಿದ್ದು, ಹೋರಾಟಗಳ ಮೂಲಕ ಉನ್ನತ ಸ್ಥಾನಕ್ಕೆ ಬೆಳೆದಿದ್ದಾರೆ ಎಂದು ಹಿತೈಷಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಸ್ನೇಹಜೀವಿ ಹಾಗೂ ಸೇವಾಮನೋಭಾವದ ವ್ಯಕ್ತಿಯಾಗಿರುವ ವಿಜಯನರಸಿಂಹ ಅವರು ಇನ್ನೂ ಉನ್ನತ ಸ್ಥಾನಕ್ಕೇರಲಿ. ಅವರಿಗೆ ದೇವರು ಆರೋಗ್ಯ ಮತ್ತು ಐಶ್ವರ್ಯ ಕರುಣಿಸಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಎನ್.ವಿ.ಮುರಳಿಧರ್, ನಮ್ಮ ಕರ್ನಾಟಕ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಚಾಕನಹಳ್ಳಿ ನಾಗರಾಜ್, ರಾಜ್ಯ ಸಂಚಾಲಕ ಕೋಡೂರು ಗೋಪಾಲ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಕೆ.ಎನ್. ಜಗದೀಶ್, ಜಿಲ್ಲಾ ಉಸ್ತುವಾರಿ ಎಸ್.ಎಂ.ರಾಜು, ಕಾರ್ಮಿಕ ಘಟಕದ ಅಧ್ಯಕ್ಷ ಮಾದನಹಟ್ಟಿ ಅಶೋಕ್, ವೈದ್ಯಾಧಿಕಾರಿ ಡಾ.ಶ್ರೀನಿವಾಸ್, ದಸ್ತುಗಿರಿ, ಎಂ.ಸುರೇಶ್, ಟೀ ಅಂಗಡಿ ಸಂಪತ್, ನವೀನ್, ಕಿರಣ್, ಗುರುಪ್ರಸಾದ್, ಗೋಪಾಲಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದು ಶುಭಾಶಯ ಕೋರಿದರು.



# ಅರ್ಹ ಎಲ್ಲಾ ಫಲಾನುಭವಿಗಳಿಗೆ ಗ್ಯಾರೆಂಟಿ ಯೋಜನೆಗಳು ತಲುಪಲಿ: ಅರುಣ್ ಕುಮಾರ್

**ಮೈಸೂರು:** ಜಿಲ್ಲೆಯ ಎಲ್ಲಾ ಅರ್ಹ ಫಲಾನುಭವಿಗಳಿಗೆ ಪಂಚ ಗ್ಯಾರೆಂಟಿ ಯೋಜನೆಗಳ ಸೌಲಭ್ಯಗಳು ತಲುಪಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು ಎಂದು ಗ್ಯಾರೆಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಅರುಣ್ ಕುಮಾರ್ ಅವರು ತಿಳಿಸಿದರು.



ಜಿಲ್ಲಾ ಪಂಚಾಯತ್ ನ ಡಿ ದೇವರಾಜ ಅರಸು ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಗ್ಯಾರೆಂಟಿ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೆಲವು ಜನರಿಗೆ ಗೃಹಲಕ್ಷ್ಮಿ ಹಣ ದೊರೆಯುತ್ತಿಲ್ಲ ಎಂಬ ದೂರು ಇದೆ ಎಂದು ಸಭೆಯಲ್ಲಿ ಕೇಳಿದಾಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಮಾಹಿತಿ ನೀಡಿ ಯಾರು ಆದಾಯ ತೆರಿಗೆ ಪಾವತಿದಾರರು ಇದ್ದಾರೆ ಅವರಿಗೆ ಗೃಹ ಲಕ್ಷ್ಮಿ ಹಣ ನೀಡಲು ನಿಯಮದಲ್ಲಿ ಅವಕಾಶವಿಲ್ಲ ಯಾರಾದರೂ ಅರ್ಹ ಫಲಾನುಭವಿಗಳು ಇದ್ದರೆ ಪರೀಕ್ಷಿಸಿ ಸೇರ್ಪಡೆ ಮಾಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಬಿ ಪಿ ಎಲ್ ಕಾರ್ಡ್ ಮಾಡಿಸಲು ಪೋರ್ಟಲ್ ಓಪನ್ ಆದಾಗ ಪತ್ರಿಕಾ ಪ್ರಕಟಣೆ ನೀಡಿ ಸಾರ್ವಜನಿಕರಿಗೆ ಮಾಹಿತಿ ದೊರೆಯುವಂತೆ ಮಾಡಬೇಕು. ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಬಿಪಿಎಲ್ ಕಾರ್ಡ್ ಅತ್ಯವಶ್ಯಕವಾಗಿದೆ. ಬಿಪಿಎಲ್ ಕಾರ್ಡ್ ಇಲ್ಲದೆ ಇದ್ದರೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ಹಾಗೂ ಸ್ಕ್ಯಾನಿಂಗ್ ಸೌಲಭ್ಯಗಳು ದೊರೆಯುವುದಿಲ್ಲ. ಆದ್ದರಿಂದ ಅರ್ಹರಿಗೆ ಬಿಪಿಎಲ್ ಕಾರ್ಡಗಳನ್ನು ನೀಡಲು ಕ್ರಮವಹಿಸುವಂತೆ ಆಹಾರ ಇಲಾಖೆಯ ಉಪ ನಿರ್ದೇಶಕರಿಗೆ ಸೂಚನೆ ನೀಡಿದರು.

ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ಆರ್ ಓ ಘಟಕಗಳನ್ನು ಅಳವಡಿಸಿ. ಕೆ ಎಸ್ ಆರ್ ಟಿ ಸಿ ಬಸ್ ಗಳಲ್ಲಿ ಟಿಕೆಟ್ ಹಣವನ್ನು ಆನ್ ಲೈನ್ ನಲ್ಲಿಯೂ ಪಾವತಿ ವ್ಯವಸ್ಥೆ ಇರುವ ಬಗ್ಗೆ ಫಲಕಗಳನ್ನು ಅಳವಡಿಸಿ ಈ ಬಗ್ಗೆ ಪ್ರಯಾಣಿಕರಿಗೆ ಮಾಹಿತಿ ಮಾಡಬೇಕು. ನಿರ್ವಾಹಕರು ಪ್ರಯಾಣಿಕರೊಂದಿಗೆ ಸೌಜನ್ಯ ಯುತವಾಗಿ ವರ್ತಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಳಾದ ಎಸ್ ಯುಕೇಶ್ ಕುಮಾರ್ ಅವರು ಮಾತನಾಡಿ ಗೃಹ ಲಕ್ಷ್ಮಿ ಹಣವನ್ನು ಯಾವುದೇ ಬ್ಯಾಂಕ್ ನವರು ಸಾಲಕ್ಕೆ ವಜಾ ಮಾಡಿಕೊಳ್ಳದೆ ಮಾನವೀಯತೆ ಆದಾರದ ಮೇಲೆ ಫಲಾನುಭವಿಗಳಿಗೆ ನೀಡಬೇಕು. ಗೃಹ ಲಕ್ಷ್ಮಿ ಯೋಜನೆಯ ಫಲಾನುಭವಿ ಮರಣ ಹೊಂದಿದರೆ ಅವರಿಗೆ ಹಣ ಪಾವತಿ ಆಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಗ್ಯಾರೆಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷರಾದ ಶಿವಕುಮಾರ್ ಅವರು ಮಾತನಾಡಿ ಯಾರು ಮರಣ ಹೊಂದಿದ್ದಾರೆ ಅವರಿಗೂ ಹಣ ಹೋಗುತ್ತಿದೆ. ಅವರಿಗೆ ಸ್ಥಗಿತಗೊಳಿಸಬೇಕು ಹಾಗೂ ಮರಣದಿಂದ ಇಲ್ಲಿಯವರೆಗೆ ಅವರಿಗೆ ಪಾವತಿ ಆಗಿರುವ ಹಣವನ್ನು ಹಿಂಪಡೆಯಬೇಕು. ಮುಂದೆ ಯಾರೇ ಫಲಾನುಭವಿ ಮರಣ ಹೊಂದಿದರೆ ಆಟೋಮ್ಯಾಟಿಕ್ ಆಗಿ ಹಣ ಪಾವತಿ ಸ್ಥಗಿತವಾಗುವಂತೆ ತಂತ್ರಜ್ಞಾನ ಅಳವಡಿಸಿಕೊಳ್ಳಿ ಎಂದು ತಿಳಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರ ಇಲಾಖೆಯ ಉಪ ನಿರ್ದೇಶಕರು ಮಾಹಿತಿ ನೀಡುತ್ತಾ ಜಿಲ್ಲೆಯಲ್ಲಿ 6,80,301 ಪಡಿತರ ಚೀಟಿಗಳು ಇವೆ. ಐ ಟಿ ಪಾವತಿ ಮಾಡಿರುವ ಹಾಗೂ 7.5 ಹೆಕ್ಟರ್ ಭೂಮಿ ಹೊಂದಿರುವವರ 23 ಸಾವಿರ ಕಾರ್ಡ್ ಗಳನ್ನು ಎ ಪಿ ಎಲ್ ಗೆ ಬದಲಾವಣೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಚೆಸ್ಕಾಂ ಅಧೀಕ್ಷಕ ಇಂಜಿನಿಯರ್ ಸುನಿಲ್ ಅವರು ಸಭೆಗೆ ಮಾಹಿತಿ ನೀಡುತ್ತಾ ಜಿಲ್ಲೆಯಲ್ಲಿ 9,68,228 ಫಲಾನುಭವಿಗಳು ಗೃಹಜ್ಯೋತಿ ಯೋಜನೆಯಡಿ ನೋಂದಣಿ ಆಗಿದ್ದಾರೆ. 6548 ಫಲಾನುಭವಿಗಳು ನೋಂದಣಿಗೆ ಬಾಕಿ ಇದ್ದಾರೆ. ಶೇಕಡಾ 60 ರಷ್ಟು ಫಲಾನುಭವಿಗಳಿಗೆ ಶೂನ್ಯ ಬಿಲ್ ಬರುತ್ತದೆ. 40% ಫಲಾನುಭವಿಗಳು ಸರಾಸರಿಗಿಂತ ಹೆಚ್ಚಿನ ವಿದ್ಯುತ್ ಬಳಕೆ ಮಾಡುವುದರಿಂದ ಬಿಲ್ ಬರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಉಪಾಧ್ಯಕ್ಷರಾದ ಹುಣಸೂರು ಬಸವಣ್ಣ, ಕರೀಗೌಡ ಬಿ ಎನ್, ತಾಲ್ಲೂಕು ಅಧ್ಯಕ್ಷರಾದ ನಿತಿನ್ ವೆಂಕಟೇಶ್, ಸದಸ್ಯರಾದ ಸಾ ಮಾ ಯೋಗೇಶ್, ಎಂ ಎಸ್ ಮಹದೇವ, ಲಲಿತಾ, ಅಬ್ದುಲ್ ಖಾದರ್ ಅವರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮತ್ತಿತರು ಉಪಸ್ಥಿತರಿದ್ದರು.

# ಮೇ 10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ



**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ಮೇ 10ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಕಂದಾಯ ಭವನದ ಮೂರನೇ ಮಹಡಿಯ ಕೊಠಡಿ ಸಂಖ್ಯೆ: 409ರಲ್ಲಿ ಆಯೋಜಿಸಲಾಗಿದೆ.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಸಮುದಾಯದ ಅಧ್ಯಕ್ಷರು, ಕಾರ್ಯದರ್ಶಿಗಳು, ಮುಖಂಡರು, ಎಲ್ಲಾ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳೂ ಕಡ್ಡಾಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಸತೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ನ 3 ನೇ ಸಾಮಾನ್ಯ ಸಭೆ

**ಮೈಸೂರು:** ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ನ 3 ನೇ ಸಾಮಾನ್ಯ ಸಭೆಯು ಮೇ6 ರಂದು ಮೈಸೂರಿನ ಕ್ರಾಫರ್ಡ್ ಭವನದಲ್ಲಿ ಜರುಗಿತು. ಸಭೆಯಲ್ಲಿ ವಿಶ್ವವಿದ್ಯಾನಿಲಯದ ಸಾಂಸ್ಥಿಕ ಸಮಗ್ರತೆ ಮತ್ತು ಸಾರ್ವಜನಿಕ ಗೌರವಕ್ಕೆ ಧಕ್ಕೆ ತರುತ್ತಿರುವ ಗಂಭೀರ ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು.



ಸಿಂಡಿಕೇಟ್ ಸದಸ್ಯ ಟಿ.ಆರ್.ಚಂದ್ರಶೇಖರ್ ಆಧಾರಹಿತ ಮತ್ತು ಅಪ್ರಮಾಣಿತ ಮಾಹಿತಿಗಳನ್ನಿಟ್ಟುಕೊಂಡು, ವಿಶ್ವವಿದ್ಯಾನಿಲಯದ ಕಾರ್ಯನಿರ್ವಹಣೆ ಹಾಗೂ ಶಾಸನಬದ್ಧ ಅಧಿಕಾರಿಗಳ ವಿರುದ್ಧ ಮಾಧ್ಯಮಗಳ ಮುಂದೆ ಸತತವಾಗಿ ಮಾಡುತ್ತಿರುವ ಆರೋಪಗಳನ್ನು ಸಭೆಯು ಗಂಭೀರವಾಗಿ ಪರಿಗಣಿಸಿರುತ್ತದೆ. ವಿಶ್ವವಿದ್ಯಾನಿಲಯದ ಟೆಂಡರ್ ಪ್ರಕ್ರಿಯೆಗಳು ಹಾಗೂ ಆಡಳಿತಾತ್ಮಕ ಮತ್ತು ಆರ್ಥಿಕ ವಿಚಾರಗಳಲ್ಲಿ ನಡೆದಿವೆ ಎನ್ನಲಾದ ಅಕ್ರಮಗಳ ಕುರಿತಾದ ಇವರ ಆರೋಪಗಳು ಕೇವಲ ಕಾಲ್ಪನಿಕ, ಸತ್ಯಕ್ಕೆ ದೂರ ಮತ್ತು ದುರುದ್ದೇಶಪೂರಿತವಾಗಿದ್ದು, ಇವುಗಳಿಗೆ ಯಾವುದೇ ಅಧಿಕೃತ ದಾಖಲೆಗಳ ಬೆಂಬಲವಿಲ್ಲವೆಂದು ಸಭೆಯು ಅಭಿಪ್ರಾಯಪಟ್ಟಿದೆ.

ಶತಮಾನದ ಇತಿಹಾಸವಿರುವ ಮೈಸೂರು ವಿಶ್ವವಿದ್ಯಾನಿಲಯದಂತಹ ಪ್ರತಿಷ್ಠಿತ ಸಾರ್ವಜನಿಕ ಸಂಸ್ಥೆಯ ವಿರುದ್ಧ, ಅನಧಿಕೃತ ಮತ್ತು ಅರೆಬರೆ ದಾಖಲೆಗಳನ್ನು ಬಳಸಿಕೊಂಡು ಭ್ರಷ್ಟಾಚಾರದ ಆರೋಪ ಮಾಡುವುದು ಸಾಂಸ್ಥಿಕ ಆಡಳಿತದ ತತ್ವಗಳಿಗೆ ಮತ್ತು ಜವಾಬ್ದಾರಿಯುತ ಸಾರ್ವಜನಿಕ ನಡತೆಗೆ ವ್ಯತಿರಿಕ್ತವಾದುದಾಗಿದೆ. ಶ್ರೀ ಟಿ.ಆರ್. ಚಂದ್ರಶೇಖರ್ ಅವರು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಬಳಿ ಸ್ಪಷ್ಟನೆ ಪಡೆಯುವ ಬದಲು, ಪದೇ ಪದೇ ಬಾಹ್ಯ ಸಂಸ್ಥೆಗಳನ್ನು ಸಂಪರ್ಕಿಸುತ್ತಿರುವುದು ಮತ್ತು ನಿರಾಧಾರವಾಗಿ ವಿಶ್ವವಿದ್ಯಾನಿಲಯದ ವಿರುದ್ಧ ಸುಳ್ಳು ಹೇಳಿಕೆಗಳನ್ನು ಮಾಧ್ಯಮ ಮತ್ತು ಜಾಲತಾಣಗಳಲ್ಲಿ ನೀಡುತ್ತಿರುವುದು ಅವರ ವ್ಯವಸ್ಥಿತ ನಡವಳಿಕೆಯನ್ನು ಎತ್ತಿತೋರಿಸುತ್ತದೆ. ಅಲ್ಲದೆ, ವಿಶ್ವವಿದ್ಯಾನಿಲಯದ ಅಧಿಕೃತ ಲೋಗೋ ಮತ್ತು ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವ ಮೂಲಕ ಸಂಸ್ಥೆಯ ಘನತೆಗೆ ಕುಂದು ತರುತ್ತಿರುವುದನ್ನು ಸಭೆಯು ಗಮನಿಸಿರುತ್ತದೆ.

ಇಂತಹ ಆಧಾರರಹಿತ ಹೇಳಿಕೆಗಳಿಂದ ಸಾರ್ವಜನಿಕರಲ್ಲಿ ಗೊಂದಲ ಉಂಟಾಗುತ್ತಿದ್ದು, ವಿಶ್ವವಿದ್ಯಾನಿಲಯದ ಪ್ರತಿಷ್ಠೆಗೆ ದೊಡ್ಡ ಮಟ್ಟದ ಹಾನಿಯಾಗಿದೆ.

# ಅಸಂಘಟಿತ ಕಾರ್ಮಿಕರಿಗೆ ಅಪಘಾತ ವಿಮೆ ಸೌಲಭ್ಯ : ಶಾಸಕ

**ರಾಮನಗರ:** ಅಸಂಘಟಿತ ಕಾರ್ಮಿಕರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ. ಸರ್ಕಾರ ಈಗಾಗಲೆ ಹಲವಾರು ಯೋಜನೆಗಳನ್ನು ರೂಪಿಸಿದೆ. ಈ ಪೈಕಿ ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆಯಡಿ ಅಸಂಘಟಿತ ಕಾರ್ಮಿಕರಿಗೆ ಅಪಘಾತ ವಿಮೆಯನ್ನು ಜಾರಿಗೆ ತರಲಾಗಿದೆ ಎಂದು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.

ಕಾರ್ಮಿಕ ಇಲಾಖೆ ಮತ್ತು ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವತಿಯಿಂದ ನಗರದ ಅಲ್ ಕರೀಮ್ ಫಂಕ್ಷನ್ ಹಾಲ್ ನಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆಯಡಿ ಅಸಂಘಟಿತ ಕಾರ್ಮಿಕ ಮತ್ತು ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯಡಿ ಫಲಾನುಭವಿಗಳ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿದ ಅವರು ಮಾತನಾಡಿದರು.



ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆಯಡಿ ನೋಂದಾಯಿತ ಕಾರ್ಮಿಕ ಅಪಘಾತದಲ್ಲಿ ಮರಣ ಹೊಂದಿದರೆ ಆತನ/ಆಕೆಯ ನಾಮ ನಿರ್ದೇಶಿತರಿಗೆ 1 ಲಕ್ಷ ರೂ ಪರಿಹಾರ, ಭಾಗಶಃ – ಶಾಶ್ವತ ದುರ್ಬಲತೆ ಹೊಂದಿದರೆ 1 ಲಕ್ಷ ರೂ ಪರಿಹಾರ, ಆಸ್ಪತ್ರೆ ವೆಚ್ಚಕ್ಕಾಗಿ 50 ಸಾವಿರ ರೂ, ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚಕ್ಕಾಗಿ 10 ಸಾವಿರ ರೂ ಧನ ಸಹಾಯ ಮಾಡಲಾಗುತ್ತದೆ. ಎಲ್ಲ ಅಸಂಘಟಿತ ಕಾರ್ಮಿಕರು ನೋಂದಣಿ ಮಾಡಿಸಿಕೊಂಡು ಸ್ಮಾರ್ಟ್ ಕಾರ್ಡ್ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಯೋಜನೆಯಡಿ ಪ್ರಾರಂಭಿಕ ವಾಗಿ 26 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಮಾತ್ರ ನೋಂದಾಯಿಸಲಾಗುತ್ತಿತ್ತು. ಸರ್ಕಾರ ವಿಶೇಷವಾಗಿ ಮುತುವರ್ಜಿ ವಹಿಸಿ ಅದನ್ನು ಇತರೆ ವರ್ಗಗಳಿಗೂ ವಿಸ್ತರಿಸಿದೆ. ಈಗ ಹೊಸದಾಗಿ ಹಿಂದಳುದ ವರ್ಗಗಳ ಪ್ರವರ್ಗ –1, 2 ಎ, 3 ಎ ಮತ್ತು 3 ಬಿಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವರ್ಗಗಳು ಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ ಎಂದು ಹೇಳಿದರು.

**ಶ್ರಮಿಕ ವಸತಿ ಶಾಲೆ ತೆರಯುತ್ತೇವೆ:** ಅಸಂಘಟಿತ ಕಾರ್ಮಿಕರ ಕಸುಬಿಗೆ ಅನುಗುಣವಾಗಿ ಕಿಟ್‌ಗಳನ್ನು ವಿತರಿಸಲಾಗುತ್ತಿದ್ದು, ಅವರ ಮಕ್ಕಳ ಶಿಕ್ಷಣಕ್ಕೂ ಹೆಚ್ಚಿನ ಒತ್ತು ಕೊಡಲಾಗುತ್ತಿದೆ. ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕಾಗಿ ರಾಮನಗರದಲ್ಲಿಯೂ ಶ್ರಮಿಕ ವಸತಿ ಶಾಲೆ ತೆರೆಯಲಾಗುತ್ತಿದೆ ಎಂದು ಹೇಳಿದರು.

**ನವ ರಾಮನಗರದ ನಿರ್ಮಾಣಕ್ಕೆ ಶ್ರಮ:** ಬಡವರು, ರೈತರು , ಕೂಲಿ ಕಾರ್ಮಿಕರೆಲ್ಲರ ಪ್ರಾರ್ಥನೆ ಫಲವಾಗಿ ನಾನು ಶಾಸಕನಾಗಿ ಆಯ್ಕೆಯಾಗಿದ್ದೇನೆ. ಈ ಹಿಂದೆ ಶಾಸಕರಾಗಿದ್ದವರು ನಿಮ್ಮ ಕಷ್ಟ ಸುಖವನ್ನು ಯಾರೂ ಕೇಳಲಿಲ್ಲ. ಆದರೆ, ನಾನು ನಿಮ್ಮ ಮನೆ ಮಗ, ಸಹೋದರನಾಗಿ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದೇನೆ. ನಿಮ್ಮೆಲ್ಲರ ಆಶಯದಂತೆ ನವ ರಾಮನಗರ ನಿರ್ಮಾಣಕ್ಕಾಗಿ ಶ್ರಮಿಸುತ್ತಿದ್ದೇನೆ ಎಂದರು.

# ನಿಜವಾದ ಸೌಂದರ್ಯ



| ವೀಣಾ ಹೇಮಂತ್‌ಗೌಡ ಪಾಟೀಲ್

ಸೂರ್ಯನ ಬಿಸಿಲು ತಾಕುತ್ತಲೇ ಸುಂದರವಾಗಿ ಅರಳುವ ನೈದಿಲೆಯ ಹುಟ್ಟು ಇರುವುದು ಕೆಸರಿನಲ್ಲಿ.

ಕೆಸರಿನಲ್ಲಿದ್ದರೂ ಕಮಲ ದೇವರ ಪೂಜೆಗೆ ಅರ್ಪಿತವಾಗುವ ಅತ್ಯಂತ ಶ್ರೇಷ್ಠವಾದ ಪುಷ್ಪ. ಅದರ ಸೌಂದರ್ಯದ ಜೊತೆಗೆ ತನ್ನ ಸುತ್ತ ಇರುವ ಕೊಳಕನ್ನು ತಾಕಿಸಿಕೊಳ್ಳದೆ ಬೆಳೆಯುವ ಕಮಲವನ್ನು ಅದರ ಸೌಂದರ್ಯದ ಜೊತೆ ಜೊತೆಗೆ ಅದರ ಘನತೆ ಕೂಡ ಹೆಚ್ಚಿದ್ದು ಕೇಸರಿನಲ್ಲಿ ಹುಟ್ಟಿದ ಕಮಲ ಎಂಬ ವ್ಯಾಖ್ಯಾನಕ್ಕೆ ಪಾತ್ರವಾಗಿದೆ.

ಅಂತೆಯೇ ವ್ಯಕ್ತಿಯು ಕೂಡ ಅದೆಲ್ಲೇ ಹುಟ್ಟಲಿ, ಅದೆಲ್ಲೇ ಬೆಳೆಯಲಿ ಆತನ ವ್ಯಕ್ತಿತ್ವ ಸುಂದರವಾಗಿ ರೂಪಿಸಿಕೊಳ್ಳುವ ಮೂಲಕ ಚಂದದ ಬದುಕನ್ನು ಸಾಗಿಸಬಹುದು.

ನಮ್ಮ ದೇಹದ ಹಾಗೂ ಮುಖದ ಸೌಂದರ್ಯ ಮತ್ತು ಆವರಿಸುವ ತನಕ... ಕೇವಲ ಅಂಗಸೌಷ್ಟವವಿದ್ದರೆ ಸಾಲದು ನಮ್ಮ ವ್ಯಕ್ತಿತ್ವ ಸರ್ವಾಂಗ ಸುಂದರವಾಗಿ ರೂಪುಗೊಳ್ಳಬೇಕು. ನಮ್ಮ ವ್ಯಕ್ತಿತ್ವವು ನಮ್ಮ ಮಾತು ನಡೆ ನುಡಿ ನಯ ವಿನಯಗಳಿಂದ ರೂಪುಗೊಳ್ಳಬೇಕೇ ಹೊರತು ನಮ್ಮ ದೈಹಿಕ ಸೌಂದರ್ಯ, ಸಿರಿವಂತಿಕೆ, ದರ್ಪ ದೌಲತ್ತುಗಳಿಂದ ಅಲ್ಲ.

ವ್ಯಕ್ತಿಯ ಸೌಂದರ್ಯವನ್ನು ಅಳೆಯುವ ಊರುಗೋಲುಗಳು ಹೀಗಿದೆ.

ಕರ್ಮ.... ವ್ಯಕ್ತಿಯು ತನ್ನ ಬದುಕಿನಲ್ಲಿ ಹೊಂದಿರುವ ಒಳ್ಳೆಯ ಕರ್ಮಗಳಿಂದ ರೂಪುಗೊಳ್ಳುತ್ತಾನೆ. ನಮ್ಮ ಸನಾತನ ಧರ್ಮದಲ್ಲಿ ಸಂಚಿತ, ಪ್ರಾರಬ್ಧ ಹಾಗೂ ಅರ್ಜಿತ ಕರ್ಮಗಳು ಎಂಬ ಮೂರು ವಿಧಾನಗಳು ಉಂಟು.

ಸಂಚಿತಕರ್ಮ ನಮ್ಮ ಹಿಂದಿನ ಜನ್ಮದಿಂದ ಸಂಪಾದಿಸಿದ ಕರ್ಮವಾದರೆ, ಪ್ರಾರಬ್ಧ ಕರ್ಮವು ನಾವು ಮಾಡಿದ ಕ್ರಿಯೆಗಳು ನಮ್ಮನ್ನು ಬೆಂಬಿಡದೆ ಕಾಯುವ / ಕಾಡುವ ಕರ್ಮವಾಗಿರುತ್ತದೆ. ಅರ್ಜಿತ ಕರ್ಮ ಎಂದರೆ ನಾವು ಮಾಡಿದ ಪುಣ್ಯದ ಫಲ.



ಆದರೆ ಇದೆಲ್ಲವನ್ನು ಮಿಗಿಲಾಗಿ ಪ್ರಸ್ತುತದ ವಾಸ್ತವ ಜಗತ್ತಿನಲ್ಲಿ ನಾವು ಮಾಡುತ್ತಿರುವ ಕೆಲಸ ಕಾರ್ಯಗಳು ಕೇವಲ ನಮಗೆ ಮಾತ್ರ ಒಳ್ಳೆಯದನ್ನು ಮಾಡಿದರೆ ಸಾಲದು ಬದಲಾಗಿ ನಮ್ಮ ಕೆಲಸ ಕಾರ್ಯಗಳಿಂದ ಇತರರಿಗೂ ಕೂಡ ಒಳ್ಳೆಯದಾಗಬೇಕು... ಕನಿಷ್ಠ ಪಕ್ಷ ನಮ್ಮ ಕ್ರಿಯೆಗಳಿಂದ ಬೇರೆಯವರಿಗೆ ಒಳ್ಳೆಯದಾಗದಿದ್ದರೂ ಪರವಾಗಿಲ್ಲ ಕೆಡುಕಾಗಬಾರದು ಎಂಬ ಉದ್ದೇಶವನ್ನು ಹೊಂದಿ ನಾವು ನಮ್ಮ ಬದುಕಿನಲ್ಲಿ ಕಾರ್ಯನಿರ್ವಹಿಸಬೇಕು.

ನಮ್ಮ ಯಾವುದೇ ಕಾರ್ಯ ಚಟುವಟಿಕೆಗಳು ಮತ್ತೊಬ್ಬರಿಗೆ ನೋವನ್ನುಂಟು ಮಾಡಬಾರದು ಎಂಬ ಅರಿವು ನಮ್ಮ ಆಂತರಿಕ ಪ್ರಜ್ಞೆಯಲ್ಲಿ ಸದಾ ಜಾಗೃತವಾಗಿರಬೇಕು.

ಉತ್ತಮವಾದ ಶಿಕ್ಷಣ, ಒಳ್ಳೆಯ ನಡತೆ, ತೃಪ್ತಿಕರವಾದ ಕೆಲಸ ಕಾರ್ಯಗಳನ್ನು ಮನುಷ್ಯ ಹೊಂದಿರಬೇಕು. ಇದರ ಜೊತೆಗೆ ಸಂಘಜೀವಿಯಾಗಿರುವ ಮನುಷ್ಯ ಗುರು ಹಿರಿಯರೊಂದಿಗೆ ಗೌರವ ಪೂರ್ವಕವಾಗಿಯೂ, ತನ್ನ ವಾರಿಗೆಯ ಜನರೊಂದಿಗೆ ಅಚ್ಚುಮೆಚ್ಚಿನವರಾಗಿ, ಚಿಕ್ಕವರಿಗೆ ಅಕ್ಕರೆಯನ್ನು ತೋರುವ ವ್ಯಕ್ತಿಯಾಗಿಯೂ ಬದುಕಬೇಕು.

ವ್ಯಕ್ತಿಯ ನಿಜವಾದ ಸೌಂದರ್ಯ ಇರುವುದು ಆತನ ವಿಚಾರಗಳಲ್ಲಿ. ಮನದ ತುಂಬಾ ಕೊಳಕು ವಿಚಾರಗಳ ಮಲಿನತೆಯನ್ನು ಇಟ್ಟುಕೊಂಡು ಅದೆಷ್ಟೇ ಸುಂದರವಾಗಿ ಕಂಡರೂ ಪ್ರಯೋಜನವಿಲ್ಲ. ತನು ಮನಗಳಲ್ಲಿ ಪರಿಶುದ್ಧವಾದ ವ್ಯಕ್ತಿಯ ಮುಖದಲ್ಲಿ, ಆತನ ನಡತೆಯಲ್ಲಿ ಪ್ರತಿಪಲಿಸುತ್ತದೆ...

ಸದ್ವಿಚಾರ ಸಚಿಂತನೆಗಳಿಗೆ ತನ್ನನ್ನು ತಾನು ಒಡ್ಡಿಕೊಳ್ಳುವ ಮನುಷ್ಯ ಪರುಷ ಸೋಕಿದ ರೀತಿಯಲ್ಲಿ ಚೊಕ್ಕವಾಗುತ್ತಾನೆ. ಬೆಂಕಿಯಲ್ಲಿ ಬೆಂದು ತನ್ನೆಲ್ಲ ಕಶ್ಮಲಗಳನ್ನು ಕಳೆದುಕೊಳ್ಳುವ ಮೂಲಕ ಅಪರಂಜಿ ಚಿನ್ನವಾಗುವ ಬಂಗಾರದ ರೀತಿಯಲ್ಲಿ ಮನುಷ್ಯನು ತನ್ನ ಮನದಲ್ಲಿರುವ ಸಣ್ಣ ವಿಚಾರಗಳು, ಕ್ಷುಲ್ಲಕ ನಡವಳಿಕೆಗಳು ಅಪ್ರಜ್ಞಾಪೂರ್ವಕ ಕೊಂಕುಗಳನ್ನು ನಿವಾರಿಸಿಕೊಂಡು ಪರಿಶುದ್ಧ ಚಿನ್ನದ ಹಾಗೆ ತನ್ನ ವ್ಯಕ್ತಿತ್ವವನ್ನು ಹೊಂದಿ ಪ್ರತಿಫಲಿಸಬೇಕು.

ವ್ಯಕ್ತಿಯ ನಿಜವಾದ ಸೌಂದರ್ಯ ಇರುವುದು ಆತನ ಮಾತುಗಳಲ್ಲಿ. ಮಾತು ಮುತ್ತು ಪೋಣಿಸಿದ ಹಾಗೆ ಇರಬೇಕು ಮಾತು ಸುಗಂಧದ ಹಾರದಂತಿರಬೇಕೇ ಹೊರತು ಕೊಳೆತು ನಾರುವ ಚರಂಡಿ ಅಂತಲ್ಲ ನಮ್ಮ ವಿಶ್ವಜ್ಯೋತಿ ಬಸವಣ್ಣನವರು ಹೇಳಿದಂತೆ ನುಡಿದರೆ ಮುತ್ತಿನ ಹಾರದಂತಿರಬೇಕು ನುಡಿದರೆ ಮಾಣಿಕ್ಯದ ದೀಪ್ತಿಯಂತಿರಬೇಕು ನುಡಿದರೆ ಸ್ಫಟಿಕದ ಸಲಾಕೆಯಂತಿರಬೇಕು ನಮ್ಮ ಮಾತುಗಳು ಅತ್ಯಂತ ಸತ್ಯ ಶುದ್ಧ ಪ್ರಾಮಾಣಿಕತೆಯಿಂದ ಕೂಡಿರಬೇಕು. ನಮ್ಮ ಮಾತುಗಳು ನೊಂದವರಿಗೆ ತಂಪೆರೆಯುವ ಅಮೃತ ಸಿಂಚನ ದಂತಿರಬೇಕು ನಮ್ಮ ಮಾತುಗಳು ಸೋತವರಿಗೆ ಮತ್ತೆ ಪ್ರೋತ್ಸಾಹ ತುಂಬಿ ಗೆಲುವಿನಡೆಗೆ ಕೈಹಿಡಿದು ಕರೆದೊಯ್ಯುವಂತಿರಬೇಕು ನಮ್ಮ ಮಾತು ಅಶಕ್ತರಿಗೆ ವಿರುದ್ಧರಿಗೆ ಅನಾರೋಗ್ಯ ಪೀಡಿತರಿಗೆ ಚೈತನ್ಯವನ್ನು ತುಂಬುವ ಔಷದಿಯಂತಿರಬೇಕು ನಮ್ಮ ಮಾತು ಇತರರಿಗೆ ಪೂರ್ತಿಯನ್ನು ತುಂಬುವ ಶಕ್ತಿಯಾಗಬೇಕು....



ಇದೆಲ್ಲವೂ ನಮ್ಮ ಮಾತಿನಿಂದ ಮಾಡಲು ಸಾಧ್ಯವಾಗದಿದ್ದರೆ ಬೇಡ ಆದರೆ ನಮ್ಮ ಮಾತುಗಳಿಂದ ಯಾರಿಗೂ ನೋವನ್ನುಂಟು ಮಾಡಬಾರದು ಎಂಬ ರೀತಿಯಲ್ಲಿ ಇರಬೇಕು.

ವ್ಯಕ್ತಿಯ ಸೌಂದರ್ಯವನ್ನು ಆತನ ವ್ಯವಹಾರದಿಂದ ಗುರುತಿಸಬೇಕು... ವ್ಯವಹಾರವನ್ನು ಎರಡು ರೀತಿಯಲ್ಲಿ ಹೇಳಬಹುದು ಒಂದು ಆತ ಇತರರೊಂದಿಗೆ ನಡೆದುಕೊಳ್ಳುವ ರೀತಿ ನೀತಿಗಳನ್ನು ವ್ಯವಹರಿಸುವುದು ಎಂದು ಹೇಳಿದರೆ ಇನ್ನೊಂದು ವ್ಯವಹಾರ ಆತನ ಉದ್ಯೋಗ ದರ ಕುರಿತಾಗಿರಬಹುದು.

ವ್ಯಕ್ತಿಯ ಸೌಂದರ್ಯ ಇರುವುದು ಕರ್ಮ ವಿಚಾರ ಮಾತು,ವ್ಯವಹಾರ,ಸಂಸ್ಕಾರ, ವ್ಯಕ್ತಿತ್ವ, ಚಾರಿತ್ರ್ಯ ಹಾಗೂ' ಒಳ್ಳೆಯ ಸಂಸ್ಕಾರವಂತ ನಾಗರಿಕ ಸಮಾಜ ನಮ್ಮದಾಗಲಿ ಎಂಬ ಹಾರೈಕೆಯೊಂದಿಗೆ

# ಸಂಕ್ಷಿಪ್ತ ಸುದ್ದಿ

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಮಡಿಕೇರಿ:**–2025–26ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಮೇ, 16 ರವರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಡಗು ಜಿಲ್ಲೆ, ಮಡಿಕೇರಿ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ: https://ssp.postmatric.karnataka.gov.in/, ಕಾರ್ಯಕ್ರಮಗಳ ವಿವರ, ಸೌಲಭ್ಯ ಪಡೆಯಲು ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ಕಾರ್ಯಕ್ರಮಗಳ ಸರ್ಕಾರಿ ಆದೇಶಗಳಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in ನ್ನು ನೋಡಬಹುದು.

ಹೆಚ್ಚಿನ ಮಾಹಿತಿಗೆ ಇಲಾಖಾ ಸಹಾಯವಾಣಿ ಸಂಖ್ಯೆ:8050770004, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್: postmatrichelp@karnataka.gov.in,ದೂರವಾಣಿ ಸಂಖ್ಯೆ:08272–295628 ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ತಿಳಿಸಿದ್ದಾರೆ.

## ಮೇ, 12 ರಂದು ಉದ್ಯೋಗ ಮೇಳ

**ಮಡಿಕೇರಿ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮೇ, 12 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ಮಿನಿ ?ಉದ್ಯೋಗಮೇಳ? ನಡೆಯಲಿದೆ.

ಈ ಉದ್ಯೋಗ ಮೇಳದಲ್ಲಿ ಪಿರಾಮಲ್ ಫೈನಾನ್ಸ್ ಲಿಮಿಟೆಡ್ ಮೈಸೂರು, ಕಲ್ಯಾಣಿ ಮೋಟಾರ್ಸ್ ಕಾರ್ ಶೋ ರೂಮ್, ಮಡಿಕೇರಿ, ಇನ್‌ಸ್ಟಂಟ್ ಐಟಿ ಟೆಕ್ನಾಲಜಿ ಮೈಸೂರು, ಹ್ಯೂಂಡಾಯಿ ಕಾರ್ ಶೋ ರೂಮ್, ಮಡಿಕೇರಿ, ಇವೊಲೋಬ್ಯಾಕ್ ರೆಸಾರ್ಟ್, ಮಡಿಕೇರಿ, ಮುತ್ತೂಟ್ ಮನಿ ಫೈನಾನ್ಸ್, ಮೈಸೂರು ಇವರು ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಈ ಮೇಳದಲ್ಲಿ ಖಾಸಗಿ ಕಂಪೆನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿಯಿರುವ ಹುದ್ದೆಗಳನ್ನು ಮಿನಿ ಉದ್ಯೋಗಮೇಳದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಈ ಉದ್ಯೋಗಮೇಳದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ., ಐಟಿಐ, ಡಿಪ್ಲೋಮ, ಪದವಿ ಹಾಗೂ ಸ್ನಾತಕೋತರ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಿ ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ. ಅಭ್ಯರ್ಥಿಗಳು ವಿದ್ಯಾರ್ಹತೆಯ ಮೂಲ ದಾಖಲಾತಿಗಳು, ಅನುಭವ ಪ್ರಮಾಣಪತ್ರ (ಅನ್ವಯಿಸುವವರಿಗೆ ಮಾತ್ರ) ಹಾಗೂ ಸ್ವ–ವಿವರಗಳ ಪ್ರತಿಗಳೊಂದಿಗೆ ಉದ್ಯೋಗಮೇಳಕ್ಕೆ ಹಾಜರಾಗುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಸಿ.ಬಿ.ಮಂಜುನಾಥ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಜಾಬ್ ಕೋಆರ್ಡಿನೇಟರ್ 8296020826 ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಅವರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಡಿಕೇರಿ:** ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಮಡಿಕೇರಿ ಸಹಕಾರ ತರಬೇತಿ ಸಂಸ್ಥೆಯ ವತಿಯಿಂದ 2026 ರ ಜುಲೈ, 01 ರಿಂದ 6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಸಹಕಾರ ತರಬೇತಿಯನ್ನು ಪ್ರಾರಂಭಿಸಲಾಗುತ್ತಿದ್ದು, ಕೊಡಗು, ಹಾಸನ ಹಾಗೂ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕುಗಳು ನಮ್ಮ ತರಬೇತಿ ಸಂಸ್ಥೆಯ ವ್ಯಾಪ್ತಿಯಲ್ಲಿ ಬರುವುದರಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೇ, 11 ರಿಂದ ಅರ್ಜಿ ಸಲ್ಲಿಸಬಹುದು. ರೆಗ್ಯೂಲರ್ ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿಯಲ್ಲಿ ಪ್ರತಿ ತಿಂಗಳು ಸಾಮಾನ್ಯ ಅಭ್ಯರ್ಥಿಗಳಿಗೆ ರೂ.500 ಶಿಷ್ಯವೇತನ ಮತ್ತು ವಿಶೇಷ ನಿರುದ್ಯೋಗ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ.600 ಶಿಷ್ಯವೇತನ ನೀಡಲಾಗುವುದು ಹಾಗೂ ಪ್ರವೇಶ ಪಡೆದ ಅಭ್ಯರ್ಥಿಗಳಿಗೆ ಉಚಿತ ವಸತಿ ಗೃಹದ ವ್ಯವಸ್ಥೆ ಇರುತ್ತದೆ.

ಹಾಗೆಯೇ ದೂರಶಿಕ್ಷಣ?ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್? ಪ್ರವೇಶ ಪ್ರಾರಂಭ ಕೋರ್ಸ್ ಅವಧಿ 6 ತಿಂಗಳು(ಸಹಕಾರ ಸಂಘ/ಸಂಸ್ಥೆ/ಬ್ಯಾಂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಮಾತ್ರ). ಇತ್ತೀಚಿನ ಕಾಯಿದೆ ತಿದ್ದುಪಡಿ ಅನ್ವಯ ಕೆಸಿಎಸ್ ನಿಯಮ 17(ಎ)(ಬಿ) ಪ್ರಕಾರ ಪದೋನ್ನತಿ ಹೊಂದಬೇಕಾದರೆ ಕಡ್ಡಾಯವಾಗಿ ಡಿಸಿಎಂ ಕೋರ್ಸ್ ಪಡೆಯಬೇಕಾಗುತ್ತದೆ.

ಪ್ರತಿ ವರ್ಷ ಜನವರಿ–ಜೂನ್ ಮತ್ತು ಜುಲೈ–ಡಿಸೆಂಬರ್‌ವರೆಗೆ ಎರಡು ಅಧಿವೇಶನಗಳು, ಅಧ್ಯಯನ ಸಾಹಿತ್ಯ ನೀಡಲಾಗುವುದು. 6 ತಿಂಗಳ ಅವಧಿಯಲ್ಲಿ (5+5=10) 02 ದಿನಗಳ ಸಂಪರ್ಕ ತರಗತಿಗಳು, ಹೈಬ್ರಿಡ್ ಮಾದರಿಯಲ್ಲಿ ಆಫ್‌ಲೈನ್ ತರಗತಿಗಳು, ಸಹಕಾರ ವಾರಪತ್ರಿಕೆಯನ್ನು ನೀಡಲಾಗುವುದು. ತರಬೇತಿ ಪೂರ್ಣಗೊಳಿಸಿದವರಿಗೆ ಅಂಕಪಟ್ಟಿ ಮತ್ತು ಪ್ರಶಸ್ತಿಪತ್ರ ನೀಡಲಾಗುವುದು. ಆನ್‌ಲೈನ್‌ನಲ್ಲಿ ಪ್ರವೇಶಾತಿ ಲಿಂಕ್ ವೆಬ್‌ಸೈಟ್: www.kscfdcm.co.inನ್ನು ಸಂಪರ್ಕಿಸಬಹುದು. ಅರ್ಜಿ ಫಾರಂನ್ನು ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಮುತ್ತಪ್ಪ ದೇವಸ್ಥಾನದ ಹತ್ತಿರ, ಅಬ್ಬಿಫಾಲ್ಸ್ ರಸ್ತೆ, ಮಡಿಕೇರಿ 571201, ದೂ.ಸಂ.9902189872, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಡಗು ಜಿಲ್ಲಾ ಸಹಕಾರ ಯೂನಿಯನ್, ನಿ., ಪೆನ್ಷನ್‌ಲೇನ್, ನಗರಸಭೆ ಹಿಂಭಾಗ ರಸ್ತೆ, ಮಡಿಕೇರಿ 571201, ದೂ.ಸಂ.8073793669, ಮುಖ್ಯಕಾರ್ಯನಿರ್ವಹಣಾಧಿಕಾರಿ, ಹಾಸನ ಜಿಲ್ಲಾ ಸಹಕಾರ ಯೂನಿಯನ್, ನಿ., ಹಳೇ ಬಸ್ ನಿಲ್ದಾಣದ ಹತ್ತಿರ, ಹಾಸನ 573201, ದೂ.ಸಂ.9845253639 ಇಲ್ಲಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ದೂ.ಸಂ.9663153922, 8762925862, 8762110952 ನ್ನು ಸಂಪರ್ಕಿಸಬಹುದು ಎಂದು ಕೆಐಸಿಎಂ ಪುಟ್ಟಸ್ವಾಮಿ ಅವರು ತಿಳಿಸಿದ್ದಾರೆ.

## ಹವಾಮಾನ ವೈಪರೀತ್ಯ-ನೀರಿನ ಕೊರತೆಯಿಂದ ಕೃಷಿಗೆ ಹಿನ್ನಡೆ

# ಕಡಿಮೆ ನೀರಿನಲ್ಲಿ ಉತ್ತಮ ಬೆಳೆಗೆ ಪ್ರೋತ್ಸಾಹಿಸಿ

**ಮಂಡ್ಯ:** ಕೃಷಿಯ ಯಶಸ್ಸಿಗೆ ಉತ್ತಮ ಬೀಜವೇ ಮೂಲಾಧಾರ. ಗುಣಮಟ್ಟದ ಬೀಜ ಬಳಕೆ ಮಾಡಿದಾಗ ಮಾತ್ರ ಉತ್ತಮ ಇಳುವರಿ ಸಾಧ್ಯ. ಜೊತೆಗೆ ದೇಸಿ ಬೀಜಗಳ ಸಂರಕ್ಷಣೆ ಮತ್ತು ನೀರಿನ ಸಮರ್ಪಕ ಬಳಕೆಗೆ ರೈತರು ಹೆಚ್ಚಿನ ಒತ್ತು ನೀಡಬೇಕು ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ವಿ.ಸಿ.ಫಾರಂನ ಕುಲಪತಿ ಡಾ.ಕೆ.ಸಿ.ನಾರಾಯಣಸ್ವಾಮಿ ಹೇಳಿದರು.

ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಬೀಜೋತ್ಸವ ಹಾಗೂ ಪೂರ್ವ ಮುಂಗಾರು ಆಂದೋಲನ2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಹವಾಮಾನ ವೈಪರೀತ್ಯ ಮತ್ತು ನೀರಿನ ಕೊರತೆಯ ಪರಿಸ್ಥಿತಿಯಲ್ಲಿ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಗಳನ್ನು ರೈತರು ಅಳವಡಿಸಿಕೊಳ್ಳಬೇಕು. ನೀರಿನ ಸದ್ಬಳಕೆಯೊಂದಿಗೆ ಬೆಳೆ ವೈವಿಧ್ಯತೆ ಅಳವಡಿಸಿಕೊಂಡರೆ ರೈತರು ಆರ್ಥಿಕ ಸಂಕಷ್ಟದಿಂದ ಹೊರಬರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ದೇಸಿ ಬೀಜಗಳ ಮಹತ್ವವನ್ನು ಒತ್ತಿ ಹೇಳಿದ ಅವರು, ರೈತರ ಬಳಿ ಉತ್ತಮ ಗುಣಮಟ್ಟದ ಹಾಗೂ ವಿಶಿಷ್ಟ ಲಕ್ಷಣಗಳಿರುವ ದೇಸಿ ಬೀಜಗಳಿದ್ದರೆ ವಿಶ್ವವಿದ್ಯಾಲಯಕ್ಕೆ ಮಾಹಿತಿ ನೀಡುವಂತೆ ಮನವಿ ಮಾಡಿದರು. ಅಂತಹ ಬೀಜಗಳನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಿ ಇತರ ರೈತರಿಗೆ ತಲುಪಿಸುವ ಕಾರ್ಯವನ್ನು ವಿಶ್ವವಿದ್ಯಾಲಯ ಕೈಗೊಳ್ಳಲಿದೆ ಎಂದರು.



ವಿಶ್ವವಿದ್ಯಾಲಯದಲ್ಲಿ ಉತ್ತಮ ಗುಣಮಟ್ಟದ ಬೀಜಗಳು ಲಭ್ಯವಿದ್ದು, ರೈತರು ಅವುಗಳ ಕುರಿತು ಮಾಹಿತಿ ಪಡೆದು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಳೆದ ವರ್ಷ ಸುಮಾರು 5 ಸಾವಿರ ಟನ್ ಬೀಜೋತ್ಪಾದನೆ ಮಾಡಿರುವುದು ವಿಶ್ವವಿದ್ಯಾಲಯದ ಸಾಧನೆ. ಕೃಷಿ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣಾ ಚಟುವಟಿಕೆಗಳನ್ನು ಇನ್ನಷ್ಟು ಬಲಪಡಿಸಲು ವಿಶ್ವವಿದ್ಯಾಲಯ ಬದ್ಧವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ನಿವೃತ್ತ ಕುಲಸಚಿವ ಡಾ. ಬಸವಗೌಡ ಮಾತನಾಡಿ, ಉತ್ತಮ ಬೀಜವನ್ನು ಉತ್ತಮ ಮಣ್ಣಿನಲ್ಲಿ ಬಿತ್ತಿದರೆ ಮಾತ್ರ ಉತ್ತಮ ಇಳುವರಿ ದೊರೆಯುತ್ತದೆ ಎಂದರು. ಇಂತಹ ರೈತಪರ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿಯೂ ಆಯೋಜಿಸಬೇಕು. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಇಂದಿನ ದಿನಗಳಲ್ಲಿ ಕೃಷಿ ಕ್ಷೇತ್ರದಲ್ಲಿ ಅನೇಕ ಉದ್ಯಮಾವಕಾಶಗಳಿದ್ದು, ರೈತರು ಕೃಷಿಯನ್ನು ಉದ್ಯಮವಾಗಿ ಪರಿಗಣಿಸಿ ಸ್ವಾವಲಂಬಿ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಶೋಧನಾ ನಿರ್ದೇಶಕ ಡಾ. ಜಿ.ಎಂ. ದೇವಗಿರಿ ವಹಿಸಿದ್ದರು. ವಿಸ್ತರಣಾ ನಿರ್ದೇಶಕ ಡಾ. ಸಿ. ರಾಮಚಂದ್ರ, ಕುಲಸಚಿವ ಡಾ.ಪಿ.ಎಸ್. ಫಾತಿಮಾ, ಶಿಕ್ಷಣ ನಿರ್ದೇಶಕ ಡಾ.ಎನ್.ಶಿವಕುಮಾರ್, ಸಹ ಸಂಶೋಧನಾ ನಿರ್ದೇಶಕ ಡಾ.ಬಿ.ಎಸ್.ಬಸವರಾಜು ಹಾಗೂ ಬೀಜ ಘಟಕದ ವಿಶೇಷಾಧಿಕಾರಿ ಮತ್ತು ಕಾರ್ಯಕ್ರಮದ ಸಂಘಟಕ ಡಾ. ಎಸ್.ಬಿ.ಯೋಗಾನಂದ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಕೃಷಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ತಿಮ್ಮೇಗೌಡ ಹಾಗೂ ದೇಸಿ ತಳಿಗಳ ಸಂರಕ್ಷಕ ಡಾ. ಕೆ.ಪಿ. ಕೃಷ್ಣಪ್ರಸಾದ್ ರೈತರಿಗೆ ಉಪಯುಕ್ತ ಮಾಹಿತಿ ನೀಡಿದರು.

ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಹಾಗೂ ಕೊಡಗು ಜಿಲ್ಲೆಗಳಿಂದ ಆಗಮಿಸಿದ್ದ ಸಾವಿರಕ್ಕೂ ಅಧಿಕ ರೈತರು, ವಿಜ್ಞಾನಿಗಳು, ವಿದ್ಯಾರ್ಥಿಗಳು, ಪ್ರಗತಿಪರ ರೈತರು ಹಾಗೂ ದೇಸಿ ತಳಿ ಸಂರಕ್ಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ 30ಕ್ಕೂ ಅಧಿಕ ಮಳಿಗೆಗಳು ಭಾಗವಹಿಸಿ, ವಿವಿಧ ಕೃಷಿ ತಂತ್ರಜ್ಞಾನಗಳು, ಗುಣಮಟ್ಟದ ಬೀಜಗಳು ಹಾಗೂ ನವೀನ ಕೃಷಿ ಪದ್ಧತಿಗಳ ಕುರಿತು ರೈತರಿಗೆ ಮಾಹಿತಿ ನೀಡಿದವು.

# ಜಾನಪದ–ರಂಗಭೂಮಿ ಜೀವನ ಮೌಲ್ಯಗಳ ಪ್ರತಿಬಿಂಬ




**ರಾಮನಗರ:** ಜಾನಪದ ರಂಗಭೂಮಿಯು ಮಾನವ ಬದುಕಿನ ಹಲವು ಆಯಾಮಗಳನ್ನು ತೆರೆದು ತೋರಿಸುವ ನೆಲೆಯಲ್ಲಿ ಬೆಳೆದು ಬಂದಿದ್ದು, ಅದರ ಕಥೆಗಳು ಮತ್ತು ಪಾತ್ರಗಳು ಜೀವನ ಮೌಲ್ಯಗಳನ್ನು ಬಿಂಬಿಸುತ್ತವೆ ಎಂದು ಮೈಸೂರಿನ ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಕೆ.ರಾಮಕೃಷ್ಣ ಹೇಳಿದರು.

ಕೃಷ್ಣಾಪುರದೊಡ್ಡಿಯ ಕೆ.ಎಸ್.ಮುದ್ದಪ್ಪ ಸ್ಮಾರಕ ಟ್ರಸ್ಟ್‌ನ ಇಫ್ರೋ ಜಾನಪದ ಮಹಾವಿದ್ಯಾಲಯದ ಸರ್ಟಿಫಿಕೇಟ್ ಕೋರ್ಸ್ ವಿದ್ಯಾರ್ಥಿನಿಯರು ಬೆಂಗಳೂರಿನ ಕಲಾಗ್ರಾಮದಲ್ಲಿ ಅಭಿನಯಿಸಿದ ಬುಡಬೆಳ್ಳಿ–ನಡುಪಚ್ಚೆ–ಗೊನೆಮುತ್ತು ನಾಟಕ ಪ್ರದರ್ಶನದ ವೇಳೆ ಗೌರವ ಸ್ವೀಕರಿಸಿ ಅವರು ಮಾತನಾಡಿದರು.

ಜಗತ್ತಿನ ಇತಿಹಾಸದಲ್ಲಿ ಅತಿ ಪ್ರಾಚೀನವೆನಿಸಬಹುದಾದ ಮೌಖಿಕ ಪರಂಪರೆಯ ಜನಪದ ಕಥೆಗಳು ಸದಾ ಚಲನಶೀಲವಾಗಿರುತ್ತವೆ. ಜಾನಪದ ಕ್ಷೇತ್ರ ಕಾರ್ಯಕರ್ತರು, ಸಂಶೋಧಕರು ಮತ್ತು ಸಾಹಿತಿಗಳು ಜನಪದ ಕಥಾವಸ್ತುಗಳನ್ನು ಆಧರಿಸಿ ನಾಟಕಗಳನ್ನು ರಚಿಸಿ ಪ್ರದರ್ಶಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಶ್ಲಾಘಿಸಿದರು.

ನಾಟಕಕಾರ ಡಾ.ಎಂ.ಬೈರೇಗೌಡ ಮಾತನಾಡಿ, ಕನಕಪುರ ತಾಲೂಕಿನ ಅಣಕಡಬೂರು ಗ್ರಾಮದ ಗುಡ್ಡಯ್ಯ ಹೇಳಿದ ಇರುಳಿಗರ ಜನಪದ ಕಥೆಯನ್ನು ನಾಟಕ ರೂಪಕ್ಕೆ ತಂದು, ಸರ್ಟಿಫಿಕೇಟ್ ಕೋರ್ಸ್‌ನ 14 ಕಿಶೋರಿಯರಿಗೆ ತರಬೇತಿ ನೀಡಿ ಪ್ರದರ್ಶನಕ್ಕೆ ಸಿದ್ಧಪಡಿಸಲಾಗಿದೆ. ಇದರಿಂದ ಗ್ರಾಮೀಣ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸುವ ಕೆಲಸವಾಗಿದೆ ಎಂದರು.

ನಾಟಕ ನಿರ್ದೇಶಕ ಎಂ.ಸಿ. ನಾಗರಾಜು ಮಾತನಾಡಿ, ಮಹಿಳಾ ಸಬಲೀಕರಣ ಮತ್ತು ಮಹಿಳೆಯರ ಮೇಲಿನ ಅಪವಾದಗಳನ್ನು ಪ್ರಶ್ನಿಸುವ ಉದ್ದೇಶದಿಂದ ಈ ನಾಟಕ ರಚಿಸಲಾಗಿದೆ. ಗ್ರಾಮೀಣ ಮಕ್ಕಳಲ್ಲಿ ಆತ್ಮಸ್ಥೈರ್ಯ ಬೆಳೆಸಲು ರಂಗಭೂಮಿ ಪರಿಣಾಮಕಾರಿ ಸಾಧನವಾಗಿದೆ ಎಂದರು.

ನಾಟಕಕ್ಕೆ ಗಜಾನನ ಟಿ.ನಾಯ್ಕ ಸಂಗೀತ ಸಂಯೋಜನೆ ನೀಡಿದ್ದು, ವಿದುಷಿ ವಿನುತಾ ಬೂದಿಹಾಲ್ ಹಾಗೂ ಶಶಿಕಲಾ ಹಿನ್ನೆಲೆ ಗಾಯನದ ಮೂಲಕ ಮೆರುಗು ತಂದರು. ಹರಿಪ್ರಸಾದ್ ವಾದ್ಯ ಸಹಕಾರ ನೀಡಿದರು. ಪ್ರಸಾದನ ಎಂ.ಸಿ. ನಾಗರಾಜು ಅವರದ್ದಾಗಿದ್ದು, ಬೆಳಕಿನ ವಿನ್ಯಾಸವನ್ನು ಪುನೀತ್ ನಿರ್ವಹಿಸಿದರು. ರಾಮನಗರ, ಕನಕಪುರ, ಮಳವಳ್ಳಿ, ಮದ್ದೂರು ಹಾಗೂ ರಾಮನಗರ ತಾಲೂಕಿನ ವಿದ್ಯಾರ್ಥಿನಿಯರಾದ ವಿದ್ಯಾ ಬಿ., ನವ್ಯಶ್ರೀ, ಭವ್ಯ, ನಿಸರ್ಗ, ಬಿಂದು, ಸಿಂಚನ, ವೈಷ್ಣವಿ, ಪುಣ್ಯಶ್ರೀ, ಗಾನವಿ, ಸ್ಫೂರ್ತಿ, ಸುಪ್ರಿಯಾ, ಸಂಜನಾ, ತನಿಷ್ಕ ಹಾಗೂ ರಂಜಿನಿ ಅಭಿನಯಿಸಿ ಮೆಚ್ಚುಗೆ ಪಡೆದರು.

# ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ



**ಮಂಡ್ಯ:** ತಾಲ್ಲೂಕಿನ ದೊಡ್ಡಬಾಣಸವಾಡಿ ಗ್ರಾಮದಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಹಾಗೂ ಜಿಲ್ಲಾ ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿಯಮಿತದ ಸಹಯೋಗದಲ್ಲಿ 9ನೇ ಸುತ್ತಿನ ಕಾಲುಬಾಯಿ ಜ್ವರದ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಪಿ.ರವಿಕುಮಾರ್ ಗೌಡ ಗಣಿಗ ಚಾಲನೆ ನೀಡಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಪಿ. ರವಿಕುಮಾರ್ ಗೌಡ ಗಣಿಗ, ರಾಸುಗಳು ಅನಾರೋಗ್ಯದಿಂದ ಸಾವನ್ನಪ್ಪಿದ ಸಂದರ್ಭಗಳಲ್ಲಿ ವಿಮೆ ಮಾಡಿಸಿದ್ದರೆ ರೈತರಿಗೆ ಆರ್ಥಿಕ ನಷ್ಟದ ಪರಿಹಾರ ದೊರೆಯುತ್ತದೆ. ಹೀಗಾಗಿ ಪಶು ವಿಮೆ ಮಾಡಿಸಿಕೊಳ್ಳುವುದು ಅಗತ್ಯ ಎಂದು ಸಲಹೆ ನೀಡಿದರು.

ಮನ್ಮುಲ್ ಅಧ್ಯಕ್ಷ ಯು.ಸಿ. ಶಿವಕುಮಾರ್ ಮಾತನಾಡಿ, ರೈತರು ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಹಸುಗಳನ್ನು ಖರೀದಿಸುತ್ತಾರೆ. ರೈತರಿಗೆ ನಷ್ಟವಾಗದಂತೆ ರಾಸುಗಳಿಗೆ ವಿಮೆ ಮಾಡಿಸುವ ಕುರಿತು ಹೆಚ್ಚಿನ ಜಾಗೃತಿ ಅಗತ್ಯವಿದೆ ಎಂದು ಹೇಳಿದರು.

ಪಶುವೈದ್ಯಾಧಿಕಾರಿ ಡಾ.ಸುರೇಶ್ ಕಾರ್ಯಕ್ರಮದ ಉದ್ದೇಶ ಮತ್ತು ಲಸಿಕೆಯ ಮಹತ್ವದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಮನುಕುಮಾರ್, ನಿರ್ದೇಶಕರಾದ ಮಹೇಶ್, ಶಿವರಾಮು, ಮಾಜಿ ಅಧ್ಯಕ್ಷ ಆನಂದ್, ಪಶುವೈದ್ಯಾಧಿಕಾರಿ ಡಾ.ಶರತ್, ಹರೀಶ್ ದೊಡ್ಡಬಾಣಸವಾಡಿ ಸೇರಿದಂತೆ ಗ್ರಾಮದ ಮುಖಂಡರು ಮತ್ತು ರೈತರು ಭಾಗವಹಿಸಿದ್ದರು.

## ಹಾರಂಗಿ ಮತ್ತು ಕಾವೇರಿ ನದಿ ಪಾತ್ರದಲ್ಲಿ ವಾಸಿಸುವ ಜನರ ಗಮನಕ್ಕೆ

**ಮಡಿಕೇರಿ:** ಕುಶಾಲನಗರ, ಪಿರಿಯಾಪಟ್ಟಣ, ಅರಕಲಗೂಡು, ಹುಣಸೂರು, ಕೆ.ಆರ್.ನಗರ ಹಾಗೂ ಸಾಲಿಗ್ರಾಮ ತಾಲ್ಲೂಕುಗಳಿಗೆ ಕುಡಿಯುವ ನೀರು ಪೂರೈಕೆಗೆ ಮೇ, 09 ರಿಂದ 13 ರವರೆಗೆ ದಿನವೊಂದಕ್ಕೆ ಜಲಾಶಯದಿಂದ ನದಿಗೆ 500 ಕ್ಯೂಸೆಕ್ ನೀರನ್ನು ಹರಿಸಲು ಹಾರಂಗಿ ಜಲಾಶಯ ಕುಡಿಯುವ ನೀರಿನ ಸಮಿತಿ ಸಭೆಯಲ್ಲಿ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಅವರು ಆದೇಶಿಸಿರುತ್ತಾರೆ.



ಹಾಗೆಯೇ ಹಾರಂಗಿ ಜಲಾಶಯ ಯೋಜನೆಯ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರು ಹಾಗೂ ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ॥ ಮಂತರ್ ಗೌಡ ಅವರ ಮಾಹಿತಿಗೆ ತರಲಾಗಿರುತ್ತದೆ.

ಆದ್ದರಿಂದ ಹಾರಂಗಿ ಮತ್ತು ಕಾವೇರಿ ನದಿಯ ಪಾತ್ರದಲ್ಲಿರುವ ಮತ್ತು ನದಿಯ ಎರಡು ದಂಡೆಯಲ್ಲಿ ವಾಸಿಸುತ್ತಿರುವ ಜನರು ತಮ್ಮ ಆಸ್ತಿ ಪಾಸ್ತಿ ಹಾಗೂ ಜನ ಜಾನುವಾರು ರಕ್ಷಣೆಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಕುಶಾಲನಗರ ಹಾರಂಗಿ ಪುನರ್ವಸತಿ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಐ.ಕೆ.ಪುಟ್ಟಸ್ವಾಮಿ ಅವರು ಕೋರಿದ್ದಾರೆ.

# ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 45 ಸಂಚಾರಿ ಇ-ಬೈಕ್ ಗ್ರಾಮೀಣರ ತುರ್ತು ಆರೋಗ್ಯ ಸೇವೆಗೆ ವರದಾನ

**ಬೆಂಗಳೂರು:** ಗ್ರಾಮೀಣ ಹಾಗೂ ದೂರದ ಪ್ರದೇಶಗಳಲ್ಲಿ ತುರ್ತು ಆರೋಗ್ಯ ಸೇವೆಗಳನ್ನು ತ್ವರಿತವಾಗಿ ಒದಗಿಸಲು ಸಂಚಾರಿ ಇ–ಬೈಕ್‌ಗಳು ಮಹತ್ವದ ಪಾತ್ರವಹಿಸಲಿವೆ ಎಂದು ಜಿಲ್ಲಾ ಪಂಚಾಯತ್ ಸಿಇಒ ಡಾ.ವಾಸಂತಿ ಅಮರ್ ಹೇಳಿದರು.

ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯ ಆಶ್ರಯದಲ್ಲಿ, ಆಪ್ಟಮ್ ಇಂಡಿಯಾ ಸಂಸ್ಥೆ ಹಾಗೂ ಯುನೈಟೆಡ್ ವೇ ಬೆಂಗಳೂರು ವತಿಯಿಂದ ಸಿ.ಎಸ್.ಆರ್ ಅನುದಾನದಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 45 ಇ–ಬೈಕ್‌ಗಳನ್ನು ಹಸ್ತಾಂತರಿಸುವ ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಗುರುವಾರ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಈಗಾಗಲೇ ಆರೋಗ್ಯ ಸೇತು ಸಂಚಾರಿ ಆರೋಗ್ಯ ಘಟಕ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಿದೆ. ಇದಕ್ಕೆ ಪೂರಕವಾಗಿ ಆಪ್ಟಮ್ ಇಂಡಿಯಾ ಸಂಸ್ಥೆ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇ–ಬೈಕ್‌ಗಳನ್ನು ನೀಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಸೂಕ್ತ ಸಾರಿಗೆ ವ್ಯವಸ್ಥೆಯ ಕೊರತೆಯಿಂದ ತುರ್ತು ಆರೋಗ್ಯ ಸೇವೆಗಳಲ್ಲಿ ವಿಳಂಬ ಉಂಟಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಇ–ಬೈಕ್‌ಗಳು ಆರೋಗ್ಯ ಸಿಬ್ಬಂದಿಗೆ ಪರಿಣಾಮಕಾರಿ ನೆರವಾಗಲಿವೆ. ಗ್ರಾಮೀಣ ಭಾಗದ ಜನರಿಗೆ ತ್ವರಿತ ಚಿಕಿತ್ಸೆ, ಔಷಧಿ ವಿತರಣೆ ಹಾಗೂ ಮನೆ ಮನೆಗೆ ಆರೋಗ್ಯ ಸೇವೆ ತಲುಪಿಸಲು ಈ ವಾಹನಗಳು ಸಹಕಾರಿಯಾಗಲಿವೆ ಎಂದು ತಿಳಿಸಿದರು.

ಇ–ಬೈಕ್‌ಗಳು ಪರಿಸರ ಸ್ನೇಹಿಯಾಗಿದ್ದು, ವಾಯುಮಾಲಿನ್ಯ ನಿಯಂತ್ರಣಕ್ಕೂ ನೆರವಾಗುತ್ತವೆ. ವಾಹನಗಳನ್ನು ಸಮರ್ಪಕವಾಗಿ ನಿರ್ವಹಿಸಿ, ಅಗತ್ಯವಿರುವ ಸ್ಥಳಗಳಿಗೆ ಸಮಯೋಚಿತವಾಗಿ ಆರೋಗ್ಯ ಸೇವೆ ಒದಗಿಸಬೇಕು ಎಂದು ಆರೋಗ್ಯ ಸಿಬ್ಬಂದಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಲಕ್ಕಾ ಕೃಷ್ಣ ರೆಡ್ಡಿ, ಆಪ್ಟಮ್ ಇಂಡಿಯಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಉಮಾ ರತ್ನಮ್ ಕೃಷ್ಣ, ಯುನೈಟೆಡ್ ವೇ ಬೆಂಗಳೂರು ಸಂಸ್ಥೆಯ ಸಿಇಒ ರಾಜೇಶ್ ಕೃಷ್ಣನ್, ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.



### ಪ್ರಮುಖಾಂಶಗಳು:

- ಇ-ಬೈಕ್‌ಗಳು ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಸಂಚರಿಸಲಿವೆ.
- ತುರ್ತು ಆರೋಗ್ಯ ಸೇವೆಗಳನ್ನು ತ್ವರಿತವಾಗಿ ಒದಗಿಸಲಿವೆ.
- ಆರೋಗ್ಯ ಸಿಬ್ಬಂದಿಯ ಕಾರ್ಯಕ್ಷಮತೆ ಹೆಚ್ಚಲಿದೆ.
- ಹೊಸಕೋಟೆ, ದೇವನಹಳ್ಳಿ, ದೊಡ್ಡಬಳ್ಳಾಪುರ ಹಾಗೂ ನೆಲಮಂಗಲ ಭಾಗದ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ.
- ಬಡವರು, ಮಧ್ಯಮ ವರ್ಗದವರು ಹಾಗೂ ಆಸ್ಪತ್ರೆಗೆ ತೆರಳಲು ಸಾಧ್ಯವಾಗದವರಿಗೆ ನೆರವಾಗಲಿದೆ.
- ಆರೋಗ್ಯ ಸೇವೆಯನ್ನು ಮತ್ತಷ್ಟು ಜನರ ಮನೆಬಾಗಿಲಿಗೆ ತಲುಪಿಸಲಿದೆ.

# ಸಾರ್ವಜನಿಕರ ಬೇಡಿಕೆಗೆ ಸ್ಪಂದನೆ: ಶಾಸಕ ಸಿಪಿವೈ

**ರಾಮನಗರ:** ಕೆಂಪೇಗೌಡ ಬಸ್ ನಿಲ್ದಾಣದಿಂದ ರಾಮನಗರದವರೆಗೆ ಸಂಚರಿಸುತ್ತಿದ್ದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ)ಯ ವಜ್ರ ವಿಸ್ತಾರ ಹವಾನಿಯಂತ್ರಿತ ಬಸ್ ಸೇವೆಯನ್ನು ಇದೀಗ ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಚನ್ನಪಟ್ಟಣದವರೆಗೆ ವಿಸ್ತರಿಸಲಾಗಿದೆ ಎಂದು ಚನ್ನಪಟ್ಟಣ ಶಾಸಕ ಸಿ.ಪಿ.ಯೋಗೇಶ್ವರ್ ಹೇಳಿದರು.

ಚನ್ನಪಟ್ಟಣ ಬಸ್ ನಿಲ್ದಾಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಜ್ರ ವಿಸ್ತಾರ ಬಸ್ ಸೇವೆಯ ವಿಸ್ತರಿತ ಮಾರ್ಗಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ನಗರ ಹಾಗೂ ಹೊರವಲಯದ ಪ್ರಯಾಣಿಕರಿಗೆ ಗುಣಮಟ್ಟದ ಸಾರಿಗೆ ಸೇವೆ ಒದಗಿಸುತ್ತಿದ್ದು, ದಿನೇದಿನೇ ಸಾರ್ವಜನಿಕರ ವಿಶ್ವಾಸ ಗಳಿಸುತ್ತಿದೆ. ಈ ಸೇವೆಯನ್ನು ಇನ್ನಷ್ಟು



ಸುಧಾರಿಸುವ ನಿಟ್ಟಿನಲ್ಲಿ ಬಿಎಂಟಿಸಿ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು.

ಪ್ರಸ್ತುತ ಬಿಎಂಟಿಸಿ 50 ಘಟಕಗಳಿಂದ ವಿವಿಧ ಮಾದರಿಯ ಬಸ್‌ಗಳ ಮೂಲಕ ಪ್ರತಿದಿನ 6,275 ಅನುಸೂಚಿಗಳಲ್ಲಿ 65,952 ಸುತ್ತುವಳಿಗಳನ್ನು ನಡೆಸುತ್ತಿದೆ. ಸುಮಾರು 13.06 ಲಕ್ಷ ಕಿಲೋಮೀಟರ್ ವ್ಯಾಪ್ತಿಯಲ್ಲಿ ಸಾರಿಗೆ ಸೇವೆ ಒದಗಿಸಲಾಗುತ್ತಿದ್ದು, ಸರಾಸರಿ 45 ಲಕ್ಷ ಪ್ರಯಾಣಿಕರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಸಂಸ್ಥೆಯು ಪರಿಸರ ಸ್ನೇಹಿ ಸಾರಿಗೆಗೆ ಆದ್ಯತೆ ನೀಡುತ್ತಿದ್ದು, ಈಗಾಗಲೇ 1,757 ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಣೆಗೆ ಇಳಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್, ಚನ್ನಪಟ್ಟಣ ನಗರಸಭೆ ಅಧ್ಯಕ್ಷ ನಾಗೇಶ್, ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ರಂಗನಾಥ್, ಸಾರಿಗೆ ಅಧಿಕಾರಿ ಪುರುಷೋತ್ತಮ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಐಪಿಎಲ್ ಬೆಟ್ಟಿಂಗ್: ಮೂವರ ಬಂಧನ, ಬೆನ್ಸ್ ಕಾರು ವಶ

**ಮೈಸೂರು:** ನಗರದ ದೇವರಾಜ ಪೊಲೀಸರು ಕಾರ್ಯಾಚರಣೆ ನಡೆಸಿ ಐ.ಪಿ.ಎಲ್. ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿದ್ದ 3 ಜನರ ಬಂಧಿಸಿ, 1 ಬೆನ್ಸ್ ಕಾರು, 15,900ರೂ. ನಗದು ಹಣ ಮತ್ತು 3 ಮೊಬೈಲ್‌ಗಳು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.



ದೇವರಾಜ ಪೊಲೀಸರು ಮೇ7ರಂದು ಠಾಣಾ ವ್ಯಾಪ್ತಿಯಲ್ಲಿ ಗಸ್ತಿನಲ್ಲಿರುವಾಗ ದೇವರಾಜ ಪೊಲೀಸ್ ಠಾಣಾ ವ್ಯಾಪ್ತಿಯ ಟೌನ್‌ಹಾಲ್ ಹಿಂಭಾಗದಲ್ಲಿರುವ ಪಾರ್ಕಿಂಗ್ ಸ್ಥಳದಲ್ಲಿ ಬೆನ್ ಕಾರಿನಲ್ಲಿದ್ದ ಮೂರು ಜನರನ್ನು ಪರಿಶೀಲಿಸಲಾಗಿ, ಸದರಿಯವರು ಕಾರಿನಲ್ಲಿ ಕುಳಿತು ಆರ್.ಸಿ.ಬಿ ಮತ್ತು ಲಕ್ನೋ ಸೂಪರ್ ಜೆಂಟ್ಸ್ ತಂಡಗಳ ಐ.ಪಿ.ಎಲ್ ಕ್ರಿಕೆಟ್ ಪಂದ್ಯಾವಳಿಗಳಿಂದ ಅಕ್ರಮವಾಗಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕಾನೂನು ಬಾಹಿರವಾಗಿ ಸಾರ್ವಜನಿಕರಿಂದ ಆನ್‌ಲೈನ್,ಆಫ್‌ಲೈನ್ ಮೂಲಕ ಹಣವನ್ನು ಪಣವಾಗಿರಿಸಿಕೊಂಡು ಮೊಬೈಲ್‌ನಲ್ಲಿ ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿದ್ದ ಮಂಡಿಮೊಹಲ್ಲಾದ ಸಂಜಯ್ ಕುಮಾರ್(33), ಇಲವಾಲದ ಪಿ.ಪಿ.ವಿನೋದ್(32) ಮತ್ತು ಪಡುವಾರಹಳ್ಳಿಯ ಲಿಖಿತಕುಮಾರ್(27) ಎಂಬುವರುಗಳನ್ನು ವಶಕ್ಕೆ ಪಡೆದು ಕ್ರಿಕೆಟ್ ಬೆಟ್ಟಿಂಗ್‌ಗೆ ಬಳಕೆ ಮಾಡುತ್ತಿದ್ದ 3 ಮೊಬೈಲ್ ಫೋನ್‌ಗಳು, 15,900ರೂ. ನಗದು ಹಣ ಮತ್ತು 1 ಬೆನ್ ಕಾರನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಈ ಸಂಬಂಧ ದೇವರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಳ್ಳಲಾಗಿದೆ.

# ಪುದೀನಾದ ಕಣ ಕಣದಲ್ಲೂ ಇದೆ ಔಷಧ ಗುಣ



✍ ಸೌಮ್ಯಸನತ್

ಪುದಿನ ಎಂಬ ಗಾಢ ಪರಿಮಳ ಬೀರುವ ಸಾಮಾನ್ಯ ಸಸ್ಯ. ನಮ್ಮ ಮನೆಗಳಲ್ಲಿ, ಪುಟ್ಟ ಕುಂಡಗಳಲ್ಲಿ ಬೆಳೆಸಬಹುದಾದ ಈ ಸಸ್ಯ ತನ್ನ ಔಷಧೀಯ ಗುಣಗಳಿಂದಾಗಿ ಅಷ್ಟೇ ಅಲ್ಲ ಸಾಕಷ್ಟು ವೈವಿಧ್ಯಮಯ ಅಡುಗೆ ತಯಾರಿಯಲ್ಲೂ ಮುಖ್ಯ ಪಾತ್ರ ವಹಿಸುತ್ತದೆ. ಬಹಳ ಹಿಂದಿನಿಂದಲೂ ನಮ್ಮ ಹಿರಿಯರು ಪುದಿನವನ್ನು ನಿತ್ಯೋಪಯೋಗಿ ಸಸ್ಯವಾಗಿ ಬಳಸುತ್ತಲೇ ಬಂದಿದ್ದು, ತನ್ನ ತಾಜಾತನದ ಗುಣದಿಂದಾಗಿ ಹಾಗೂ ವಿಶೇಷ ಘಮದಿಂದಾಗಿ ಎಲ್ಲರ ಹೃದಯ ಗೆಲ್ಲುವ ಸಸ್ಯವಿದು. ತಾಜಾತನದ ಅನುಭೂತಿ ನೀಡುವ ಬೆಳಗಿನ ಅತ್ಯಗತ್ಯ ಹಲ್ಲುಜ್ಜುವ ಪೇಸ್ಟ್‌ನಿಂದ ಹಿಡಿದು, ಬಗೆಬಗೆಯ ಚ್ಯೂಯಿಂಗಂ, ಪೆಪ್ಪರಮಿಂಟುಗಳ ಫ್ಲೇವರ್‌ಗಳಲ್ಲಿಂದು ಪುದಿನಕ್ಕೆ ರಾಜ ಮರ್ಯಾದೆ.

ಆರೋಗ್ಯ ಭಾಗ್ಯ

ಪುದಿನದಲ್ಲಿ ಸಾಕಷ್ಟು ಆಂಟಿ ಆಕ್ಸಿಡೆಂಟ್ಸ್ ಹಾಗೂ ಆಂಟಿ ಬ್ಯಾಕ್ಟೀರಿಯಲ್ ಗುಣಗಳ ಜೊತೆಗೆ ವಿಟಮಿನ್ ಎ, ವಿಟಮಿನ್ ಸಿ ಹಾಗೂ ಬಿ ಕಾಂಪ್ಲೆಕ್ಸ್ ಇದೆ. ಪಾಸ್ಪರಸ್, ಕ್ಯಾಲ್ಶಿಯಂ, ಕಬ್ಬಿಣಾಂಶ, ಪೊಟಾಶಿಯಂ ಹಾಗೂ ಮ್ಯಾಂಗನೀಸ್ ಮತ್ತಿತರ ಖನಿಜಾಂಶಗಳೂ ಇವೆ.

ಬನ್ನಿ ನಾವಿಂದು ಪುದಿನಾದ ಸೇವನೆಯಿಂದ ನಮಗಿರುವ ಆರೋಗ್ಯಕರ ಉಪಯೋಗಗಳನ್ನು ತಿಳಿಯೋಣ.

1. ಆಹಾರವನ್ನು ಸುಲಭವಾಗಿ ಪಚನ ಮಾಡುತ್ತದೆ.
2. ತಿಂದ ಕೊಬ್ಬನ್ನು ಅರಗಿಸಲು ಸಹಾಯ ಮಾಡುತ್ತದೆ.
3. ಹೆಚ್ಚಿನ ಆಹಾರ ಸೇವನೆಯಿಂದ ಉಂಟಾದ ಹೊಟ್ಟೆ ಉಬ್ಬರವನ್ನು, ಹೊಟ್ಟೆಯಲ್ಲಿ ಸಂಚಿತವಾದ ಗಾಳಿಯನ್ನು ಹೊರಹಾಕಿ, ನಿವಾರಣೆ ಮಾಡುತ್ತದೆ.
4. ಗರ್ಭಿಣಿಯರ ವಾಂತಿ ನಿವಾರಣೆ ಮಾಡುತ್ತದೆ.
5. ಊಟವಾದ ನಂತರ ಈ ಎಲೆಗಳನ್ನು ಅಗಿದು ತಿನ್ನುವುದರಿಂದ ಹಲ್ಲುಗಳಲ್ಲಿ ಹುಳುಕು ಬಾರದಂತೆ ತಡೆಯುತ್ತದೆ. ಹುಳುಕು ಹಲ್ಲಿನ ದುರ್ವಾಸನೆ ತಡೆಯುತ್ತದೆ.
6. ಹಲ್ಲುಗಳ ಒಸಡನ್ನು ಬಲಪಡಿಸಿ ದಂತರಕ್ಷಣ ನೀಡುತ್ತದೆ.
7. ಹೊಟ್ಟೆಯ ಜಂತು ಹುಳುಗಳನ್ನು ತಡೆದು, ಮೂತ್ರವನ್ನು ಹೆಚ್ಚಿಸುತ್ತದೆ ಮತ್ತು ವಿಷದ್ರವ್ಯಗಳನ್ನು ಹೊರಹಾಕಲು ಸಹಕರಿಸುತ್ತದೆ.
8. ಇದರ ಕಷಾಯವನ್ನು ದಿನಕ್ಕೆ 3 ಬಾರಿ ಸೇವಿಸಿದರೆ ಕೆಮ್ಮು ಮತ್ತು ನೆಗಡಿ ಗುಣವಾಗುತ್ತದೆ.
9. ರಜಸ್ರಾವವಾಗುವ ಮೊದಲು 4 ದಿನ ಇದರ ಕಷಾಯ ಬಳಸಿದರೆ ಮುಟ್ಟಾದಾಗ ಉಂಟಾಗುವ ನೋವುಗಳು ಕಡಿಮೆಯಾಗುತ್ತವೆ.
10. ಎಲೆಗಳ ರಸವನ್ನು ಈರುಳ್ಳಿ ರಸದೊಂದಿಗೆ ಬೆರೆಸಿ ಕುಡಿದರೆ ವಾಂತಿ ನಿಲ್ಲುತ್ತದೆ.



11. ನೋವು ನಿವಾರಕ ಔಷಧಿಗಳಲ್ಲಿ ಈ ತೈಲವನ್ನು ಬಳಸಲಾಗುತ್ತಿದೆ.
12. ಗಂಟಲು ತುರಿಕೆ ನಿವಾರಣೆಯ ಚಾಕಲೇಟುಗಳಲ್ಲೂ, ಹಲ್ಲುಜ್ಜುವ ಪೇಸ್ಟುಗಳಲ್ಲೂ ಇದು ಬಳಕೆಯಾಗುತ್ತದೆ.
13. ನೆನಪಿನ ಶಕ್ತಿಯನ್ನು ಉತ್ತಮಗೊಳಿಸುತ್ತದೆ.

ಅಷ್ಟೇ ಏಕೆ, ಪುದಿನ ರೈಸ್, ಪುದಿನ ಜ್ಯೂಸ್, ಪುದಿನ ಚಹಾ, ಪುದಿನ ಚಟ್ನಿ, ಪುದಿನ ದೋಸೆ ಸೇರಿದಂತೆ ಹಲವು ಬಗೆಯ ಅಡುಗೆಗಳನ್ನು ನಾವು ಮನೆಗಳಲ್ಲಿ ಮಾಡುವ ಮೂಲಕ ಪುದಿನ ಸಾಧ್ಯತೆಗಳನ್ನೂ ನಾವು ಸಾಕಷ್ಟು ವಿಸ್ತರಿಸಿಕೊಂಡಿದ್ದೇವೆ. ಅದರಲ್ಲಿ ಕೆಲವು ಬಗೆಯ ಅಡುಗೆಯನ್ನು ಕಲಿಯೋಣವೇ

**ಪುದಿನಾ ಚಟ್ನಿ**

ತಯಾರಿಸಲು ಬೇಕಾಗುವ ಸಾಮಗ್ರಿಗಳು

ಪುದಿನಾ – 1 ಕಪ್
ಕಡ್ಲೆಬೇಳೆ – 4 ಚಮಚ
ಉದ್ದಿನಬೇಳೆ – 2 ಚಮಚ
ಜೀರಿಗೆ –1 ಚಮಚ
ದನಿಯಾ – 2 ಚಮಚ
ಬ್ಯಾಡಿಗೆ ಮೆಣಸಿನಕಾಯಿ – 7 ರಿಂದ 8
ಕೊತ್ತಂಬರಿ ಸೊಪ್ಪು – 1/2 ಬಟ್ಟಲು
ಹುಣಸೇಹಣ್ಣು – ಅರ್ಧ ನಿಂಬೆ ಗಾತ್ರ
ಬೆಳ್ಳುಳ್ಳಿ – 4 ಎಸಳುಗಳು
ತೆಂಗಿನಕಾಯಿ 1/2 ಬಟ್ಟಲು
ರುಚಿಗೆ ಅನುಗುಣವಾಗಿ ಉಪ್ಪು, ಅರಿಶಿನ ಮತ್ತು ಬೆಲ್ಲ.

ಒಂದು ದಪ್ಪ ತಳದ ಬಾಣಲೆಯಲ್ಲಿ ಎಣ್ಣೆ ಹಾಕಿ, ಎಣ್ಣೆ ಕಾದ ನಂತರ ಅದಕ್ಕೆ ಕಡ್ಲೇಬೇಳೆ, ಉದ್ದಿನ ಬೇಳೆ, ಜೀರಿಗೆ, ದನಿಯಾ, ಬ್ಯಾಡಗೀ ಮೆಣಸಿನಕಾಯಿ ಹಾಕಿ ಚೆನ್ನಾಗಿ ಹುರಿದ ನಂತರ ಬಾಣಲಿಗೆ, ಪುದೀನಾ, ಸ್ವಲ್ಪ ಕೊತ್ತಂಬರೀ ಸೊಪ್ಪು ಸೇರಿಸಿ ಚೆನ್ನಾಗಿ ಹಸೀ ಹೋಗುವವರೆಗೂ ಬಾಡಿಸಿಕೊಂಡು ತಣ್ಣಗಾದ ನಂತರ ಅದಕ್ಕೆ ಉಪ್ಪು, ಹುಣಸೇ ಹಣ್ಣು, ಬೆಲ್ಲ ಮತ್ತು ತೆಂಗಿನಕಾಯಿ ತುರಿಯನ್ನು ಸೇರಿಸಿ ನುಣ್ಣಗೆ ರುಬ್ಬಬೇಕು. ಒಂದು ಸಣ್ಣ ಬಾಣಲೆಗೆ ಸ್ವಲ್ಪ ಎಣ್ಣೆ ಹಾಕಿ ಎಣ್ಣೆ ಕಾದ ನಂತರ, ಸಾಸಿವೆ ಮತ್ತು ಇಂಗು ಸೇರಿಸಿ ಸಿಡಿಸಿಕೊಂಡು ಅದನ್ನು ರುಬ್ಬಿದ ಮಿಶ್ರಣಕ್ಕೆ ಸೇರಿಸಿದರೆ, ರುಚಿ ರುಚಿಯಾದ ಪುದೀನಾ ಚಟ್ನಿ ಸಿದ್ಧ.

**ಪುದೀನಾ ಜ್ಯೂಸು**

ಪುದೀನಾ ಸೊಪ್ಪು 1 ಚಿಕ್ಕ ಕಪ್ಪು,
ಕೊತ್ತಂಬರಿ ಸೊಪ್ಪು 1 ಚಿಕ್ಕ ಕಪ್ಪು,



ತುಳಸಿ ಎಲೆ 1/4 ಕಪ್ಪು,
ಉಪ್ಪು ನೀರಿನಲ್ಲಿ ಶುಭ್ರಗೊಳಿಸಿ, ಒರಳಲ್ಲಿ ಹಾಕಿ ಚೆನ್ನಾಗಿ ಕುಟ್ಟಿ ರಸ ತೆಗೆದು, ಆ ರಸಕ್ಕೆ 2 ಚಮಚ ಜೇನುತುಪ್ಪ, 2 ಚಮಚ ನಿಂಬೆರಸ ಸೇರಿಸಿ ಬೆಳಗ್ಗೆ ಮತ್ತು ಸಂಜೆ 30 ಮಿಲಿ ಲೀಟರ್?ನಂತೆ ತೆಗೆದುಕೊಳ್ಳುವುದರಿಂದ ಅನೇಕ ವ್ಯಾಧಿಗಳು ದೂರವಾಗುತ್ತವೆ. ಇದೆ ರೀತಿ ಕಷಾಯ ಸಹ ತಯಾರಿಸಿ, ತೆಗೆದುಕೊಳ್ಳಬಹುದು. ಮಧುಮೇಹಿಗಳು ಜೇನುತುಪ್ಪದ ಬದಲು ಚಿಟಿಕೆ ಉಪ್ಪು, 1/2 ಚಮಚ ನಿಂಬೆಹಣ್ಣಿನ ರಸ ಸೇರಿಸಿ ಸೇವಿಸಬಹುದು. ಈ ಜ್ಯೂಸ್ ಮಧುಮೇಹ, ಅಧಿಕ ರಕ್ತದೊತ್ತಡ, ಮಲಬದ್ಧತೆ, ಜೀರ್ಣಕ್ರಿಯೆ ಸಮಸ್ಯೆಗಳಿಗೆ ರಾಮಬಾಣದಂತೆ ಕೆಲಸ ಮಾಡುತ್ತದೆ.




ಪುದಿನಾ ಚಹ: ಪುದೀನಾ ಎಲೆಗಳ ಜೊತೆಯಲ್ಲಿ ತುಳಸಿ ಎಲೆಗಳು, ಶುಂಠಿಯನ್ನು ಜಜ್ಜಿ ನೀರಿನೊಂದಿಗೆ ಸೇರಿಸಿ ಬಣ್ಣ ಬದಲಾಗುವವರೆಗೆ ಕುದಿಸಿ ರುಚಿಗೆ ಸ್ವಲ್ಪ ಜೇನು ತುಪ್ಪ ಹಾಕಿಕೊಂಡು ಕುಡಿದರೆ ಸಾಕಷ್ಟು ಆರಾಮದಾಯಕ ಅನುಭವ ಸಿಗುತ್ತದೆ. ಅದರಲ್ಲೂ ಶೀತದ ಸಮಸ್ಯೆ ಬಹಳ ಬೇಗನೆ ಬಗೆಹರಿಯುತ್ತದೆ. ಅದಲ್ಲದೆ, ಪುದಿನ ಎಲೆಗಳಲ್ಲಿ ಸಾಲಿಸಿಲಿಕ್ ಆಸಿಡ್ ಹೇರಳವಾಗಿರುವುದರಿಂದ , ವಿಟಮಿನ್ ಎ ಕೂಡಾ ಹೆಚ್ಚಿದೆ. ಇವೆರಡೂ ಮುಖದ ಮೊಡವೆ ಹಾಗೂ ಕಪ್ಪು ಕಲೆಗಳನ್ನು ತಡೆಗಟ್ಟಲು ನೆರವಾಗುತ್ತದೆ. ಇದರಲ್ಲಿರುವ ಮೆಂಥಾಲ್ ಹಾಗೂ ನೈಸರ್ಗಿಕ ಆಂಟಿ ಆಕ್ಸಿಡೆಂಟ್‌ಗಳು ಮುಖಕ್ಕೆ ನೈಸರ್ಗಿಕ ಕ್ಲೆನ್ಸರ್, ಟೋನರ್, ಮಾಯ್‌ಶ್ಚರೈಸರ್ ಆಗಿ ಕೆಲಸ ಮಾಡುವ ಕಾರಣ, ಮುಖದ ಚರ್ಮ ಆರೋಗ್ಯದಿಂದ ಕಂಗೊಳಿಸುತ್ತದೆ. ಸ್ತ್ರೀಯರ ಸೌಂದರ್ಯ ಹೆಚ್ಚಿಸುವ ಗುಣ ಹೊಂದಿರುವ ಪುದೀನಾ ಸೊಪ್ಪು ಅತ್ಯುತ್ತಮ ಸೌಂದರ್ಯವರ್ಧಕ. ಹಾಗಿದ್ರೆ ಮತ್ತೇಕೆ ತಡ, ಪುದೀನಾ ಸೊಪ್ಪಿಗೆ ಅಡುಗೆ ಮನೆಯಲ್ಲಿ ಕಾಯಂ ಸ್ಥಾನ ನೀಡೋಣವೇ.

## ಪದ ಬಂಧ

ಜ್ಯೋತಿ ರಾಜೇಶ್






### ಎಡದಿಂದ ಬಲಕ್ಕೆ

2. ಅಬ್ಬಬ್ಬಾ ಇವನೂ ಒಬ್ಬ ರಾಜನೇ.....(3)
5. ಈ ರೀತಿಯ 'ವೇಗದ ಓಟ'ದಲ್ಲಿ ನಾಗನಿಗೇನು ಕೆಲಸ..... (4)7. ಮಿಂಚು ಮೂಡಿದಾಗ ಮಾಡಿದ ಪಿತೂರಿಯೇ ಇದು(2)
8. ಈ ಒಳಾಂಗಣ ಆಟದಲ್ಲಿ ಯುದ್ಧವಿದ್ದರೂ ರಕ್ತಪಾತವಿಲ್ಲ...... (4)
9. ಮೈ ತುಂಬಾ ತೂತುಗಳಿರುವ ತಿನಿಸಿದು....(2)
11. ಇದು ವನದಲ್ಲಿ ಕುಳಿತು ಬರೆದ ಪದ್ಯ...... (3)
12. ಗಡಿಬಿಡಿಯಲ್ಲಿ ಕಂಡ ಎಲ್ಲೆ.....(2)
14. ಈ 'ಮೃಗಜಲ' ನೋಡಲು ನಾಚಿಕೆ ಏಕೆ......(4)
17. ಇದು ಕನ್ನಡದ 'ಎಂಡ್'....(2)
18. ಎಷ್ಟೇ ಮೇಲೆ ಹೋದರೂ, ಚಿಕ್ಕೋನಾಗೇ ಇರು.... ಅನ್ನೋ ನೀತಿ ಪಾಠ..... ಹೇಳಿದ್ದು ಇದೇನಾ?...(4)
19. ಉತ್ತರ ಕರ್ನಾಟಕದವರ ಪ್ರಸಿದ್ಧ ಅಡುಗೆಯೊಂದು ತಿರುಗು ಮುರುಗಾಗಿದೆ.....(3)

### ಮೇಲಿನಿಂದ ಕೆಳಕ್ಕೆ.....

1. ಮೊದಲಿಲ್ಲದ್ದನ್ನು ಹೀಗೆ ಹೇಳಿ (3)
2. ವಟವಟ ಅನ್ನುತ್ತಿರುವ ಈತ ಅಭಿನಯಿಸುವವ....(2)
3. ಇಲ್ಲೇನೂ ಇಲ್ಲ ಬರೀ ಖಾಲಿ..... (3)
4. ಮಿಂಚುತ್ತಿರುವ ಇದೂ ಒಂದು ಲೋಹ......(2)
6. ವಿಷಯಾಸಕ್ತನಾಗಿ, ಅದರಲ್ಲೇ ತಲ್ಲೀನನಾದವನನ್ನು ಹೀಗೆ ಕರೆಯಿರಿ..... (3)
7.ಈ 'ಜೊತೆಗಾರ' ಗಡಿಬಿಡಿಯಿಂದ ಹೊರಟಿದ್ದೆಲ್ಲಿಗೆ.(4)
8. ಈ ಪದ ನಿಮ್ಮ ಊಹೆಗೆ......
10. ಬಂಧಿಗಳನ್ನಿಡುವ ಗೃಹವಿದು...... (4)
13. ಮಧುರಾನುಭೂತಿ ನೀಡುವ ತಂಪಾದ ಮಾರುತ..... (3)
15. ಲಕಲಕ ಹೊಳೆಯುತ್ತಿರುವ 'ಅಗುಳಿ'ಯಿದು...(3)
16. ಯಾವ ಕಡೆಯಿಂದ ನೋಡಿದರೂ ಇದು ಗವಾಕ್ಷಿಯೇ...... (3)
17. "ಮಡಿಚಿದರೆ ಮೊಗ್ಗು, ಬಿಡಿಸಿದರೆ ಹೂವು" ಏನಿದು? (2)
18. ಈ ವಸ್ತು ಕೈಜಾರಿ ಬಿದ್ದರೆ ಪುಡಿಪುಡಿಯೇ.....(2)
14. ಗದ್ದೆಯ ಅಂಚಿಗಿರುವ ಸಣ್ಣ ದಿಬ್ಬಕ್ಕೆ ಹೀಗೊಂದು ಹೆಸರು.....(3)

# ತಮಿಳುನಾಡಿನ `ದಳಪತಿ' ಗೆ ರಾಜ್ಯಪಾಲರ ಕಿತಾಪತಿ...?



✍ ಹಿರಿಯೂರು ಪ್ರಕಾಶ್.

ರಾಜ್ಯಗಳಿಗೆ ಸಂವಿಧಾನದ ರಕ್ಷಣೆಯ ಹೊಣೆಹೊತ್ತು ನೇಮಕವಾದ ರಾಜ್ಯಪಾಲರು ನಿಷ್ಠರಾಗಿರಬೇಕಾದದ್ದು ಸಂವಿಧಾನಕ್ಕೋ ಅಥವಾ ತಮ್ಮನ್ನು ಆ ಹುದ್ದೆಗೆ ಆಯ್ಕೆ ಮಾಡಿದವರಿಗೋ ಎಂಬ ಜಿಜ್ಞಾಸೆ ಸ್ವಾತಂತ್ರ್ಯೋತ್ತರ ಭಾರತದ ರಾಜಕಾರಣದಲ್ಲಿ ಆಗಾಗ್ಗೆ ಪಕ್ಷಾತೀತವಾಗಿ ಕಾಡುತ್ತಲೇ ಬಂದಿದೆ.

ಸಧ್ಯ ತಮಿಳುನಾಡಿನ ವಿಧಾನಸಭಾ ಚುನಾವಣೆಯಲ್ಲಿ ಅತಿ ದೊಡ್ಡ ಪಕ್ಷವಾಗಿ ( 108) ಹೊರಹೊಮ್ಮಿದ ತಮಿಳಗವೆಟ್ರ ಕಳಗಂ ( ಟಿವಿಕೆ ) ಪಕ್ಷದ ಮುಖ್ಯಸ್ಥ ಸಿನಿಮಾ ಸ್ಟಾರ್ ವಿಜಯ್ ದಳಪತಿಯವರನ್ನು ಅಲ್ಲಿನ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಸರ್ಕಾರ ರಚನೆಗೆ ಆಹ್ವಾನಿಸದೇ ಸರಳ ಬಹುಮತ ಇಲ್ಲ ಎಂಬ ಕಾರಣಕ್ಕೆ ನಿರಾಕರಿಸಿರುವ ನಡೆ 1994 ರ ಎಸ್.ಆರ್ .ಬೊಮ್ಮಾಯಿ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿದ್ದ ತೀರ್ಪಿಗೆ ಬಹುಪಾಲು ವ್ಯತಿರಿಕ್ತವಾಗಿದೆ.

ಇಂದು ಎರಡನೇ ಬಾರಿ ರಾಜ್ಯಪಾಲರನ್ನು ಭೇಟಿ ಮಾಡಿದ ವಿಜಯ್ ಸರ್ಕಾರ ರಚನೆಗೆ ಹಕ್ಕು ಮಂಡನೆ ಮಾಡಿರುವುದನ್ನು ಬಹುಮತದ ಕೊರತೆಯ ಆಧಾರದಲ್ಲಿ ರಾಜ್ಯಪಾಲರು ನಿರಾಕರಿಸಿರುವುದು " ಸರ್ಕಾರಕ್ಕೆ ಬಹುಮತ ನಿರ್ಧಾರವಾಗಬೇಕಾಗಿರುವುದು ವಿಧಾನಸಭೆಯಲ್ಲೇ ವಿನಃ ರಾಜಭವನದಲ್ಲಿ ಅಲ್ಲ " ಎಂಬ ಕೋರ್ಟ್ ತೀರ್ಪನ್ನು ರಾಜ್ಯಪಾಲರು "ವಿವೇಚನೆ" ಎಂಬ ಜಾಣ ಗುರಾಣಿಯನ್ನು ಬಳಸಿ ಉದ್ದೇಶಪೂರ್ವಕವಾಗಿಯೇ ಬದಿಗೆ ತಳ್ಳಿ ಅಲ್ಲಿನ ರಾಜಕೀಯ ಅನಿಶ್ಚಿತತೆಗೆ ನಾಂದಿ ಹಾಡಿದ್ದಾರೆ.

ಸಧ್ಯದ ಪರಿಸ್ಥಿತಿಯಲ್ಲಿ 108 ಸ್ಥಾನಗಳನ್ನು ಗಳಿಸಿರುವ ಟಿವಿಕೆ ಅತಿದೊಡ್ಡ ಪಕ್ಷವಾಗಿದ್ದು ಅದರ ಸಂಖ್ಯೆ ಕಾಂಗ್ರೆಸ್ ಬೆಂಬಲದಿಂದ 113 ಆಗಿದ್ದು ಸರಳ ಬಹುಮತಕ್ಕೆ ಐದು ಸ್ಥಾನ ಕೊರತೆಯಿದೆ. ಈಗಾಗಲೇ , ಎಐಡಿಎಂಕೆಯ ಕೆಲ ಶಾಸಕರು ಅಥವಾ ಇನ್ನುಳಿದ ಕೆಲ ಸಣ್ಣಪುಟ್ಟ ಪಕ್ಷಗಳು ವಿಜಯ್ ಗೆ ಬೆಂಬಲ ನೀಡುವ ಬಗ್ಗೆ ಚಿಂತಿಸುತ್ತಿದ್ದಾರೆನ್ನುವ ಮಾಹಿತಿಯೂ ತಮಿಳುನಾಡಿನ ರಾಜಕೀಯ ಪಡಸಾಲೆಯಲ್ಲಿ ಹರಿದಾಡುತ್ತಿದೆ. ಆದರೆ ಒಂದೊಮ್ಮೆ " ಅಸಂಭವ" ಎಂದೇ ಪರಿಗಣಿಸಲಾದ ಬದ್ಧ ವೈರಿಗಳಾದ ಡಿಎಂಕೆ (59 ಸ್ಥಾನ) ಮತ್ತು ಎಐಡಿಎಂಕೆ ( 47 ಸ್ಥಾನ ) ಮೈತ್ರಿ ಮಾಡಿಕೊಂಡರೂ ಅವರಿಗಾದರೂ ಸರಳ ಬಹುಮತಕ್ಕಾಗಿ ಇಂದಿನ ಪರಿಸ್ಥಿತಿಯೇ ಎದುರಾಗಲಿದೆ. Of course, ಅದು ನಡೆಯದ ಘಟನೆ.

ವಸ್ತುಸ್ಥಿತಿ ಹೀಗಿರುವಾಗ ರಾಜ್ಯಪಾಲರ ಮುಂದೆ ಇರುವ ಏಕೈಕ ಆಯ್ಕೆಯೆಂದರೆ ಟಿವಿಕೆ ನಾಯಕ ವಿಜಯ್ ಗೆ ಸರ್ಕಾರ ರಚನೆಗೆ ಆಹ್ವಾನನೀಡಿ ವಿಧಾನಸಭೆಯಲ್ಲಿ ಅವರಿಗೆ ತಮ್ಮ ಬಹುಮತವನ್ನು ಸಾಬೀತು ಪಡಿಸಲು ಗಡುವು ನೀಡುವುದು. ಒಂದೊಮ್ಮೆ ಬಹುಮತ ಸಾಬೀತು ಮಾಡಲು ವಿಜಯ್ ವಿಫಲರಾದರೆ ಆಗ ರಾಜ್ಯಪಾಲರು ಆನಂತರದ ರಾಜಕೀಯ ಬೆಳವಣಿಗೆ ನೋಡಿಕೊಂಡು ತಮ್ಮ ವಿವೇಚನೆ ಬಳಸಿ ಅಸೆಂಬ್ಲಿಯನ್ನು ವಿಸರ್ಜಿಸುವುದೋ ಅಥವಾ ಇನ್ನಿತರ ಆಯ್ಕೆಗಳಲ್ಲಿ ಸಮಂಜಸವಾದದ್ದನ್ನು ನಿರ್ಧರಿಸಬಹುದಾಗಿದೆ.

ಆದರೆ ಅದನ್ನು ಬಿಟ್ಟು ವಿಜಯ್ ಗೆ ಸರಳ ಬಹುಮತವನ್ನು ತಮ್ಮೆದುರೇ ಸಾಕ್ಷೀಕರಿಸುವಂತೆ ಅಸಾಂವಿಧಾನಿಕ ಕಂಡೀಷನ್ ಹಾಕಿ ಅವರನ್ನು ಸರ್ಕಾರ ರಚನೆಗೆ ಆಹ್ವಾನಿಸದೇ ಇರುವುದು ರಾಷ್ಟ್ರದ ಸಂವಿಧಾನಕ್ಕೆ ಹಾಗೂ ಎಸ್.ಆರ್. ಬೊಮ್ಮಾಯಿ ಪ್ರಕರಣದಲ್ಲಿ ಶ್ರೇಷ್ಠ ನ್ಯಾಯಾಲಯ ನೀಡಿದ್ದ ತೀರ್ಪಿಗೆ ಪಕ್ಕಾ ವ್ಯತಿರಿಕ್ತವಾಗಿದೆ.

ಆಯ್ತು....ವಿಜಯ್ ರನ್ನು ಸರಳ ಬಹುಮತದ 118 ರ ಮ್ಯಾಜಿಕ್ ನಂಬರ್ ಇಲ್ಲ ಎಂದು ಆಹ್ವಾನಿಸದಿರುವ ರಾಜ್ಯಪಾಲರ ಮುಂದೆ ಇರುವ ಬೇರೆ ಆಯ್ಕೆಯಾದರೂ ಯಾವುದು? ಎಂಬುದೇ ಮಿಲಿಯನ್ ಡಾಲರ್ ಪ್ರಶ್ನೆ ! ಪ್ರಶ್ನೆಯೊಂದೇ ಅಲ್ಲ, ಅದು ತೀರ ಸಾಮಾನ್ಯ ರಾಜಕೀಯ ತಿಳಿವಳಿಕೆಯಿರುವ ಯಾರಿಗೇ ಆಗಲೀ ಕಾಡಬಹುದಾದ ಕಗ್ಗಂಟು !

ಸ್ಪಷ್ಟ ಬಹುಮತ ಇಲ್ಲದ ಸಂದರ್ಭದಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ ಪಕ್ಷಕ್ಕೆ, ಬೇರಾವುದೇ ಚುನಾವಣೋತ್ತರ ಮೈತ್ರಿಯ ಸನ್ನಿವೇಶಗಳ ತಲೆನೋವು ಇಲ್ಲದಿದ್ದರೆ ಸರ್ಕಾರ ರಚನೆಗೆ ಆಹ್ವಾನಿಸುವುದು ಸಂಪ್ರದಾಯ. ಇಲ್ಲಿ ಸಧ್ಯಕ್ಕೆ ಟಿವಿಕೆಯ ವಿಜಯ್ ಬಿಟ್ಟರೆ ಸರ್ಕಾರ ರಚನೆಯ ಹಕ್ಕನ್ನು ಮಂಡಿಸಲು ಯಾವ ಮೈತ್ರಿಕೂಟವಾಗಲೀ ಪಕ್ಷವಾಗಲೀ ಮುಂದೆ ಬಂದಿಲ್ಲ. ಹೀಗಿರುವಾಗ ಸಧ್ಯದ ರಾಜ್ಯಪಾಲರ ನಡೆ ಪ್ರಜಾಪ್ರಭುತ್ವದಲ್ಲಿ ಪ್ರಜೆಗಳ ತೀರ್ಪನ್ನೇ ಧಿಕ್ಕರಿಸುವಂತಿದೆ.




ಈ ಹಿಂದೆ 2018 ರ ಕರ್ನಾಟಕದ ಚುನಾವಣಾ ಫಲಿತಾಂಶ ಬಂದಾಗ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿಕೂಟದಲ್ಲಿ ಬಹುಮತದ 116 ಸ್ಥಾನಗಳಿದ್ದರೂ ರಾಜ್ಯಪಾಲ ವಜೂಭಾಯಿವಾಲ ಅತಿದೊಡ್ಡ ಪಕ್ಷವಾದ 104 ಸ್ಥಾನ ಗಳಿಸಿದ್ದ ಭಾಜಪವನ್ನು ಸರ್ಕಾರ ರಚನೆಗೆ ಆಹ್ವಾನಿಸಿ ವಿಧಾನಸಭೆಯಲ್ಲೆ ಬಹುಮತ ಸಾಬೀತಿಗೆ ಅವಕಾಶ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು. ಅಂದರೆ ಮೊದಲು ಹೆಚ್ಚುಸ್ಥಾನ ಗಳಿಸಿದ ಪಕ್ಷಕ್ಕೆ ಅವಕಾಶ ನೀಡಿ ಅದು ಬಹುಮತ ಪ್ರೂವ್ ಮಾಡಲು ವಿಫಲರಾದ ನಂತರ ಚುನಾವಣೋತ್ತರ ಮೈತ್ರಿಕೂಟಕ್ಕೆ ಆಹ್ವಾನ ನೀಡಿದ್ದು ಒಂದರ್ಥದಲ್ಲಿ ರಾಜ್ಯಪಾಲರ ವಿವೇಚನೆಯಡಿಯಲ್ಲಿಯೇ ಇತ್ತು ಎನ್ನಬಹುದು.

ವಾಸ್ತವ ವರ್ತಮಾನ

ಆದರೆ 2017 ರ ಚುನಾವಣೆಯಲ್ಲಿ 40 ಸದಸ್ಯರ ಬಲದ ಗೋವಾ ವಿಧಾನಸಭೆಯಲ್ಲಿ ಸರಳ ಬಹುಮತಕ್ಕೆ ಬೇಕಾದ 21 ಸ್ಥಾನವನ್ನು ಯಾರೂ ಪಡೆದಿರಲಿಲ್ಲ. ಆಗ ಹೆಚ್ಚು ಸ್ಥಾನ ಪಡೆದ ( 17 ) ಕಾಂಗ್ರೆಸ್ ಗೆ ಸರ್ಕಾರ ರಚಿಸಲು ಆಹ್ವಾನಿಸದೇ 13 ಸ್ಥಾನ ಪಡೆದ ಭಾಜಪವನ್ನು ಮೈತ್ರಿಕೂಟದ ಆಧಾರದಲ್ಲಿ ರಾಜ್ಯಪಾಲರು ಆಹ್ವಾನಿಸಿದ್ದರು. ಹಾಗೆಯೇ ಅದೇ ವರ್ಷ ಮಣಿಪುರದಲ್ಲೂ ಅತಿಹೆಚ್ಚು ಸ್ಥಾನ ಗಳಿಸಿದ (28 ) ಕಾಂಗ್ರೆಸ್ ಗೆ ಬದಲು ಕಡಿಮೆ ಸ್ಥಾನ ( 21 ) ಗಳಿಸಿದ ಭಾಜಪವನ್ನೇ ಸರ್ಕಾರ ರಚನೆಗೆ ಆಹ್ವಾನಿಸಿದ್ದರು. ಅದಕ್ಕೂ ಮೈತ್ರಿಕೂಟದ ಬೆಂಬಲವೇ ಕಾರಣವಾಗಿತ್ತು

ಮೇಲಿನ ಸಂದರ್ಭಗಳಲ್ಲಿ ರಾಜ್ಯಪಾಲರು ತಮ್ಮ" ವಿವೇಚನಾ ಕೋಟಾ " ವನ್ನು ಹೇಗೆ ಬೇಕಾದರೂ ಬಳಸಬಹುದೆಂಬುದು ಸಾಬೀತಾಯಿತು. ಅಂದರೆ ಅತಿಹೆಚ್ಚು ಸ್ಥಾನ ಗಳಿಸಿದ ಪಕ್ಷವನ್ನಾದರೂ ಸರ್ಕಾರ ರಚನೆಗೆ ಕರೆಯಬಹುದು ಅಥವಾ ಮೈತ್ರಿಕೂಟದ ಪಕ್ಷಗಳನ್ನಾದರೂ ಆಹ್ವಾನಿಸಬಹುದು. ಇವೆಲ್ಲವೂ ಪಕ್ಕಾ ರಾಜಕಾರಣ , ರಾಜಕೀಯ ವಾತಾವಾರಣ, ಅವರ ಮಾತೃ ಪಕ್ಷ ಅಥವಾ ಆಯ್ಕೆ ಮಾಡಿದವರ ಅನುಕೂಲಕ್ಕೆ ತಕ್ಕಂತೆ ಹೆಜ್ಜೆಇಡಲೇ ಬೇಕಾದ ನಿರ್ಧಾರ....ಈ ಎಲ್ಲಾ " ವಿವೇಚನೆ" ಗಳ ಮೇಲೆ ಆಧಾರವಾಗಿರಬಲ್ಲದು.

ಆದರೆ ಮತ ನೀಡಿದ ಪ್ರಜೆಗಳಿಗೆ ಅಥವಾ ತೀರ್ಪು ನೀಡಿದ ನ್ಯಾಯಾಲಯಕ್ಕೆ ಮುಖ್ಯವಾಗಿ ಬೇಕಾಗಿರುವುದು ಯಾವ ಪಕ್ಷ ಸರ್ಕಾರ ನಡೆಸುತ್ತದೆ ಎಂಬುದಕ್ಕಿಂತ ಅಸೆಂಬ್ಲಿಯಲ್ಲಿ ಯಾರು ಬಹುಮತ ಸಾಬೀತುಮಾಡುತ್ತಾರೆ ಎಂಬುದು. ಹೀಗಾಗಿ ಒಂದು ಪಕ್ಷವನ್ನೋ ಅಥವಾ ಮೈತ್ರಿಕೂಟವನ್ನೋ ಸರ್ಕಾರ ರಚನೆಗೆ ತಡಮಾಡದೇ ಆಹ್ವಾನಿಸುವುದಷ್ಟೇ ರಾಜ್ಯಪಾಲರ ಸಾಂವಿಧಾನಿಕ ಕರ್ತವ್ಯವಾಗಬೇಕಿತ್ತು.



ಬಹುಮುಖ್ಯವಾಗಿ , ಬಹುಮತ ಸಾಬೀತು ಪಡಿಸುವ ಪ್ರಕ್ರಿಯೆ ಜರುಗಬೇಕಾದದ್ದು ವಿಧಾನಸಭೆಯ ಅಂಗಳದಲ್ಲೇ ವಿನಃ ರಾಜ್ಯಪಾಲರ ಮೂಗಿನ ನೇರಕ್ಕಲ್ಲ. ಸಧ್ಯದ ತಮಿಳುನಾಡಿನ ಸರ್ಕಾರ ರಚನೆಯ ಕಗ್ಗಂಟಿನ ವಾತಾವರಣದಲ್ಲಿ ಟಿವಿಕೆ ಮುಖ್ಯಸ್ಥ ವಿಜಯ್ ರನ್ನು ಆಹ್ವಾನಿಸುವುದನ್ನು ಬಿಟ್ಟರೆ ರಾಜ್ಯಪಾಲರಿಗೆ ಬೇರೆ ಆಯ್ಕೆ ಇಲ್ಲ.

ಇವೆಲ್ಲಾ ಗೊತ್ತಿದ್ದರೂ ಅಲ್ಲಿನ ರಾಜ್ಯಪಾಲರೇಕೆ ಹೀಗೆ ವರ್ತಿಸುತ್ತಾರೆಂಬ ಅನುಮಾನಗಳ ಸುತ್ತ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನ ನೀಡಿದ ತೀರ್ಪಿಗೆ ಗಂಡಾಂತರದ ಹುತ್ತ ಬೆಳೆಯುತ್ತಲೇ ಹೋಗುತ್ತದೆ .

**ಮರೆಯುವ ಮುನ್ನ:** ಹಾಗೇ ಸುಮ್ಮನೇ ಯೋಚಿಸಿ ! ಒಂದೊಮ್ಮೆ ವಿಜಯ್ ಗೆ ಸರಳ ಬಹುಮತ ನಿರೂಪಿಸಲು ಇನ್ನೂ 5 ಸ್ಥಾನಗಳ ಕೊರತೆಯಿದೆಯೆಂದು ರಾಜ್ಯಪಾಲರೇ ನಿರ್ಧರಿಸಿ ವಿಧಾನಸಭೆಯನ್ನು ವಿಸರ್ಜಿಸಿ ರಾಜ್ಯವನ್ನು ಮತ್ತೆ ಚುನಾವಣೆಯ ಪೆಡಂಭೂತಕ್ಕೆ ತಳ್ಳಿದರು ಎಂದಿಟ್ಟುಕೊಳ್ಳೋಣ. ಆದರೆ ಉಳಿದ ಸಣ್ಣಪುಟ್ಟ ಪಕ್ಷಗಳ ಶಾಸಕರು ಅಥವಾ ಎಐಡಿಎಂಕೆಯ ಕೆಲ ಶಾಸಕರು ವಿಜಯ್ ಗೆ ಬೆಂಬಲ ಸೂಚಿಸುವ ನಿರ್ಧಾರ ಮಾಡಿದಲ್ಲಿ ಆಗ ಅನಗತ್ಯವಾಗಿ ಮತ್ತೊಂದು ಚುನಾವಣೆಯನ್ನು ರಾಜ್ಯದ ಜನರ ಮೇಲೆ ಹೇರಿದ ಅನಾಹುತಕ್ಕೆ ರಾಜ್ಯಪಾಲರ ವಿವೇಚನಾರಹಿತ ಮತ್ತು ಅಸಾಂವಿಧಾನಿಕ ನಡೆಯೂ ನೇರವಾಗಿ ಕಾರಣವಾಗುವುದಿಲ್ಲವೇ ? ಅದು ಜನತಂತ್ರಕ್ಕೆ ಎಸಗಿದ ಧ್ರೋಹವಾದಂತಲ್ಲವೇ..? ಒಬ್ಬ ವ್ಯಕ್ತಿಯ ಮೂಗಿನ ನೇರದ ವಿವೇಚನೆಗೆ ಇಡೀ ರಾಜ್ಯದ ಆರ್ಥಿಕ ಮತ್ತು ರಾಜಕೀಯ ಚಿತ್ರಣವೇ ಬಲಿಯಾಗಬೇಕೇ....? ಎಲ್ಲಕ್ಕಿಂತ ಮಿಗಿಲಾಗಿ ಮೈತ್ರಿಕೂಟದ ಪ್ರಸ್ತಾಪವೇ ಇರದ , ಬೇರೇ ಆಯ್ಕೆಗಳೇ ಇರದ ಹಾಗೂ ಅತಿಹೆಚ್ಚು ಸ್ಥಾನ ಗಳಿಸಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಟಿವಿಕೆಯ ವಿಜಯ್ ದಳಪತಿಗೆ ಸರ್ಕಾರ ರಚನೆಗೆ ಆಹ್ವಾನ ಕೊಡದಿರುವ ರಾಜ್ಯಪಾಲರ ವಿವೇಚನೆಯ (?) ಹಿಂದಿರಬಹುದಾದ ಅಸಲಿಯತ್ತಾದರೂ ಏನು ಎಂಬುದೇ ಬಹುದೊಡ್ಡ ಪ್ರಶ್ನೆಯಾಗಿದೆ. ಇವೆಲ್ಲಾ ನೋಡಿದಾಗ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಗೆ, ಸಂವಿಧಾನ ರಕ್ಷಣೆಗೆ ರಾಜ್ಯಪಾಲರ ಹುದ್ದೆಯ ಅನಿವಾರ್ಯತೆ ನಿಜಕ್ಕೂ ಇದೆಯೇ ಎಂಬ ಪ್ರಶ್ನೆ ಪಕ್ಷಾತೀತವಾಗಿ ಎಲ್ಲರಲ್ಲೂ ಆಗಾಗ್ಗೆ ಕಾಡುತ್ತಲೇ ಇರುತ್ತದೆ. ವಿಪರ್ಯಾಸವೆಂದರೆ ಇಂತಹ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕಾದ ಅಧಿಕಾರದಲ್ಲಿರುವ ರಾಜಕೀಯ ಪಕ್ಷಗಳೇ ತಮ್ಮ ತಮ್ಮ ಅನುಕೂಲಗಳಿಗಾಗಿ ಅದನ್ನು ಜೀವಂತವಾಗಿಟ್ಟು ಸಂವಿಧಾನಕ್ಕೇ ಪರೋಕ್ಷವಾಗಿ ಉಳಿಪೆಟ್ಟು ಕೊಡುತ್ತಲೇ ಬಂದಿರುವುದು..!!

ಒಟ್ಟಾರೆಯಾಗಿ ಜನತಂತ್ರದ ಬೇರುಗಳು ಹಾಗೂ ಸಂವಿಧಾನದ ಆಶಯಗಳು ಗಟ್ಟಿಯಾಗಿ ಉಳಿಯಲಿ ಎಂಬುದಷ್ಟೇ ನಮ್ಮಂತಹ ಜನಸಾಮಾನ್ಯರ ಆಶಯ .

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,